03 September 2026 Thursday
SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಗರ್ಭ ಗುಡಿಯ ಬಾಗಿಲು ಚಿಕ್ಕದಾಗಿಟ್ಟಿರುತ್ತಾರೆ, ಕಾರಣ ಭಗವಂತನಿಗೆ ಬಾಗಿ ನಮಿಸುವ ಮೊದಲೇ ತಪ್ಪುಗಳನ್ನು ಒಪ್ಪಿಕೊಂಡು ತಲೆ ತಗ್ಗಿಸಿ ಬರಲೆಂದು!

-ಸ್ನೇಹಾ ಆನಂದ್

info.varthaman@gmail.com



ಮೈಸೂರು ದಸರಾ ಗಜಪಡೆಗೆ ಸಿಸಿಟಿವಿ ಕಣ್ಗಾವಲು — ಪುಟ ಸಂ. 2



ವಿಬಿ ಜಿ ರಾಮ್ ಜಿ ಯೋಜನೆ ಸದುಪಯೋಗ ಪಡಿಸಿಕೊಳ್ಳಿ — ಪುಟ ಸಂ. 3



ಬರಪೀಡಿತ ಪ್ರದೇಶಗಳಿಗೆ ಡಿಸಿಎಂ ಜಿ.ಪರಮೇಶ್ವರ್ ಭೇಟಿ — ಪುಟ ಸಂ. 4

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 260 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

# ರಾಗಾ ಮುಗಿಸಲು ಬಿಜೆಪಿ ಸಂಚು

## ಕೇಂದ್ರ ಸರ್ಕಾರದ ವಿರುದ್ಧ ಮಾಜಿ ಸಿಎಂ ಸಿದ್ದರಾಮಯ್ಯ ವಾಗ್ದಾಳಿ

**ಬೆಂಗಳೂರು:** ರಾಜಕೀಯವಾಗಿ ರಾಹುಲ್ ಗಾಂಧಿ ಅವರನ್ನು ಮುಗಿಸಬೇಕು ಎಂದು ಕೇಂದ್ರ ಸರ್ಕಾರ ಹಾಗೂ ಬಿಜೆಪಿ ಸಂಚು ರೂಪಿಸಿವೆ ಎಂದು ಮಾಜಿ ಸಿಎಂ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದರು.

ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ವಿರುದ್ಧ ಶುದ್ಧೀಕರಣ ಹೇಳಿಕೆ ಸಂಬಂಧ ಎಸ್ಸಿ–ಎಸ್ಟಿ ಕಾಯ್ದೆ ಅಡಿಯಲ್ಲಿ ಎಫ್‌ಐಆರ್ ದಾಖಲಿಸಿರುವುದನ್ನು ಖಂಡಿಸಿ ಬುಧವಾರ ನಡೆದ ಪ್ರತಿಭಟನೆಯಲ್ಲಿ ಸಿದ್ದರಾಮಯ್ಯ ಮಾತನಾಡಿದರು.

ಮಲ್ಲಿಕಾರ್ಜುನ ಖರ್ಗೆ ಭಾಷಣ ಮಾಡಿದ್ದ ಜಾಗವನ್ನು ಉತ್ತರಖಂಡದಲ್ಲಿ ಬಿಜೆಪಿ ಶುದ್ಧೀಕರಣ ಮಾಡಿದೆ. ಸಂವಿಧಾನ ಅಸ್ಪೃಶ್ಯತೆಯನ್ನು ರದ್ದು ಮಾಡಿದೆ. ಆದರೆ ದೇಶಕ್ಕೆ ಸ್ವಾತಂತ್ರ್ಯ ಬಂದು 80 ವರ್ಷಗಳಾಗುತ್ತಿದ್ದರೂ ಈ ರೀತಿ ಮಾಡಿರುವುದು ಸಂವಿಧಾನದ ಆಶಯ ವಿರೋಧ ಮಾಡಿದಂತೆ. ಇದು ಮಲ್ಲಿಕಾರ್ಜುನ ಖರ್ಗೆ ಅವರಿಗೆ ಮಾತ್ರ ಮಾಡಿದ ಅಪಮಾನವಲ್ಲ. ದೇಶದ ದಲಿತ ಸಮುದಾಯಕ್ಕೆ ಮಾಡಿದ ಅಪಮಾನ. ರಾಹುಲ್ ಗಾಂಧಿ ಏನು ತಪ್ಪು ಮಾಡಿದ್ದಾರೆ? ಎಂದು ಪ್ರಶ್ನಿಸಿದರು.

ರಾಹುಲ್ ಗಾಂಧಿ ಅವರ ಬಾಯಿ ಮುಚ್ಚಿಸಲು ಹೀಗೆ ಮಾಡಿದ್ದಾರೆ. ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ಹೇಗಾದರೂ ಮಾಡಿ ರಾಹುಲ್ ಗಾಂಧಿ ಅವರನ್ನ ರಾಜಕೀಯವಾಗಿ ಮುಗಿಸಬೇಕೆಂದು ಸಂಚು ಮಾಡಿದೆ. ಈ ಹಿಂದೆಯೂ ಲೋಕಸಭೆಯಲ್ಲಿ ಕೇಂದ್ರ ಸರ್ಕಾರವನ್ನು ಟೀಕಿಸಿದ್ದಾಗ ಲೋಕಸಭೆಗೆ ರಾಹುಲ್ ಗಾಂಧಿ ಬರದಂತೆ ಮಾಡಲು ಅವರ ಸದಸ್ಯತ್ವವನ್ನೇ ರದ್ದು ಮಾಡಿದ್ದರು. ಸುಪ್ರೀಂ ಕೋರ್ಟ್‌ನಲ್ಲಿ ರಾಹುಲ್ ಗಾಂಧಿ ಅವರು ಸದಸ್ಯತ್ವ ವಾಪಸ್ ಪಡೆದುಕೊಳ್ಳಬೇಕಾಯಿತು. ಇಂತಹ ಕಾನೂನು ಬಾಹಿರ ಕ್ರಮವನ್ನ ಕೇಂದ್ರ ಸರ್ಕಾರ ಮಾಡುತ್ತಿದೆ ಎಂದು ವಾಗ್ದಾಳಿ ನಡೆಸಿದರು.

ರಾಹುಲ್ ಗಾಂಧಿ ತಪ್ಪನ್ನು ಪ್ರಶ್ನೆ ಮಾಡಿದ್ದಾರೆ. ಕಾನೂನಿನ ಪ್ರಕಾರ ಯಾರು ಶುದ್ಧೀಕರಣ ಮಾಡಿದ್ದಾರೋ ಅವರ ವಿರುದ್ಧ ಎಸ್ಸಿ–ಎಸ್ಟಿ ಕಾಯ್ದೆ ಅಡಿಯಲ್ಲಿ ಕೇಸ್ ದಾಖಲಿಸಬೇಕು. ರಾಹುಲ್ ಗಾಂಧಿ ಸಂವಿಧಾನದ ಪರ ಇರುವವರು, ಅಸ್ಪೃಶ್ಯತೆಯ ವಿರುದ್ಧ ಇರುವವರು ಎಂದು ಹೇಳಿದರು.



### ಬಿಜೆಪಿಗೆ ಹೆದರಲ್ಲ: ಡಿಕೆಶಿ

**ಬೆಂಗಳೂರು:** ರಾಹುಲ್ ಗಾಂಧಿ ಹುಟ್ಟು ಹೋರಾಟಗಾರ. ಹೋರಾಟಗಾರನಾಗಿ ಬದುಕುತ್ತಿದ್ದು, ಹೋರಾಟಗಾರನಾಗಿಯೇ ಸಾಯುತ್ತಾರೆ. ಇಂತಹ ನೂರು ಕೇಸ್ ದಾಖಲಿಸಿದರೂ ರಾಹುಲ್ ಗಾಂಧಿ ಹೆದರುವುದಿಲ್ಲ ಎಂದು ಸಿಎಂ ಡಿ.ಕೆ ಶಿವಕುಮಾರ್ ತಿರುಗೇಟು ನೀಡಿದರು.

ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ ವಿರುದ್ಧ ಉತ್ತರಖಂಡದಲ್ಲಿ ದುರುದ್ದೇಶಪೂರಿತ ಎಫ್‌ಐಆರ್ ದಾಖಲಿಸಿರುವುದನ್ನು ಖಂಡಿಸಿ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ವತಿಯಿಂದ ಫ್ರೀಡಂ ಪಾರ್ಕ್‌ನಲ್ಲಿ ಬುಧವಾರ ನಡೆದ ಪ್ರತಿಭಟನೆಯಲ್ಲಿ ಸಿಎಂ ಮಾತನಾಡಿದರು.

ಈ ದೇಶ ಎತ್ತ ಸಾಗುತ್ತಿದೆ ಎಂದು ಜನರಿಗೆ ಮನದಟ್ಟು ಮಾಡಿಕೊಡುವುದು ನಮ್ಮ ಕರ್ತವ್ಯ. ನಾವು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ನಾವು ಬದುಕುತ್ತಿದ್ದೇವೆ. ಈ ದೇಶಕ್ಕೆ ಯಾರಿಂದ, ಯಾರಿಗಾಗಿ ಸ್ವಾತಂತ್ರ್ಯ

ಪುಟ 2ಕ್ಕೆ

# ಕನ್ನಾಳಿ ಕಳ್ಳ: ನಾನು ಅಮಾಯಕ!

## ಸಿಐಡಿ ತನಿಖೆಯಲ್ಲಿ ಗ್ಯಾನೇಂದ್ರನ ಕಥಾಮಂಜರಿ

**ಬೆಂಗಳೂರು:** ಕರ್ನಾಟಕ ಲೋಕಸೇವಾ ಆಯೋಗದ ನೇಮಕಾತಿ ಹಗರಣದ ತನಿಖೆ ಬಗೆದಷ್ಟು ಆಳಕ್ಕೆ ಹೋಗುತ್ತಿದೆ. ಐಎಎಸ್ ಅಧಿಕಾರಿ ಗ್ಯಾನೇಂದ್ರ ಕುಮಾರ್ ಹೇಳಿಕೆಗಳು ಮಹತ್ವ ಪಡೆದುಕೊಂಡಿವೆ.

6 ಮಾದರಿ ಪ್ರಶ್ನೆಪತ್ರಿಕೆಗಳನ್ನು ಮನೆಗೆ ತೆಗೆದುಕೊಂಡು ಹೋಗಿ ಪರಿಶೀಲನೆ ನಡೆಸುತ್ತಿದ್ದೆ. ಪ್ರಶ್ನೆಪತ್ರಿಕೆಗಳು ಪ್ರಿಂಟ್ ಆಗುವ ಮುನ್ನವೇ ಅವುಗಳನ್ನ ಮನೆಯಲ್ಲಿ ಪರಿಶೀಲನೆ ಮಾಡುತ್ತಿದ್ದೆ. ಈ ಮೂಲಕ ಕರ್ತವ್ಯ ಲೋಪವಾಗಿದೆ ಎಂದು ತಪ್ಪೊಪ್ಪಿಕೊಂಡಿರುವುದಾಗಿ ಸಿಐಡಿ ಮೂಲಗಳು ತಿಳಿಸಿವೆ.

ಪ್ರಶ್ನೆಪತ್ರಿಕೆ ಮನೆಗೆ ತೆಗೆದುಕೊಂಡು ಹೋಗಿದ್ದ ಸಂದರ್ಭದಲ್ಲಿ ಮಧ್ಯವರ್ತಿ ಬಸವರಾಜ್ ಕನ್ನಾಳಿ ಪದೇಪದೇ ಮನೆಗೆ ಬರುತ್ತಿದ್ದ. ತಮಗೆ ಅರಿವಿಲ್ಲದಂತೆ ಬಸವರಾಜ್ ಪ್ರಶ್ನೆಪತ್ರಿಕೆಯಲ್ಲಿದ್ದ ಮಾಹಿತಿಯನ್ನು ಕಳುವು ಮಾಡಿದ್ದಾನೆ. ಈ ಬಗ್ಗೆ ತಾನು ಸರಿಯಾಗಿ ಗಮನ ಹರಿಸಿರಲಿಲ್ಲ. ಬಸವರಾಜ್ ಪ್ರಶ್ನೆಪತ್ರಿಕೆಯನ್ನ ಕಳ್ಳತನ ಮಾಡಿದ್ದಾನೆ ಎಂಬುದು ಈಗ ಗೊತ್ತಾಗಿದೆ ಎಂದು ಗ್ಯಾನೇಂದ್ರ ಹೇಳಿಕೆ ನೀಡಿದ್ದಾರೆ ಎಂದು ತಿಳಿದುಬಂದಿದೆ.



### 40ರಿಂದ 80 ಲಕ್ಷ ರೇಟ್ ಫಿಕ್

ಪಶುವೈದ್ಯರ ಅಕ್ರಮ ನೇಮಕಾತಿಗೆ ಒಬ್ಬೊಬ್ಬ ಅಭ್ಯರ್ಥಿಯಿಂದ ವಿಭಿನ್ನ ಮೊತ್ತದ ಹಣ ಪಡೆಯಲಾಗಿತ್ತು ಎಂಬ ಮಾಹಿತಿ ಹೊರಬಿದ್ದಿದೆ. ಕೆಲವು ಅಭ್ಯರ್ಥಿಗಳು 80 ಲಕ್ಷ ರೂ. ನೀಡಿದ್ದರು. ಇನ್ನೂ ಕೆಲವರು ಸುಮಾರು 40 ಲಕ್ಷ ರೂಪಾಯಿ ವರೆಗೆ ಹಣ ನೀಡಿರುವ ಬಗ್ಗೆ ಹೇಳಿಕೆ ನೀಡಿದ್ದಾರೆ. ಇವರಲ್ಲಿ ಕೆಲವರು ಮುಂಗಡ ಹಣ ನೀಡಿದ್ದರೆ, ಮತ್ತಷ್ಟು ಅಭ್ಯರ್ಥಿಗಳು ಸಂಪೂರ್ಣ ಹಣ ಪಾವತಿಸಿರುವ ಬಗ್ಗೆ ಮಾಹಿತಿ ನೀಡಿದ್ದಾರೆ

## ಮಾಫಿ ಸಾಕ್ಷಿ: ದಾಖಲು ಮುಂದೂಡಿಕೆ

**ಬೆಂಗಳೂರು:** ರೇಣುಕಾಸ್ವಾಮಿ ಕೊಲೆ ಪ್ರಕರಣ ಸಂಬಂಧ ಮಾಫಿ ಸಾಕ್ಷಿಯಾಗಿ ಪರಿಗಣಿಸಿರುವ 14ನೇ ಆರೋಪಿ ಪ್ರದೋಷ್ ಹೇಳಿಕೆ ದಾಖಲಿಸುವ ಪ್ರಕ್ರಿಯೆಯನ್ನು 59ನೇ ಸಿಸಿಹೆಚ್ ಕೋರ್ಟ್ ಮುಂದೂಡಿದೆ.

ಹೈಕೋರ್ಟ್‌ನಲ್ಲಿ ಪ್ರಕರಣಕ್ಕೆ ಸಂಬಂಧಿಸಿದಂತೆ ಆದೇಶ ಇನ್ನೂ ಹೊರಬಾರದ ಹಿನ್ನೆಲೆಯಲ್ಲಿ ವಿಚಾರಣೆಗೆ ಹೆಚ್ಚಿನ ಸಮಯ ನೀಡುವಂತೆ ವಿಶೇಷ ಸರ್ಕಾರಿ ಅಭಿಯೋಜಕ ಪ್ರಸನ್ನಕುಮಾರ್ ನ್ಯಾಯಾಲಯಕ್ಕೆ ಮನವಿ ಮಾಡಿದರು. ಎಸ್‌ಪಿಪಿ ಮನವಿ ಪರಿಗಣಿಸಿದ ನ್ಯಾಯಾಲಯ, ಹೇಳಿಕೆ ದಾಖಲಿಸುವ ಪ್ರಕ್ರಿಯೆಯನ್ನು ಸೋಮವಾರಕ್ಕೆ ಮುಂದೂಡಿದೆ.



ಬುಧವಾರ ಎ14 ಆರೋಪಿ ಪ್ರದೋಷ್‌ನನ್ನು ಜೈಲು ಅಧಿಕಾರಿಗಳು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದರು. ವಿಚಾರಣೆ ಮುಂದೂಡಿಕೆಯಾದ ಹಿನ್ನೆಲೆಯಲ್ಲಿ ಪೊಲೀಸರು ಪ್ರದೋಷ್‌ನನ್ನು ಮತ್ತೆ ಜೈಲಿಗೆ ಕಳುಹಿಸಿದ್ದಾರೆ.

## ಅಯೋಧ್ಯೆ ಟ್ರಸ್ಟ್ ಸಿಇಒ ಆಗಿ ಜೀತೇಂದ್ರ ನೇಮಕ

**ಲಕ್ನೋ:** ಅಯೋಧ್ಯೆ ಶ್ರೀರಾಮ ಜನ್ಮಭೂಮಿ ತೀರ್ಥಕ್ಷೇತ್ರ ಟ್ರಸ್ಟ್ ಸಿಇಓ ಆಗಿ ನಿವೃತ್ತ ಏರ್ ಮಾರ್ಷಲ್ ಜೀತೇಂದ್ರ ಮಿಶ್ರಾ ಅವರನ್ನು ನೇಮಕ ಮಾಡಲಾಗಿದೆ. ಜೀತೇಂದ್ರ ಮಿಶ್ರಾ ಅವರು ಆಪರೇಷನ್ ಸಿಂಧೂರದ ಸಮಯದಲ್ಲಿ ಪಶ್ಚಿಮ ವಾಯು ಕಮಾಂಡ್ ಮುಖ್ಯಸ್ಥರಾಗಿದ್ದರು. ಅಲ್ಲದೆ, ಅಯೋಧ್ಯೆ ತೀರ್ಥಕ್ಷೇತ್ರ ಟ್ರಸ್ಟ್ ಗೆ



ಮೂವರು ಹೊಸ ಟ್ರಸ್ಟಿಗಳನ್ನು ನೇಮಕ ಮಾಡಿದೆ. ದೆಹಲಿ ಮೂಲದ ಮಹೇಶ್ ಭಾಗ್ಚಂದ್ಕ, ಅಯೋಧ್ಯೆ

ಪುಟ 2ಕ್ಕೆ

## ಕಾಂಗ್ರೆಸ್ ಆಕ್ರೋಶ ಯಾತ್ರೆ: ತಿರುಗೇಟು ನೀಡಲು ಸಜ್ಜು

**ಬೆಂಗಳೂರು:** ರಾಜ್ಯ ಬಿಜೆಪಿಯ ಬಳ್ಳಾರಿ ಪಾದಯಾತ್ರೆಗೆ ಪ್ರತಿಯಾಗಿ ಜನಾಂದೋಲನ ಆಕ್ರೋಶ ಯಾತ್ರೆ ನಡೆಸಲು ಕಾಂಗ್ರೆಸ್ ಸಿದ್ಧತೆ ನಡೆಸಿದೆ. ಈ ಮೂಲಕ ಬಳ್ಳಾರಿಯಲ್ಲಿ ಮತ್ತೊಂದು ಹೈವೋಲ್ಟೇಜ್ ರಾಜಕೀಯ ಯಾತ್ರೆಗೆ ವೇದಿಕೆ ಸಿದ್ಧಗೊಂಡಿದೆ.

ಬಿಜೆಪಿಯ ಬಳ್ಳಾರಿ ಚಲೋ ಪಾದಯಾತ್ರೆಗೆ ತಿರುಗೇಟು ನೀಡಲು ಕಾಂಗ್ರೆಸ್ ನಾಯಕರು ಪ್ರತಿತಂತ್ರ ರೂಪಿಸಿದ್ದಾರೆ. ಬಿಜೆಪಿ ನಾಯಕರ ಆರೋಪಗಳಿಗೆ ನೇರವಾಗಿ ಜನರ ಮುಂದೆಯೇ ಉತ್ತರ ನೀಡಲು ನಿರ್ಧರಿಸಿರುವ ಕಾಂಗ್ರೆಸ್, ಬಿಜೆಪಿ ಪಾದಯಾತ್ರೆ ಸಾಗಿದ ಮಾರ್ಗದಲ್ಲೇ ಜನಾಂದೋಲನ ಆಕ್ರೋಶ ಯಾತ್ರೆ ಸಂಘಟಿಸಲು ಮುಂದಾಗಿದೆ.

## 2028ಕ್ಕೂ ಡಿಕೆಶಿ ಸಿಎಂ



**ಗದಗ:** ಲಕ್ಷ್ಮೇಶ್ವರ ತಾಲೂಕಿನ ಮುಕ್ತಿ ಮಂದಿರದ ಲಿಂಗೈಕ್ಯ ವೀರಗಂಗಾಧರ ಸ್ವಾಮಿಗಳ ಗದ್ದುಗೆ ದರ್ಶನ ಪಡೆದ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಪೂಜೆ ಸಲ್ಲಿಸಿದರು.

ಪೂಜೆ ಬಳಿಕ ಮಾಧ್ಯಮಗಳ ಜೊತೆ ಮಾತನಾಡಿದ ಅಜ್ಜಯ್ಯ, 2028ರಿಂದ ಮುಂದಿನ 8–10 ವರ್ಷಗಳ ಕಾಲ ಡಿಕೆಶಿ ಮುಖ್ಯಮಂತ್ರಿಯಾಗಿ ಮುಂದುವರೆಯುತ್ತಾರೆ ಎಂದು ನೊಣವಿನಕೆರೆ ಅಜ್ಜಯ್ಯ ತಿಳಿಸಿದ್ದಾರೆಂದು ಭವಿಷ್ಯ ನುಡಿದರು.

ಡಿಕೆ ಶಿವಕುಮಾರ್ ಆರೋಗ್ಯ, ಆಯುಷ್ಯ ಹಾಗೂ ಮುಂದಿನ ಅಭಿವೃದ್ಧಿಗೆ ಸಂಕಲ್ಪ ಮಾಡಿದ್ದಾರೆ. ಅಷ್ಟೋತ್ತರ ಪೂಜೆ, ಆರೋಗ್ಯ ಭಾಗ್ಯದ ಸಂಕಲ್ಪ ಮಾಡಿದ್ದಾರೆ ಎಂದರು.

## ಲಂಚ ಪ್ರಕರಣ: ಇಬ್ಬರು ಸಚಿವರ ರಾಜೀನಾಮೆಗೆ ಅಶೋಕ್ ಆಗ್ರಹ



**ಬೆಂಗಳೂರು:** ಕೆಆರ್‌ಐಡಿಎಲ್‌ನಲ್ಲಿ 7 ಪರ್ಸೆಂಟ್ ಲಂಚ ಪಡೆಯುತ್ತಿದ್ದ ಇಬ್ಬರು ಸಚಿವರನ್ನು ಕೂಡಲೇ ವಜಾ ಮಾಡಬೇಕು. ಪ್ರಕರಣದ ತನಿಖೆಯನ್ನು ಸಿಬಿಐಗೆ ವಹಿಸಿ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆಗ್ರಹಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಯಾರಾದರೂ ಲಂಚ ಪಡೆದರೆ ನನಗೆ ಕರೆ ಮಾಡಿ ಎಂದು ಸಿಎಂ ಡಿ.ಕೆ.ಶಿವಕುಮಾರ್ ಹೇಳಿದ್ದರು. ಈಗ ಕಾಂಗ್ರೆಸ್ ಶಾಸಕ ಅಶೋಕ್ ಕುಮಾರ್ ರೈ ಅಧಿಕೃತವಾಗಿ ಪತ್ರ ಬರೆದು ಭ್ರಷ್ಟಾಚಾರದ ವಿರುದ್ಧ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ. ಕೆಆರ್‌ಐಡಿಎಲ್ ನಲ್ಲಿ 7% ಲಂಚ ಪಡೆಯಲಾಗುತ್ತಿದೆ. ಈ ಬಗ್ಗೆ ಪ್ರಶ್ನಿಸಿದ ಗುತ್ತಿಗೆದಾರರಿಗೆ ಬೆದರಿಕೆ ಹಾಕಲಾಗುತ್ತಿದೆ ಎಂದು ಪತ್ರ ಬರೆದಿದ್ದಾರೆ. ಈಗ ಕ್ರಮಕೈಗೊಳ್ಳಿ ಎಂದು ಸವಾಲು ಹಾಕಿದರು.

# ಮೊದಲು ಮಗು ಗಂಡೇ ಏಕೆ ಬೇಕು?

## ಮಹಿಳೆಯರ ಮನೋಧರ್ಮ ಪ್ರಶ್ನಿಸಿದ ಸಿಎಂ ಡಿ.ಕೆ.ಶಿವಕುಮಾರ್

**ಬೆಂಗಳೂರು:** ಮಹಿಳೆಯರು ಸಮಾನತೆ, ಸ್ವಾವಲಂಬನೆ ಅಂತೆಲ್ಲ ಮಾತಾಡ್ತೀರಿ. ಆದರೆ ಮೊದಲು ಗಂಡು ಮಗು ಆಗಬೇಕೆಂದು ಬಯಸುತ್ತೀರಿ. ಈ ಮನೋಧರ್ಮ ಏಕೆ ಎಂದು ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಪ್ರಶ್ನಿಸಿದರು.

ಬೆಂಗಳೂರಿನಲ್ಲಿ 'ಒಟ್ಟಿಗೆ ಬೆಳೆಯೋಣ' ಮಹಿಳಾ ಉದ್ಯಮಿಗಳು ಬುಧವಾರ ಆಯೋಜಿಸಿದ್ದ ಟುಗೆದರ್ ವಿ ಗ್ರೋ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಭಾರತದ ಪ್ರತಿ ಮೂಲೆಯಲ್ಲಿರುವ ಮಹಿಳೆಯರು ಮೊದಲು

ಪುಟ 2ಕ್ಕೆ



### ದುಡ್ಡು, ಬ್ಲಡ್ಡು ಸರ್ಕ್ಯುಲೇಟ್ ಆಗಬೇಕು!

ಸಮಾಜದಲ್ಲಿ ಆರ್ಥಿಕತೆ ಬಲವಾಗಲು ಹಣ ಚಲನೆಯಲ್ಲಿರಬೇಕು. ಈ ನಿಟ್ಟಿನಲ್ಲಿ ನಮ್ಮ ಸರ್ಕಾರ ಜಾರಿಗೆ ತಂದ 5 ಗ್ಯಾರಂಟಿ ಯೋಜನೆಗಳು ಮಹಿಳೆಯರ ಮತ್ತು ಸಮಾಜದ ಎಲ್ಲಾ ವರ್ಗದ ಜನರ ಆರ್ಥಿಕ ಶಕ್ತಿ ಬಲವರ್ಧನೆಗೆ ಸಹಾಯವಾಗಿದೆ ಎಂದು ಸಿಎಂ ಡಿ.ಕೆ.ಶಿವಕುಮಾರ್ ಹೇಳಿದರು.

ದುಡ್ಡು, ಬ್ಲಡ್ಡು ಎರಡೂ

ಪುಟ 2ಕ್ಕೆ

# 'ಮೇಕೆದಾಟ'ಲು ಅಸ್ತು ಅನ್ನಿ

## ಕೇಂದ್ರ ಜಲ ಆಯೋಗದ ಅಧ್ಯಕ್ಷ ಪ್ರಸಾದ್‌ಗೆ ಸಚಿವ ಚಲುವರಾಯಸ್ವಾಮಿ ಮನವಿ

**ನವದೆಹಲಿ:** ಕಾವೇರಿ ನದಿಗೆ ಅಡ್ಡಲಾಗಿ ನಿರ್ಮಿಸಲು ಉದ್ದೇಶಿಸಿರುವ ಮೇಕೆದಾಟು ಸಮತೋಲನ ಜಲಾಶಯ ಯೋಜನೆಗೆ ವೇಗ ನೀಡಲು ಸರ್ಕಾರ ಪ್ರಯತ್ನ ಚುರುಕುಗೊಳಿಸಿದೆ.

ನವದೆಹಲಿಯಲ್ಲಿ ಕೇಂದ್ರ ಜಲಆಯೋಗದ (ಸಿಡಬ್ಲುಸಿ) ಅಧ್ಯಕ್ಷ ಅನುಪಮ್ ಪ್ರಸಾದ್ ಅವರನ್ನು ಜಲಸಂಪನ್ಮೂಲ ಸಚಿವ ಎನ್.ಚಲುವರಾಯಸ್ವಾಮಿ ಅವರು ಬುಧವಾರ ಭೇಟಿಯಾಗಿ ಮಹತ್ವದ ಮಾತುಕತೆ ನಡೆಸಿದರು.

ಮೇಕೆದಾಟು ಯೋಜನೆಗೆ ಅಗತ್ಯವಿರುವ ಕಾನೂನುಬದ್ಧ ಹಾಗೂ ತಾಂತ್ರಿಕ ಅನುಮೋದನೆ, ಮೇಕೆದಾಟು ಯೋಜನೆ ವಿಸ್ತೃತ ಯೋಜನಾ ವರದಿ ಈ ಹಿಂದೆ ಎತ್ತಿದ್ದ ಆಕ್ಷೇಪಣೆಗಳು ಮತ್ತು ತಾಂತ್ರಿಕ ವಿಚಾರಗಳಿಗೆ ಪ್ರತಿಯಾಗಿ ಕರ್ನಾಟಕ ಸರ್ಕಾರ ಸಲ್ಲಿಸಿರುವ ಸಮಗ್ರ ಅನುಸರಣೆ ವರದಿ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಯೋಜನೆ ತಾಂತ್ರಿಕ ಪರಿಶೀಲನೆಯನ್ನು ತ್ವರಿತವಾಗಿ ಪೂರ್ಣಗೊಳಿಸಲು ಹಾಗೂ ಅಗತ್ಯ ತಾಂತ್ರಿಕ ಸಹಕಾರ ಒದಗಿಸುವಂತೆ ಸಚಿವ ಚಲುವರಾಯಸ್ವಾಮಿ

ಪುಟ 2ಕ್ಕೆ



### ಕುಡಿಯುವ ನೀರಿಗೆ ಅನಿವಾರ್ಯ

ಬೆಂಗಳೂರಿನ ದೀರ್ಘಾವಧಿ ಕುಡಿಯುವ ನೀರಿನ ಅಗತ್ಯ ಪೂರೈಸುವಲ್ಲಿ ಮೇಕೆದಾಟು ಯೋಜನೆ ಮಹತ್ವ ಪಡೆದಿದೆ ಎಂದು ಸಚಿವ ಚಲುವರಾಯಸ್ವಾಮಿ ತಿಳಿಸಿದರು.

ಹೆಚ್ಚುತ್ತಿರುವ ನೀರಿನ ಬೇಡಿಕೆ, ಮಳೆ ಏರಿಳಿತ ಹಾಗೂ ಕೆಲ ಅವಧಿಗಳಲ್ಲಿ ಎದುರಾಗುತ್ತಿರುವ ನೀರಿನ ಕೊರತೆಯ ಹಿನ್ನೆಲೆಯಲ್ಲಿ ಯೋಜನೆ ಅಗತ್ಯವಾಗಿದೆ. ಪ್ರಸ್ತಾವಿತ ಜಲಾಶಯವು ಬೆಂಗಳೂರು ಮತ್ತು ನೆರೆಯ ಜಿಲ್ಲೆಗಳ ಕುಡಿಯುವ ನೀರಿನ

ಪುಟ 2ಕ್ಕೆ



## ಬಿಜೆಪಿ ಪಾದಯಾತ್ರೆ ಮಧ್ಯೆ ಬರ ವೀಕ್ಷಿಸಿದ ವಿಜಯೇಂದ್ರ

**ರಾಯಚೂರು:** ಬಳ್ಳಾರಿ ಚಲೋ ಪಾದಯಾತ್ರೆ ವೇಳೆ ಮಸ್ಕಿ ತಾಲೂಕಿನ ಬೇಡರಕಾರಲಕುಂಟಿ ಗ್ರಾಮದ ಜಮೀನಿನಲ್ಲಿ ಬಿಜೆಪಿ ರಾಜಾಧ್ಯಕ್ಷ ಬಿ.ವೈ ವಿಜಯೇಂದ್ರ ಮತ್ತಿತರರು ಬೆಳೆ ಹಾನಿ ವೀಕ್ಷಣೆ ಮಾಡಿದರು.

ಈಗ ಉತ್ತರ ಕರ್ನಾಟಕ ಭಾಗದಲ್ಲಿ ಸಿಎಂ ಬರ ಪರಿಶೀಲನೆ ನಡೆಸಿರುವುದು ನಮಗೆ ಸಿಕ್ಕ ಎರಡನೇ ವಿಜಯವಾಗಿದೆ. ನಾಗೇಂದ್ರ ರಾಜೀನಾಮೆ ಮೊದಲನೆ ಜಯ. ನಮ್ಮ ಪಾದಯಾತ್ರೆ ಎರಡನೇ ದಿನಕ್ಕೆ ಕಾಲಿಟ್ಟಾಗಲೇ ಎರಡನೇ ಜಯ ಸಿಕ್ಕಿದೆ ಎಂದು ವಿಜಯೇಂದ್ರ ಹೇಳಿದರು.

ಎರಡು ಬಾರಿ ಸಜ್ಜೆ ಬಿತ್ತನೆ ಮಾಡಿದ್ದು ಬೆಳೆ ಬಂದಿಲ್ಲ. ಮಳೆಯಿಲ್ಲದೆ ಬೆಳೆ ನಾಶವಾಗಿದೆ. ಆದರೆ ಈ ಭಾಗದ ಶಾಸಕರು, ಅಧಿಕಾರಿಗಳು ರೈತರನ್ನು ನಿರ್ಲಕ್ಷ್ಯ ಮಾಡುತ್ತಿದ್ದಾರೆ. ರೈತರ ಕಷ್ಟ ಕೇಳದಿದ್ದರೆ ರೈತರ ಪಾಲಿಗೆ ಈ ಸರ್ಕಾರ ಬದುಕಿದ್ದು ಸತ್ತಂತ್ತಾಗಿದೆ ಎಂದು ರೈತರು ಆಕ್ರೋಶ ವ್ಯಕ್ತಪಡಿಸಿದರು.

# ಬಿಪಿಎಲ್ ಮಾನದಂಡ ಪರಿಷ್ಕರಣೆ

## ವೈದ್ಯಕೀಯ ಚಿಕಿತ್ಸೆಗೆ ತ್ವರಿತ ಪಡಿತರ ಚೀಟಿ: ಸಚಿವ ರಿಜ್ವಾನ್ ಅರ್ಷದ್

**ಮೈಸೂರು:** ಬಿಪಿಎಲ್ ಪಡಿತರ ಚೀಟಿ ಪಡೆಯಲು ಇರುವ ಮಾನದಂಡ ಪರಿಷ್ಕರಿಸಲು ಚಿಂತನೆ ನಡೆದಿದೆ ಎಂದು ಆಹಾರ, ನಾಗರಿಕ ಸರಬರಾಜು ಸಚಿವ ರಿಜ್ವಾನ್ ಅರ್ಷದ್ ತಿಳಿಸಿದರು.

### ಬಿಜೆಪಿಯ ಲೀಗಲ್ ಟೆರರಿಸಂ

ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿರುದ್ಧ ದಾಖಲಾಗಿರುವ ಎಫ್‌ಐಆರ್ ಬಿಜೆಪಿ ನಡೆಸುತ್ತಿರುವ ಲೀಗಲ್ ಟೆರರಿಸಂ ಎಂದು ಆಹಾರ ಸಚಿವ ರಿಜ್ವಾನ್ ಹರ್ಷದ್ ಟೀಕಿಸಿದರು.

ಮಾಧ್ಯಮ ಸಂವಾದದಲ್ಲಿ ಮಾತನಾಡಿದ ಅವರು, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಪಾಲ್ಗೊಂಡಿದ್ದ

ಪುಟ 2ಕ್ಕೆ



ಜಿಲ್ಲಾ ಪತ್ರಕರ್ತರ ಸಂಘ ಬುಧವಾರ ಆಯೋಜಿಸಿದ್ದ ಸಂವಾದದಲ್ಲಿ ಮಾತನಾಡಿದ ಅವರು, ಇಲಾಖೆಯ ಎಲ್ಲ ಗೋದಾಮುಗಳಲ್ಲೂ ಸಿಸಿಟಿವಿ ಕ್ಯಾಮೆರಾ ಅಳವಡಿಸಲಾಗುವುದು. ಎಲ್ಲ ಆಹಾರಧಾನ್ಯ ಸಾಗಣೆ ವಾಹನಗಳಿಗೆ ಜಿಪಿಎಸ್

ಪುಟ 2ಕ್ಕೆ

### ಇಂದಿರಾ ಕಿಟ್: ಮರು ಪರಿಶೀಲನೆ

ನ್ಯಾಯಬೆಲೆ ಅಂಗಡಿಗಳ ಮೂಲಕ ತೊಗರಿಬೇಳೆ, ಸೂರ್ಯಕಾಂತಿ ಎಣ್ಣೆ, ಉಪ್ಪು, ಸಕ್ಕರೆ ಒಳಗೊಂಡ ಇಂದಿರಾ ಕಿಟ್ ವಿತರಿಸಲು ಕರೆಯಲಾಗಿದ್ದ ಟೆಂಡರ್ ಅನ್ನು ಬೆಲೆ ಹೆಚ್ಚಳದ ಕಾರಣಕ್ಕೆ ರದ್ದುಪಡಿಸಲಾಗಿದೆ. ಇದನ್ನು ಮರುಪರಿಶೀಲಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು. ಕಿಟ್ ವಿತರಣೆಗೆ ಮುನ್ನ ವಿತರಣಾ ಜಾಲವನ್ನೂ ಸಜ್ಜುಗೊಳಿಸಬೇಕಾಗಿದೆ ಎಂದು ಸಚಿವರು ಪ್ರತಿಕ್ರಿಯಿಸಿದರು. ಸದ್ಯಕ್ಕೆ ಯಾವುದೇ

ಪುಟ 2ಕ್ಕೆ

## ತ.ನಾಡಿಗೆ ನಿರಂತರ ನೀರು: ಕೆಆರ್‌ಎಸ್ ಮಟ್ಟ ಕುಸಿತ

**ಮಂಡ್ಯ:** ಯಾವುದೇ ಕಾರಣಕ್ಕೂ ತಮಿಳುನಾಡಿಗೆ ಕಾವೇರಿ ನೀರು ಬಿಡುವುದಿಲ್ಲ ಎಂದು ಭರವಸೆ ನೀಡುತ್ತಿದ್ದ ರಾಜ್ಯ ಸರ್ಕಾರದ ಮಾತುಗಳು ಕೇವಲ ಹೇಳಿಕೆಗಳಿಗಷ್ಟೇ ಸೀಮಿತವಾಗಿವೆಯೇ ಎಂಬ ಅನುಮಾನ ಮೂಡಿದೆ. ರಾಜ್ಯದಲ್ಲಿ ನೀರಿನ ಅಭಾವ ಎದುರಾಗಿದ್ದರೂ ಕೆಆರ್‌ಎಸ್ ಜಲಾಶಯದಿಂದ ನೆರೆ ರಾಜ್ಯಕ್ಕೆ ನಿರಂತರವಾಗಿ ನೀರು ಹರಿಸಲಾಗುತ್ತಿದೆ. ಹೀಗಾಗಿ ಕೆಆರ್‌ಎಸ್ ಜಲಾಶಯದ ನೀರಿನ ಮಟ್ಟ ಕುಸಿತವಾಗಿದೆ. ಹೀಗೆ ನೀರು ಹರಿದರು ಮತ್ತಷ್ಟು ಕುಸಿಯುವ ಆತಂಕ ಎದುರಾಗಿದೆ.

ಕೆಆರ್‌ಎಸ್ ಡ್ಯಾಂನ ಒಳಹರಿವು 3,864 ಕ್ಯೂಸೆಕ್‌ಗೆ ಕುಸಿತ ಕಂಡಿದೆ. 8,544 ಕ್ಯೂಸೆಕ್

ಪುಟ 2ಕ್ಕೆ



## ಮೊದಲ ಪುಟದಿಂದ

### ಬಿಪಿಎಲ್ ಮಾನದಂಡ ಪರಿಷ್ಕರಣೆ

ಸಾಧನ ಅಳವಡಿಸುವಂತೆ ಸೂಚಿಸಲಾಗಿದೆ. ಕೇಂದ್ರ ಕಚೇರಿಯಲ್ಲಿ ಕಮಾಂಡ್ ಅಂಡ್ ಕಂಟ್ರೋಲ್ ಸೆಂಟರ್ ಸ್ಥಾಪಿಸಿ ಅಲ್ಲಿಂದ ಎಲ್ಲವನ್ನೂ ನಿರ್ವಹಿಸಲಾಗುವುದು ಎಂದು ಮಾಹಿತಿ ನೀಡಿದರು.

ಬಯೊಮೆಟ್ರಿಕ್ ಜೊತೆಗೆ ಒಟಿಪಿ ಪರಿಶೀಲನಾ ವ್ಯವಸ್ಥೆ ಅಳವಡಿಕೆಗೆ ಚಿಂತಿಸಲಾಗಿದೆ. ನ್ಯಾಯಬೆಲೆ ಅಂಗಡಿಗಳ ಮಾಲೀಕರು ಗೋದಾಮುಗಳಿಂದ ಆಹಾರಧಾನ್ಯ ಎತ್ತುವಳಿ ಮಾಡಿದ ನಂತರ ಫಲಾನುಭವಿಗಳಿಗೆ ಎಸ್‌ಎಂಎಸ್ ಮೂಲಕ ಮಾಹಿತಿ ನೀಡುವ ವ್ಯವಸ್ಥೆ ತರಲಾಗುವುದು. ಎಲ್ಲ ನ್ಯಾಯಬೆಲೆ ಅಂಗಡಿಗಳಲ್ಲೂ ಇಪಿಒಎಸ್, ವಿದ್ಯುನ್ಮಾನ ತೂಕದ ಯಂತ್ರ ಮತ್ತು ಐಆರ್‌ಐಎಸ್ ಸ್ಕ್ಯಾನರ್ ಅಳವಡಿಸಲಾಗುವುದು ಎಂದು ಹೇಳಿದರು. ನಗರದಲ್ಲಿ ಶೇ 50ರಷ್ಟು ಹಾಗೂ ಗ್ರಾಮೀಣ ಪ್ರದೇಶದಲ್ಲಿ ಶೇ 75ರಷ್ಟು ಮಂದಿ ಆಹಾರ ಭದ್ರತಾ ಕಾಯ್ದೆ ವ್ಯಾಪ್ತಿಗೆ ಬರಬೇಕಿದೆ. ಈ ನಿಟ್ಟಿನಲ್ಲಿ, ರಾಜ್ಯದ ಜನಸಂಖ್ಯೆ ಆಧರಿಸಿ ಪಡಿತರ ಹಂಚಿಕೆ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು. ಪಡಿತರ ಕಾಳಸಂತೆಯಲ್ಲಿ ಮಾರಾಟ ಆಗದಂತೆ ನಿಗಾ ವಹಿಸಲಾಗುವುದು ಎಂದರು. ವೈದ್ಯಕೀಯ ಚಿಕಿತ್ಸೆಯ ಕಾರಣಗಳಿಗಾಗಿ, ಮಾನದಂಡದ ಪ್ರಕಾರ ಇರುವವರಿಗೆ ತ್ವರಿತವಾಗಿ ಬಿಪಿಎಲ್ ಪಡಿತರ ಚೀಟಿ ವಿತರಿಸುವಂತೆ ಸೂಚಿಸಲಾಗಿದೆ. ಪಡಿತರ ವಿತರಣೆ ಸಮಯದಲ್ಲಿ ಉಂಟಾಗುತ್ತಿರುವ ಸರ್ವರ್ ಸಮಸ್ಯೆ ಬಗೆಹರಿಸಲು 3ನೇ ಏಜೆನ್ಸಿ ಸೇವೆ ಪಡೆಯಲಾಗುತ್ತಿದೆ. ನ್ಯಾಯಬೆಲೆ ಅಂಗಡಿಗಳಿಗೆ ಇಪಿಒಎಸ್‌ಗಾಗಿ ಪ್ರತ್ಯೇಕ ಸಿಮ್ ವಿತರಿಸಲಾಗುವುದು. ಆಗ ಸರ್ವರ್ ಸಮಸ್ಯೆ ಬಗೆಹರಿಸಬಹುದಾಗಿದೆ ಎಂದು ಹೇಳಿದರು.

### ಸಿಇಒ ಆಗಿ ಜೀತೇಂದ್ರ ನೇಮಕ

ನಿವಾಸಿ ಮದನ್ ಮೋಹನ್ ಪಾಂಡೆ ಹಾಗೂ ಶಿಕೋಹಾಬಾದ್‌ನ ನಿರ್ಮಲಾ ಯಾದವ್ ಅವರನ್ನು ಟ್ರಸ್ಟಿಗಳನ್ನಾಗಿ ನೇಮಿಕ ಮಾಡಲಾಗಿದೆ.

ಮಹೇಶ್ ಭಾಗ್‌ಚಂದ್ಕಾ ವಿಶ್ವ ಹಿಂದೂ ಪರಿಷತ್ ನಾಯಕ ದಿ.ಅಶೋಕ್ ಸಿಂಘಾಲ್ ಸಂಬಂಧಿ. ಮದನ್ ಮೋಹನ್ ಪಾಂಡೆ ಮತ್ತು ನಿರ್ಮಲಾ ಯಾದವ್ ಅವರ ಹೆಸರನ್ನು ನೇಮಕಾತಿ ಕುರಿತು ರಾಮಮಂದಿರ ಟ್ರಸ್ಟ್ ಪ್ರಮುಖ ಸಭೆಯಲ್ಲಿ ನಿರ್ಧರಿಸಲಾಗಿದೆ.

### ಸರ್ಕ್ಯುಲೇಟ್ ಆಗಬೇಕು!

ಸರ್ಕ್ಯುಲೇಟ್ ಆಗುತ್ತಿರಬೇಕು. ಬ್ಲಡ್ ದೇಹದಲ್ಲಿ ಒಂದು ಕಡೆ ನಿಂತುಬಿಟ್ಟರೆ ಆರೋಗ್ಯ ಸಮಸ್ಯೆಯಾಗುತ್ತದೆ. ದುಡ್ಡು ಒಂದೇ ಕಡೆ ಸಂಗ್ರಹವಾಗಿದ್ದರೆ ಆದಾಯ ತೆರಿಗೆ ಇಲಾಖೆ, ವಾಣಿಜ್ಯ ತೆರಿಗೆ ಇಲಾಖೆ ದಾಳಿಗಳು, ಕುಡಿಕೆ ಕಳ್ಳತನ ಇತ್ಯಾದಿ ಆಗುತ್ತದೆ. ಹಣ ಯಾವತ್ತೂ ಚಲನಶೀಲನವಾಗಿರಬೇಕು. ಹಣಕಾಸು ವ್ಯವಸ್ಥೆ ಸಮಾದಲ್ಲಿ ಸರ್ಕ್ಯುಲೇಟ್ ಆಗುತ್ತಿದ್ದರೆ ದೇಶದ ಆರ್ಥಿಕ ವ್ಯವಸ್ಥೆ ಸದೃಢವಾಗುತ್ತದೆ ಎಂದು ಸಿಎಂ ಹೇಳಿದರು.

### ಮಗು ಗಂಡೇ ಏಕೆ ಬೇಕು?

ಹುಟ್ಟುವ ಮಗು ಗಂಡು ಆಗಬೇಕು ಎಂದು ಏಕೆ ಬಯಸುತ್ತಾರೆ ಎಂದು ನನಗೆ ಅರ್ಥವಾಗುತ್ತಿಲ್ಲ. ನೀವು ನನಗೆ ಉತ್ತರ ಕೊಡಬೇಕು ಎಂದರು. ಇತ್ತೀಚೆಗೆ ನನಗೂ ಮೊಮ್ಮಗಳು ಹುಟ್ಟಿದಳು. ನನಗೆ ಬಹಳ ಖುಷಿ ಆಯ್ತು. ಆದರೆ ನನ್ನ ಪತ್ನಿಗೆ ಮೊದಲ ಮಗು ಗಂಡು ಮಗುವಾಗಬೇಕಿತ್ತು ಎಂದು ಬೇಸರವಾಯಿತು. ಏಕೆ ಆ ರೀತಿ ಯೋಚನೆ ಮಾಡುವುದು? ನನ್ನ ಮಗಳು ಐಶ್ವರ್ಯ ಬೆಳೆದಿರುವ ರೀತಿ ಇಂದು ಆಕೆ ಮಾಡುತ್ತಿರುವ ಕೆಲಸ ನೋಡಿ ನನಗೆ ಬಹಳ ಹೆಮ್ಮೆಯಾಗುತ್ತಿದೆ. ಆದರೆ, ನಾನು ನಿಮ್ಮನ್ನು ನಿರುತ್ಸಾಹಗೊಳಿಸುತ್ತಿಲ್ಲ. ಆದರೆ ಕುತೂಹಲದಿಂದ ಕೇಳುತ್ತಿದ್ದೇನೆ ಎಂದು ನಗುತ್ತಾ ನೆರೆದಿದ್ದ ಮಹಿಳೆಯರನ್ನು ಡಿಕೆಶಿ ಪ್ರಶ್ನಿಸಿದರು. ಮಹಿಳೆಯರು ಸದಾ ಸೃಜನಶೀಲರು, ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವವರು. ಕುಟುಂಬ ಮತ್ತು ಸಂಪನ್ಮೂಲಗಳನ್ನು ನಿರ್ವಹಿಸುವುದರಿಂದ ಹಿಡಿದು ಉದ್ಯಮಗಳನ್ನು ಕಟ್ಟುವವರೆಗೆ, ಇತರರಿಗೆ ಅವಕಾಶಗಳನ್ನು ಸೃಷ್ಟಿಸುವವರೆಗೆ, ಸವಾಲುಗಳನ್ನು ಸಾಧ್ಯತೆಗಳಾಗಿ ಪರಿವರ್ತಿಸುವ ಸಾಮರ್ಥ್ಯ ಮಹಿಳೆಯರಲ್ಲಿದೆ ಎಂದು ಹೇಳಿದರು.

### ಬಿಜೆಪಿಗೆ ಹೆದರಲ್ಲ: ಡಿಕೆಶಿ

ತಂದುಕೊಡಲಾಗಿದೆ? ಸ್ವತಂತ್ರ ಬಂದ ಬಳಿಕ ದೇಶವನ್ನು ಅಭಿವೃದ್ಧಿಶೀಲ ರಾಷ್ಟ್ರವಾಗಿ ಮಾಡಲು ನಾವು ಹಾಕಿರುವ ಭದ್ರ ಬುನಾದಿಯನ್ನು ಜನರಿಗೆ ತಿಳಿಸಬೇಕಾದ ಅವಾರ್ಯತೆ ಬಂದಿದೆ ಎಂದರು.

### ಕುಡಿಯುವ ನೀರಿಗೆ ಅನಿವಾರ್ಯ

ಅಗತ್ಯಗಳನ್ನು ಪೂರೈಸುವುದರ ಜೊತೆಗೆ, ಜಲವಿದ್ಯುತ್ ಉತ್ಪಾದನೆ ಹಾಗೂ ಕೆಳಹರಿವಿನಲ್ಲಿ ನೀರಿನ ಸಮರ್ಪಕ ನಿರ್ವಹಣೆ ಮತ್ತು ನಿಯಂತ್ರಿತ ಹರಿವಿಗೆ ಸಹಕಾರಿಯಾಗಲಿದೆ ಎಂದು ತಿಳಿಸಿದರು.

ಮಳೆ ಕೊರತೆಯಿರುವ ವರ್ಷಗಳಲ್ಲೂ ಮೇಕೆದಾಟು ಯೋಜನೆ ಮಹತ್ವದ ಪಾತ್ರ ವಹಿಸಲಿದೆ. ನೀರಿನ ಸಂಗ್ರಹ ಮತ್ತು ನಿಯಂತ್ರಣ ವ್ಯವಸ್ಥೆ ಸುಧಾರಿಸುವುದರಿಂದ ನೀರಿನ ನಿರ್ವಹಣೆ ಬಲಗೊಳ್ಳಲಿದೆ. ಜತೆಗೆ, ಅನ್ವಯವಾಗುವ ನಿಯಮಗಳಂತೆ ಕೆಳಹರಿವಿಗೆ ನೀರನ್ನು ನಿಯಂತ್ರಿತವಾಗಿ ಹರಿಸಲು ಅನುಕೂಲವಾಗಲಿದೆ ಎಂದು ಅವರು ಹೇಳಿದರು. ಮೇಕೆದಾಟು ಯೋಜನೆಯನ್ನು ಮುಂದಕ್ಕೆ ಕೊಂಡೊಯ್ಯಲು ಕರ್ನಾಟಕ ಸರ್ಕಾರ ಬದ್ಧವಾಗಿದೆ ಎಂದು ನಿಯೋಗ ಪುನರುಚ್ಚರಿಸಿತು. ನಿಗದಿತ ಪ್ರಕ್ರಿಯೆಯಂತೆ ನಡೆಯುತ್ತಿರುವ ತಾಂತ್ರಿಕ ಪರಿಶೀಲನೆಯನ್ನು ಸಾಧ್ಯವಾದಷ್ಟು ಶೀಘ್ರ ಪೂರ್ಣಗೊಳಿಸುವಂತೆ ಕೇಂದ್ರ ಜಲ ಆಯೋಗಕ್ಕೆ ಮನವಿ ಮಾಡಲಾಗಿದೆ.

### 'ಮೇಕೆದಾಟ'ಲು ಅಸ್ತು ಅನ್ನಿ

ಅವರು ಆಯೋಗದ ಅಧ್ಯಕ್ಷರಿಗೆ ಮನವಿ ಮಾಡಿದರು. ಪರಿಶೀಲನಾ ಪ್ರಕ್ರಿಯೆಯಲ್ಲಿ ಹೆಚ್ಚುವರಿ ತಾಂತ್ರಿಕ ಮಾಹಿತಿ ಅಥವಾ ಯಾವುದೇ ಸ್ಪಷ್ಟೀಕರಣದ ಅಗತ್ಯವಿದ್ದರೆ ಜಲಸಂಪನ್ಮೂಲ ಇಲಾಖೆ ತಕ್ಷಣವೇ ಒದಗಿಸಲಿದೆ ಎಂದು ಸಚಿವರು ಭರವಸೆ ನೀಡಿದರು.

ಕರ್ನಾಟಕದ ನಿಯೋಗವು ಉದ್ದೇಶಿತ ಯೋಜನಾ ಸ್ಥಳದಲ್ಲಿನ ವಾಸ್ತವಿಕ ಭೌಗೋಳಿಕ ಪರಿಸ್ಥಿತಿಗಳ ಕುರಿತು ವಿವರಗಳನ್ನು ಹಂಚಿಕೊಂಡಿತು. ಅಲ್ಲದೆ, ಸ್ಥಳ ಪರಿಶೀಲನೆಯ ಸಂದರ್ಭದಲ್ಲಿ ಗಮನಕ್ಕೆ ಬಂದ ತಾಂತ್ರಿಕ ಅಂಶಗಳ ಬಗ್ಗೆಯೂ ಚರ್ಚೆ ನಡೆಯಿತು.

### ತ.ನಾಡಿಗೆ ನಿರಂತರ ನೀರು: ಕೆಆರ್‌ಎಸ್ ಮಟ್ಟ ಕುಸಿತ

ನೀರನ್ನ ಹೊರಬಿಡಲಾಗುತ್ತಿದೆ. 124.80 ಅಡಿಯ ಗರಿಷ್ಠ ಮಟ್ಟದ ಕೆಆರ್‌ಎಸ್‌ನಲ್ಲಿ 109.32 ಅಡಿ ನೀರಿದೆ. ಟಿಎಂಸಿ ಲೆಕ್ಕಚಾರದಲ್ಲಿ ನೋಡುವುದಾದರೆ 31.044 ಟಿಎಂಸಿ ಯಷ್ಟು ನೀರು ಸಂಗ್ರಹವಾಗಿದೆ. ಮಳೆ ಕೊರತೆಯಿಂದಾಗಿ ಡ್ಯಾಂಗೆ ಬರುವ ಒಳಹರಿವು ತೀವ್ರವಾಗಿ ಕುಸಿದಿದೆ. ಆದರೂ ಒಳಹರಿವಿಗಿಂತ ದುಪ್ಪಟ್ಟು ನೀರನ್ನು ಹೊರಬಿಡಲಾಗುತ್ತಿರುವುದು ರೈತರ ಆತಂಕಕ್ಕೆ ಕಾರಣವಾಗಿದೆ.

ನಾವು ತಮಿಳುನಾಡಿಗೆ ನೀರು ಹರಿಸುತ್ತಿಲ್ಲ ಎಂದು ಸರ್ಕಾರ ಪ್ರತಿಪಾದಿಸುತ್ತಿದ್ದರೂ, ವಾಸ್ತವದಲ್ಲಿ ನದಿಯ ಮೂಲಕ ಸಾವಿರಾರು ಕ್ಯೂಸೆಕ್ ನೀರು ತಮಿಳುನಾಡು ಪಾಲಾಗುತ್ತಿದೆ.

### ಇಂದಿರಾ ಕಿಟ್: ಮರು ಪರಿಶೀಲನೆ

ಪಡಿತರಚೀಟಿಗಳನ್ನು ರದ್ದುಪಡಿಸದಂತೆ ಅಧಿಕಾರಿಗಳಿಗೆ ಸೂಚಿಸಿದ್ದೇನೆ. ಬಿಪಿಎಲ್ ಕಾರ್ಡ್ ಹೊಂದಿರುವ ಅನರ್ಹರಿದ್ದರೆ ಹೊರ ಹಾಕಬೇಕಿದೆ. ಅರ್ಹರನ್ನು ಸೇರ್ಪಡೆ ಮಾಡಬೇಕಾಗಿದೆ ಎಂದು ತಿಳಿಸಿದರು.

### ಬಿಜೆಪಿಯ ಲೀಗಲ್ ಟೆರರಿಸಂ

ಸ್ಥಳ ಶುದ್ಧೀಕರಣ ಮಾಡಿ ಅಸ್ಪೃಶ್ಯತೆ ಮಾಡಿದವರ ವಿರುದ್ಧ ಕ್ರಮ ಕೈಗೊಳ್ಳದಿರುವುದನ್ನು ಪ್ರಶ್ನಿಸಿದ ರಾಹುಲ್ ಗಾಂಧಿ ವಿರುದ್ಧ ಎಫ್‌ಐಆರ್ ದಾಖಲಿಸಿರುವುದು ಖಂಡನೀಯ. ಆದರೆ, ಪ್ರಶ್ನಿಸುವವರ ವಿರುದ್ಧ ಬಿಜೆಪಿ ಸರ್ಕಾರ ಕ್ರಮ ಕೈಗೊಳ್ಳುತ್ತವೆ ಎಂಬ ಸಂದೇಶವನ್ನು ನೀಡಿದೆ. ಆದರೆ, ಎಫ್‌ಐಆರ್‌ಗಳಿಗೆಲ್ಲ ರಾಹುಲ್ ಗಾಂಧಿ ಹೆದರವುದಿಲ್ಲ ಎಂದರು.

## ಉದ್ಯಮಿಗಳ ಸಾಲ ಮನ್ನಾ ಮಾಡಿದ ಕೇಂದ್ರಕ್ಕೆ ರೈತರು ಕಾಣುವುದಿಲ್ಲವೇ?

ಗುಂಡ್ಲುಪೇಟೆ: ಸಾವಿರಾರು ಕೋಟಿ ರೂಪಾಯಿ ಸಾಲ ಪಡೆದ ಉದ್ಯಮಿಗಳ ಸಾಲವನ್ನು ಮನ್ನಾ ಮಾಡುವ ಕೇಂದ್ರ ಸರ್ಕಾರಕ್ಕೆ ಸಣ್ಣ ರೈತರು ಪಡೆದಿರುವ ಒಂದರಿಂದ ಎರಡು ಲಕ್ಷ ರೂಪಾಯಿ ಬೆಳೆ ಸಾಲವನ್ನು ಮನ್ನಾ ಮಾಡಲು ಸಾಧ್ಯವಾಗುವುದಿಲ್ಲವೇ ಎಂದು ಗಡಿನಾಡು ರಕ್ಷಣಾ ಸೇನೆ ರಾಜ್ಯಾಧ್ಯಕ್ಷ ಮುನೀರ್ ಪಾಷ ಪ್ರಶ್ನಿಸಿದರು.



ಬರಗಾಲದಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದು, ಕೃಷಿ ಚಟುವಟಿಕೆಗಳಿಗೆ ಮಾಡಿದ ಸಾಲವನ್ನು ತೀರಿಸಲಾಗದೆ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ರೈತರು ಬೆಳೆದ ಬೆಳೆಗೆ ಸೂಕ್ತ ಬೆಲೆ ದೊರೆಯುತ್ತಿಲ್ಲ. ಸಹಕಾರ ಬ್ಯಾಂಕ್‌ಗಳು ಸೇರಿದಂತೆ ವಿವಿಧ ಬ್ಯಾಂಕ್‌ಗಳಲ್ಲಿ ಸಣ್ಣ ಮತ್ತು ಅತಿ ಸಣ್ಣ ರೈತರು ?50 ಸಾವಿರದಿಂದ ?2 ಲಕ್ಷದವರೆಗೆ ಬೆಳೆ ಸಾಲ ಪಡೆದಿದ್ದು, ಬರದ ಹಿನ್ನೆಲೆಯಲ್ಲಿ ಈ ಸಾಲ ಮನ್ನಾ ಮಾಡುವ ಅಗತ್ಯವಿದೆ ಎಂದು ಅವರು ಹೇಳಿದರು.

ಉದ್ಯಮಿಗಳ ಸಾವಿರಾರು ಕೋಟಿ ರೂಪಾಯಿ ಸಾಲ ಮನ್ನಾ ಮಾಡಲಾಗುತ್ತಿದೆ. ಆದರೆ ಬಡ ರೈತರು ಪಡೆದಿರುವ ಅಲ್ಪ ಪ್ರಮಾಣದ ಕೃಷಿ ಸಾಲವನ್ನು ಮನ್ನಾ ಮಾಡಲು ಸರ್ಕಾರಗಳು ಹಿಂದೇಟು ಹಾಕುತ್ತಿರುವುದು ರೈತ ವಿರೋಧಿ ಧೋರಣೆಯಲ್ಲವೇ ಎಂದು ಮುನೀರ್ ಪಾಷ ಆಕ್ಷೇಪ ವ್ಯಕ್ತಪಡಿಸಿದರು.

ಬರ ಪರಿಸ್ಥಿತಿಯನ್ನು ಗಂಭೀರವಾಗಿ ಪರಿಗಣಿಸಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಕೂಡಲೇ ಕ್ರಮ ಕೈಗೊಳ್ಳಬೇಕು. ಕೃಷಿ ಪತ್ತಿನ ಸಹಕಾರ ಬ್ಯಾಂಕ್‌ಗಳು ಹಾಗೂ ಇತರೆ ಬ್ಯಾಂಕ್‌ಗಳಲ್ಲಿ ಸಣ್ಣ ಹಿಡುವಳಿ ರೈತರು ಪಡೆದಿರುವ ಬೆಳೆ ಸಾಲವನ್ನು ಮನ್ನಾ ಮಾಡುವ ಮೂಲಕ ರೈತರ ಸಂಕಷ್ಟಕ್ಕೆ ಸ್ಪಂದಿಸಬೇಕು ಎಂದು ಒತ್ತಾಯಿಸಿದರು.

## ಸೆ.5ಕ್ಕೆ ಬೃಹತ್ ಉದ್ಯೋಗ ಮೇಳ

ಮೈಸೂರು: ನಗರದ ಜನ ಸ್ಪಂದನಾ ಟ್ರಸ್ಟ್ ವತಿಯಿಂದ ಕಳೆದ 9 ವರ್ಷಗಳಿಂದ 15 ಭಾರಿ ಯಶಸ್ವಿಯಾಗಿ ಉದ್ಯೋಗ ಮೇಳವನ್ನು ನಡೆಸಿದ್ದು, ಸೆ.5ರಂದು 16ನೇ ಬಾರಿಗೆ ಬೃಹತ್ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ ಎಂದು ಟ್ರಸ್ಟ್ ಅಧ್ಯಕ್ಷರಾದ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ತಿಳಿಸಿದರು.

ನಗರದ ಪತ್ರಕರ್ತರಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ನಿರುದ್ಯೋಗಿ ಉತ್ಸಾಹಿ ಯುವಕ, ಯುವತಿಯರಿಗೆ ಚೈತನ್ಯ ತುಂಬಿ ನಿರುದ್ಯೋಗ ಸಮಸ್ಯೆಯನ್ನು ನಿರ್ಮೂಲನೆ ಮಾಡುವತ್ತ ನಮ್ಮ ಸಂಸ್ಥೆಯೂ ಸಾವಿರಾರು ನಿರುದ್ಯೋಗಿ ಯುವಕ, ಯುವತಿಯರಿಗೆ ಉದ್ಯೋಗವನ್ನು ದೊರಕಿಸಿಕೊಡುವಲ್ಲಿ ಸಫಲರಾಗಿದ್ದೇವೆ. ಸೆ.5ರಂದು ಬೆ.9 ರಿಂದ ಸಂಜೆ 5ರವರೆಗೆ ಕುವೆಂಪುನಗರದ ಉದಯರವಿ ರಸ್ತೆಯಲ್ಲಿರುವ ಚಿಕ್ಕಮ್ಮಾನಿಕೇತನ ಸಮುದಾಯ ಭವನದಲ್ಲಿ ಉದ್ಯೋಗಮೇಳವನ್ನು ಏರ್ಪಡಿಸಿದೆ. ಈ ಉದ್ಯೋಗ ಮೇಳವನ್ನು ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಉದ್ಘಾಟನೆ ಮಾಡಲಿದ್ದು, ಅನೇಕರು ಭಾಗವಹಿಸಲಿದ್ದಾರೆ. ಉದ್ಯೋಗ ಮೇಳದಲ್ಲಿ ನಿರುದ್ಯೋಗ ಯುವಕ, ಯುವತಿಯರಿಗೆ ಅನುಕೂಲವಾಗುವ



ಉದ್ದೇಶದಿಂದ ಜಾಬ್ ಪೋರ್ಟಲ್ ಅನ್ನು ಪ್ರಾರಂಭಿಸಲಾಗುತ್ತಿದ್ದು ನೋಂದಣಿಗಾಗಿ ನಿರುದ್ಯೋಗಿಗಳು ಆನಲೈನ್ ಮೂಲಕ ತಮ್ಮ ವಿವರ ಸಲ್ಲಿಸಬಹುದಾಗಿದೆ ಎಂದರು.

ಒಟ್ಟಾರೆ 60ಕ್ಕೂ ಹೆಚ್ಚು ಕಂಪನಿಗಳು ಭಾಗವಹಿಸಲಿದ್ದು, 8000ಕ್ಕೂ ಹೆಚ್ಚು ಮಂದಿ ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸುವ ಗುರಿಯನ್ನು ಹೊಂದಿರುತ್ತೇವೆ. ಈ ಮೇಳದ ಪ್ರಯೋಜನವನ್ನು ಪಡೆದುಕೊಳ್ಳುವಂತೆ ಜನಸ್ಪಂದನಾ ಸೇವಾ ಟ್ರಸ್ಟ್ 7018442164 ವಿನಂತಿಸಿದೆ. ಹೆಚ್ಚಿನ ವಿವರಗಳಿಗೆ ಮೊಬೈಲ್ ನಂ. 8892628009, 7892253897, 8618448164, 9900244955ರನ್ನು ಸಂಪರ್ಕಿಸಬಹುದು. ನಗರಪಾಲಿಕೆ ಮಾಜಿ ಸದಸ್ಯ ಜೆ.ಗೋಪಿ, ದೇವರಾಜ ಅರಸು ಬ್ಲಾಕ್ ಕಾಂಗ್ರೆಸ್ ಸಮಿತಿ ಶ್ರೀಧರ್, ಕೆ.ಆರ್. ಕ್ಷೇತ್ರದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಜೆ.ವಿನಯಕುಮಾರ್, ನಗರ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ರವಿಶಂಕರ್ ಇನ್ನಿತರರು ಇದ್ದರು.

# ಗಜಪಡೆಗೆ ಸಿಸಿಟಿವಿ ಕಣ್ಗಾವಲು

## ಸಾರ್ವಜನಿಕರಿಗೆ ನಿಷೇಧ, ಅರಣ್ಯ ಇಲಾಖೆಯಿಂದ ತೀವ್ರ ನಿಗಾ

ಮೈಸೂರು: ದಸರೆಯ ಪ್ರಮುಖ ಆಕರ್ಷಣೆಯಾದ ಜಂಬೂಸವಾರಿ ಮೆರವಣಿಗೆಯ ಕೇಂದ್ರ ಬಿಂದು ಆದ ಅಂಬಾರಿ ಆನೆಗಳ ತಾಲೀಮಿಗಾಗಿ ಅರಮನೆ ಅಂಗಳ ಪ್ರವೇಶಿಸಿರುವ ಆನೆಗಳ ವೀಕ್ಷಣೆಗೆ ಸಾರ್ವಜನಿಕರಿಗೆ ನಿಷೇಧಿಸಿದ್ದು, ಬರೋಬ್ಬರಿ 10 ಸಿಸಿಟಿವಿಗಳನ್ನು ಆನೆಗಳ ಸುತ್ತ ಅಳವಡಿಸುವ ಮೂಲಕ ಅರಣ್ಯ ಇಲಾಖೆ ಆನೆಗಳ ಮೇಲೆ ತೀವ್ರ ನಿಗಾವಹಿಸಿದೆ.

ಜಂಬೂ ಸವಾರಿ ತಾಲೀಮಿಗಾಗಿ 60ದಿನ ಮುಂಚಿತವಾಗಿ ಅರಮನೆ ಪ್ರವೇಶಿಸುವ ಗಜಪಡೆಯನ್ನು ಬೆಳಿಗ್ಗೆ ಹಾಗೂ ಸಂಜೆ ಅರಮನೆಯಿಂದ ನಾಲ್ಕು ಕಿ.ಮೀ ದೂರದ ಬನ್ನಿಮಂಟಪದವರೆಗೆ ಮೆರವಣಿಗೆಯಲ್ಲಿ ಕಾಲ್ನಡಿಗೆ ಮೂಲಕ ಕರೆದೊಯ್ಯುವ ತಾಲೀಮು ನಡೆಸಲಾಗುತ್ತಿದೆ. ಅದರಂತೆ ನಿತ್ಯ ತಾಲೀಮು ನಡೆಸುತ್ತಿದ್ದು, ಈ ವೇಳೆ ಪೊಲೀಸ್ ಬ್ಯಾಂಡ್, ನಗರದ ಜನಸಂದಣಿ, ಕಟ್ಟಡಗಳ ವೀಕ್ಷಣೆ ಹೀಗೆ ಎಲ್ಲದಕ್ಕೂ ಆನೆಗಳು ಹೊಂದಿಕೊಳ್ಳುವ ಬಗ್ಗೆ ನಿಗಾ ಇರಿಸಲಾಗುತ್ತಿದೆ. ದಸರಾ ಗಜಪಡೆ ಆಗಸ್ಟ್ 28 ರಂದು ಜಯಮಾರ್ತಂಡ ದ್ವಾರದ ಮೂಲಕ ಅರಮನೆ ಪ್ರವೇಶ ಮಾಡಿದ ಬಳಿಕ ಒಂಬತ್ತು ಆನಗಳ ವಾಸ್ತವ್ಯಕ್ಕೆ ಅರಮನೆ ಮುಂಭಾಗದ ಕೋಡಿ ಸೋಮೇಶ್ವರ ಆವರಣ ಹಾಗೂ ಭುವನೇಶ್ವರಿ ದೇವಾಲಯದ ಆವರಣದ ಶೆಡ್ನಲ್ಲಿ ವ್ಯವಸ್ಥೆ ಮಾಡಲಾಗಿದೆ.

ಶ್ರೀಕಂತ, ಮಹೇಂದ್ರ, ಧನಂಜಯ, ಪ್ರಶಾಂತ,









### ನೀರಿನ ಮಜ್ಜನ

**ಸದಾ ಕಾಡಿನ ಹುಲ್ಲು, ಸೊಪ್ಪು, ಮೈ ತುಂಬಾ ಮಣ್ಣು ಹಾಕಿಕೊಂಡು ವಿಶ್ರಮಿಸುತ್ತಿದ್ದ ಗಜಪಡೆಯ ಆನೆಗಳನ್ನು ಸದಸ್ಯ ಅರಮನೆ ಆತಿಥ್ಯದ ಸಂಭ್ರಮದಲ್ಲಿವೆ. ಅದರಲ್ಲೂ ಆನೆಗಳ ಮಜ್ಜನಕ್ಕೆ ಒಂದೊಂದೆ ಆನೆಗಳನ್ನು ಮಾವುತ, ಕಾವಾಡಿಗರು ಕರೆತಂದು ಅವುಗಳಿಗೆ ಮಜ್ಜನ ಮಾಡಿಸಿ ಇಲಾಖೆಯಿಂದ ತಂದ ಹಸಿ ಹುಲ್ಲು, ಅರಳಿ ಮರದೆಲೆ ಸೇರಿ ಇತ್ಯಾದಿ ಸೊಪ್ಪುಗಳನ್ನು ತಿನ್ನಿಸುತ್ತಾ ದೃಶ್ಯಗಳು ಅರಮನೆ ಆವರಣದಲ್ಲಿ ದಸರೆ ರಂಗು ಹೆಚ್ಚಿಸಿತು.**

ಏಕಲವ್ಯ, ಗೋಪಿ, ಶ್ರೀರಾಮ, ಕಾವೇರಿ ಹಾಗೂ ಲಕ್ಷ್ಮಿ ಸೇರಿ ಒಂಬತ್ತು ಆನೆಗಳು ಹಾಗೂ ಆನೆಗಳಿಗೆ ಆಹಾರ ತಯಾರು ಮಾಡುವ ಸ್ಥಳದಲ್ಲೂ ಸಹ ಸಿಸಿಟಿವಿ ಅಳವಡಿಸಲಾಗಿದೆ. ಒಟ್ಟು 10 ಸಿಸಿಟಿವಿಗಳನ್ನು ಹಾಕಲಾಗಿದ್ದು, ಇವುಗಳ ಮೂಲಕ ದಿನದ 24 ಗಂಟೆ ಆನೆಗಳ ಚಲನವಲನ ಹಾಗೂ ಆನೆ ಬಳಿ ಯಾರು ಬರುತ್ತಾರೆ ಎಂಬ ಬಗ್ಗೆ ನಿಗಾ ವಹಿಸಲಾಗಿದೆ. ಇದರ ಜೊತೆಗೆ ಯಾರೂ ಸಹ ಆನೆಗಳ ಫೋಟೋ ತೆಗೆಯದಂತೆ ನಿರ್ಬಂಧ ವಿಧಿಸಿದ ನಾಮಫಲಕಗಳನ್ನು ಸಹ ಅಳವಡಿಸಿ ಮುನ್ನೆಚ್ಚರಿಕೆ ವಹಿಸಿದೆ. ಮಾತ್ರವಲ್ಲದೆ, ಅರಮನೆಗೆ ಪ್ರವೇಶಿಸುವ ಯಾವುದೇ ಪ್ರವಾಸಿಗರೂ ಸಹ ಆನೆಗಳ ಬಳಿ ತೆರಳದಂತೆ ಮುನ್ನೆಚ್ಚರಿಕೆವಹಿಸಲಾಗಿದೆ.




ಇನ್ನೂ ಆನೆಗಳ ವೈದ್ಯರ ತಂಡ ಮೂರು ತಾಸು ಗಜಪಡೆ ಆವರಣದಲ್ಲೇ ಬೀಡು ಬಿಟ್ಟು ಪ್ರತಿಯೊಂದು ಆನೆಯ ಚಲನವಲನ ಗ್ರಹಿಸುವ ಕೆಲಸದಲ್ಲಿ ನಿರತರಾಗಿದ್ದಾರೆ.

### ಗಜಪಡೆಗೆ ಪೌಷ್ಟಿಕಾಹಾರ

ಬೆಳಗ್ಗೆ ಮತ್ತು ಸಂಜೆ ಗಜಪಡೆಯನ್ನು ಜಂಬೂಸವಾರಿ ತಾಲೀಮಿಗೆ ಕರೆದುಕೊಂಡು ಹೋಗುವಾಗ ಪ್ರತಿದಿನ ಪೌಷ್ಠಿಕ ಆಹಾರವಾಗಿ ಒಣಹುಲ್ಲು, ಬೆಲ್ಲ, ಹಸಿರುಕಾಳು, ರವೆ ಬೂಸ ಹೀಗೆ ವಿಶೇಷ ಅತಿಥ್ಯ ನೀಡಲಾಗುತ್ತಿದೆ. ಈ ಸ್ಥಳದಲ್ಲೂ ಸಹ ಸಿಸಿಟಿವಿ ಅಳವಡಿಸಲಾಗಿದ್ದು, ಜನರು ಆನೆಗೆ ಆಹಾರ ನೀಡದಂತೆ ನಿರ್ಬಂಧ ವಿಧಿಸಲಾಗಿದೆ. ಗಜಪಡೆ ವಾಸ್ತವ್ಯ ಇರುವ ಜಾಗದಲ್ಲಿ ಪೊಲೀಸ್, ಅರಣ್ಯ ಇಲಾಖೆಯ ಸಿಬ್ಬಂದಿ ಹಾಗೂ ಗಜಪಡೆಯ ರಕ್ಷಣೆಗೆ ವಿಶೇಷ ತಂಡ ದಿನದ 24 ಗಂಟೆ ಸಿಸಿಟಿವಿ ಜೊತೆ ಕಾರ್ಯ ನಿರ್ವಹಿಸುತ್ತಿದೆ.

### ಮುನ್ನೆಚ್ಚರಿಕೆಯೇ ಮದ್ದು

ರಾತ್ರೋರಾತ್ರಿ ಮಹಿಳೆಯೊಬ್ಬರು ಅರಮನೆ ಪ್ರವೇಶಿಸಿ ಆನೆಗಳೊಂದಿಗೆ ಫೋಟೊ ಕ್ಲಿಕಿಸಿಕೊಂಡು



ಅದನ್ನು ಸಾಮಾಜಿಕ ಜಾಲತಾಣದಲ್ಲಿ ಬಿಟ್ಟು ಸದರಿ ವಿಡಿಯೋ ವೈರಲ್ ಆಗಿ ಸಾಕಷ್ಟು ಟೀಕೆಗಳು ವ್ಯಕ್ತವಾಗಿದ್ದವು. ಮಾತ್ರವಲ್ಲದೆ, ಕಳೆದ ಬಾರಿ ಅರಮನೆ ಆವರಣದಲ್ಲಿ ರಾತ್ರಿ ವೇಳೆ ದನಂಜಯ ಆನೆ ಕಂಜನ್ ಆನೆಯನ್ನು ಮಕ್ಕಳಂತೆ ಅಟ್ಟಾಡಿಸಿಕೊಂಡು ಆಟವಾಡಲು ಯತ್ನಿಸಿ ಅರಮನೆ ಆವರಣದಿಂದ ಹೊರಕ್ಕೆ ಓಡಿ ಹೋಗಿ ಕೆಲಕಾಲ ಗಾಬರಿ ಸಹ ಆಗಿತ್ತು. ಇದೆಲ್ಲಾ ಕಾರಣದಿಂದ ಈ ಬಾರಿ ಸಾರ್ವಜನಿಕರಿಗೆ ಪ್ರವೇಶ ನಿರ್ಬಂಧವಿದಿಸಲಾಗಿದೆ. ಜತೆಗೆ ಯಾರು ಸಹ ಆನೆಗಳ ಬಳಿಗೆ ತೆರಳದಂತೆ ಮುನ್ನೆಚ್ಚರಿಕೆ ಕ್ರಮವಹಿಸಿ ಅರಣ್ಯ ಇಲಾಖೆ ಕಟ್ಟುನಿಟ್ಟಿನ ಸೂಚನೆ ಹೊರಡಿಸಿದೆ.



## ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ 18 ಹುದ್ದೆಗಳಿಗೆ ಅರ್ಜಿ

ಗುಂಡ್ಲುಪೇಟೆ: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಗುಂಡ್ಲುಪೇಟೆ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯ ಅಂಗನವಾಡಿ ಕೇಂದ್ರಗಳಲ್ಲಿ ಹೊಸದಾಗಿ ಸೃಜಿಸಿರುವ ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಖಾಲಿ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಒಟ್ಟು 18 ಹುದ್ದೆಗಳು ಖಾಲಿ ಇದ್ದು, ಅಂಗನವಾಡಿ ಕಾರ್ಯಕರ್ತೆಯರ 9 ಹುದ್ದೆ ಹಾಗೂ ಸಹಾಯಕಿಯರ 9 ಹುದ್ದೆಗಳಿಗೆ ನೇಮಕಾತಿ ನಡೆಯಲಿದೆ. ಅಭ್ಯರ್ಥಿಗಳನ್ನು ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಲಾಗುತ್ತದೆ. ಆಯಾ ಅಂಗನವಾಡಿ ಕೇಂದ್ರದ ವ್ಯಾಪ್ತಿಗೆ ಒಳಪಡುವ ಗ್ರಾಮದ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಪಿಯುಸಿ/ಎಸ್‌ಎಸ್‌ಎಲ್‌ಸಿ ತೇರ್ಗಡೆ ಹೊಂದಿರಬೇಕು. ಆಯ್ಕೆಯಾದವರಿಗೆ ತಿಂಗಳಿಗೆ 5,500 ರೂ. ಗೌರವಧನ ನೀಡಲಾಗುತ್ತದೆ. ಸಹಾಯಕಿಯರ ಹುದ್ದೆಗೆ ಎಸ್‌ಎಸ್‌ಎಲ್‌ಸಿ/7ನೇ ತರಗತಿ ತೇರ್ಗಡೆ ಹೊಂದಿರಬೇಕು ಹಾಗೂ 3,000 ರೂ. ಗೌರವಧನ ನೀಡಲಾಗುತ್ತದೆ. ಅರ್ಜಿದಾರರ ವಯೋಮಿತಿ 18ರಿಂದ 35 ವರ್ಷ ಇರಬೇಕು. ಅರ್ಜಿ ಸಲ್ಲಿಕೆ ಸೆ.3ರಿಂದ ಅ.3, 2026ರವರೆಗೆ ನಡೆಯಲಿದ್ದು, ಸೆ.3ರಂದು ಬೆಳಿಗ್ಗೆ 10.30ರಿಂದ ಅರ್ಜಿ ಸಲ್ಲಿಸಲು ಅವಕಾಶವಿದೆ. ಅ.3ರಂದು ಸಂಜೆ 5.30ಕ್ಕೆ ಅರ್ಜಿ ಸಲ್ಲಿಕೆಗೆ ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ. ದೂರವಾಣಿ: 08229-222286.

## ಡಾ.ಅಂಬೇಡ್ಕರ್ ದತ್ತಿ ಪ್ರಶಸ್ತಿಗೆ ಆಯ್ಕೆ

ಬೆಂಗಳೂರು: ಕರ್ನಾಟಕ ರಾಜ್ಯ ಎಸ್ಸಿ/ಎಸ್ಟಿ ಪತ್ರಿಕಾ ಸಂಪಾದಕರ ಸಂಘದ 2025ನೇ ಸಾಲಿನ ರಾಜ್ಯ ಮಟ್ಟದ ದತ್ತಿ ಪ್ರಶಸ್ತಿಗಳನ್ನು ಪ್ರಕಟಿಸಲಾಗಿದೆ. ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಹಾಗೂ 'ವಿಜಯಕಾಲ' ಸಂಪಾದಕ ಕೆ. ದೀಪಕ್ ಅವರಿಗೆ 'ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ದತ್ತಿ ಪ್ರಶಸ್ತಿ' ಲಭಿಸಿದೆ. ಕರ್ನಾಟಕ ದಲಿತ ಸಂಘರ್ಷ ಸಮಿತಿಯ ರಾಜ್ಯ ಸಂಚಾಲಕ ಗುರುಪ್ರಸಾದ್ ಕೆರಗೋಡು ಅವರಿಗೆ 'ಪ್ರೊ. ಬಿ. ಕೃಷ್ಣಪ್ಪ ದತ್ತಿ ಪ್ರಶಸ್ತಿ', ಮಾಹಿತಿ ಆಯೋಗದ ಆಯುಕ್ತ ಕೆ. ಬದರುದ್ದೀನ್ ಅವರಿಗೆ 'ಬಿ. ರಾಚಯ್ಯ ದತ್ತಿ ಪ್ರಶಸ್ತಿ' ಹಾಗೂ ಯುವ ಪತ್ರಕರ್ತ ಯತಿರಾಜ್ ಬ್ಯಾಲಹಳ್ಳಿ ಅವರಿಗೆ 'ಬಿ. ಬಸವಲಿಂಗಪ್ಪ ದತ್ತಿ ಪ್ರಶಸ್ತಿ' ಒಲಿದಿದೆ. ಪ್ರತಿಯೊಂದು ಪ್ರಶಸ್ತಿಯು ಹತ್ತು ಸಾವಿರ ರೂ. ನಗದು ಹಾಗೂ ಫಲಕವನ್ನು ಒಳಗೊಂಡಿದೆ.









### ವಾರ್ಷಿಕ ಗೌರವ ಪ್ರಶಸ್ತಿ

ದಾವಣಗೆರೆಯ 'ಕರ್ನಾಟಕ ಎಕ್ಸ್‌ಪ್ರೆಸ್' ಸಂಪಾದಕ ಚಂದ್ರಣ್ಣ, ಗುಲ್ಬರ್ಗದ 'ಬುದ್ಧ ಲೋಕ' ಸಂಪಾದಕ ದೇವೇಂದ್ರಪ್ಪ ಕಪ್ಪನೂರು, ದಾವಣಗೆರೆಯ 'ಜಗಳೂರು ವಾಯ್ಸ್' ಸಂಪಾದಕಿ ಬಿ.ಓ. ಕರಿಯಮ್ಮ, ಬಾಗಲಕೋಟೆಯ 'ಸುದಿನ' ಸಂಪಾದಕ ಸುಭಾಷ್ ಹೊದ್ಲೂರು ಹಾಗೂ ಬಳ್ಳಾರಿಯ 'ಬಳ್ಳಾರಿ ಬೆಳಗಾಯಿತು' ಸಂಪಾದಕ ಅನೂಪ್ ಕುಮಾರ್ ವಾರ್ಷಿಕ ಗೌರವ ಪ್ರಶಸ್ತಿಗೆ ಭಾಜನರಾಗಿದ್ದಾರೆ.

### ಪ್ರಶಸ್ತಿ ಪ್ರದಾನ ಸಮಾರಂಭ

ಸೆಪ್ಟೆಂಬರ್ 17ರಂದು ಬೆಂಗಳೂರಿನ ಕಬ್ಬನ್ ಪಾರ್ಕ್ ಆವರಣದ ಸರ್ಕಾರಿ ನೌಕರರ ಸಂಘದ ಸಭಾಂಗಣದಲ್ಲಿ ನಡೆಯುವ ಸಮಾರಂಭದಲ್ಲಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ಸಮಾಜ ಕಲ್ಯಾಣ ಸಚಿವ ಕೆ.ಹೆಚ್. ಮುನಿಯಪ್ಪ, ಶಾಸಕ ಎ.ಆರ್. ಕೃಷ್ಣಮೂರ್ತಿ, ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಆಯೇಷಾ ಖಾನಂ ಭಾಗವಹಿಸುವರು ಎಂದು ಸಂಘದ ಅಧ್ಯಕ್ಷ ಚಲುವರಾಜು, ಪ್ರಧಾನ ಕಾರ್ಯದರ್ಶಿ ಸೋಮಶೇಖರ್ ಕೆರಗೋಡು ತಿಳಿಸಿದ್ದಾರೆ

### ಮೈಸೂರು ವಿಭಾಗ ಮಟ್ಟದ ಆಹಾರ ಇಲಾಖೆಯ ಪ್ರಗತಿ ಪರಿಶೀಲನೆ ಸಭೆ

## ಅಕ್ರಮ ಸಕ್ಕರೆ ದಾಸ್ತಾನು ಪರಿಶೀಲಿಸಿ: ರಿಜ್ವಾನ್ ಅರ್ಷದ್

ಮೈಸೂರು: ಸಕ್ಕರೆಯ ಬೆಲೆಯಲ್ಲಿ ದಿಢೀರ್ ಏರಿಕೆಯಾಗಿದ್ದು, ಅಕ್ರಮವಾಗಿ ದಾಸ್ತಾನು ಮಾಡಿಕೊಂಡಿದ್ದಲ್ಲಿ ಪರಿಶೀಲನೆ ನಡೆಸಿ ಕೃತಕ ಅಭಾವ ಸೃಷ್ಟಿಯಾಗದಂತೆ ಜಾಗರೂಕರಾಗಿ ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಸಚಿವ ರಿಜ್ವಾನ್ ಅರ್ಷದ್ ತಿಳಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮೈಸೂರು ವಿಭಾಗ ಮಟ್ಟದ ಆಹಾರ ಇಲಾಖೆಯ ಪ್ರಗತಿ ಪರಿಶೀಲನೆ ಸಭೆ ನಡೆಸಿ ಮಾತನಾಡಿಸರು. ಕಾನೂನು ಮಾಪನ ಇಲಾಖೆಯ ಕೆಲಸ ನಿರ್ವಹಣೆಯ ಬಗ್ಗೆ ಸಾರ್ವಜನಿಕರಿಗೆ ತಿಳಿಯುತ್ತಿಲ್ಲ. ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಮಾಪನಗಳಲ್ಲಿ ಗ್ರಾಹಕರಿಗೆ ಮೋಸವಾಗುತ್ತಿರುವ ಕಡೆ ಹೆಚ್ಚು ದಾಳಿ ನಡೆಸಿ. ಆಹಾರ, ನಾಗರಿಕ ಸರಬರಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಬಡ ಜನರಿಗೆ ಆಹಾರ ಒದಗಿಸಿ ಸೇವೆ ಸಲ್ಲಿಸುವ ಇಲಾಖೆಯಾಗಿದ್ದು, ಉತ್ತಮ ಸೇವೆ ಸಲ್ಲಿಸಿ ಇಲಾಖೆಯ ಹೆಸರು ಸಮಾಜದಲ್ಲಿ ಉಳಿಯುವಂತೆ ಮಾಡಿ ಎಂದು ಹೇಳಿದರು.



ಎಲ್.ಪಿ.ಜಿ ಸಿಲೆಂಡರ್ ಗಳು ನಿಗದಿತ ಸಂಖ್ಯೆಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿ ಸಂಗ್ರಹಣೆಯಾಗಿದ್ದಲ್ಲಿ ಕಾನೂನು ರೀತ್ಯ ಕ್ರಮ ಕೈಗೊಳ್ಳಿ. ಮೈಸೂರು ವಿಭಾಗದ 8 ಜಿಲ್ಲೆಗಳಲ್ಲಿ 88424 ಜನರು ಇ.ಕೆವೈಸಿ ಮಾಡಿಸಿರುವುದಿಲ್ಲ. ಇದರ ಬಗ್ಗೆ ಅಧಿಕಾರಿಗಳು ಹೆಚ್ಚು ನಿಗಾ ವಹಿಸಿ ಪೂರ್ಣಗೊಳಿಸಬೇಕು. ವಲಸೆ ಹೋಗಿರುವುದು, ಮರಣ, ವಿವಾಹವಾಗಿ ಬೇರೆ ಸ್ಥಳಕ್ಕೆ ಸ್ಥಳಾಂತರ ಸೇರಿ ಇನ್ನಿತರೆ ಕಾರಣದಿಂದ ಇಕೆವೈಸಿ ಆಗಿರುವುದಿಲ್ಲ. ಪರಿಶೀಲನೆ ನಡೆಸಿ ಷರಾದಲ್ಲಿ ನಮೂದಿಸಿ ಕೇಂದ್ರ ಕಚೇರಿಗೆ ಕಳುಹಿಸಿಕೊಡಿ ನಂತರ ಪಡಿತರ ಚೀಟಿ ರದ್ದು ಪಡಿಸುವ ಬಗ್ಗೆ ನಿರ್ಣಯ ಕೈಗೊಳ್ಳಲಾಗುವುದು. ಪಡಿತರ ಆಹಾರ ಧಾನ್ಯ ಸಾಗಾಣಿಕೆ ವಾಹನಗಳಿಗೆ ಸಂಬಂಧಿಸಿದಂತೆ ಮೈಸೂರು ವಿಭಾಗದ 8 ಜಿಲ್ಲೆಗಳಲ್ಲಿ 371 ವಾಹನಗಳಿದ್ದು ಅದರಲ್ಲಿ 176 ವಾಹನಗಳಿಗೆ ಮಾತ್ರ ಜಿ.ಪಿ.ಎಸ್ ಅಳವಡಿಸಲಾಗಿದೆ. 195 ವಾಹನಗಳಿಗೆ ಜಿ.ಪಿಎಸ್ ಅಳವಡಿಸಬೇಕಿದ್ದು, 15 ದಿನದೊಳಗಾಗಿ ಜಿ.ಪಿ.ಎಸ್ ಅಳವಡಿಸಿ ವರದಿ ನೀಡುವಂತೆ ತಿಳಿಸಿದರು.

ಅಕ್ರಮ ಆಹಾರ ದಾಸ್ತಾನು ಮಾಡಿರುವ ಸ್ಥಳಗಳ ಮೇಲೆ ಹೆಚ್ಚು ದಾಳಿಗಳನ್ನು ನಡೆಸಬೇಕು. ಇಲಾಖೆ ಕಾರ್ಯನಿರ್ವಹಣೆ ಕುರಿತಂತೆ ನಿಗದಿತವಾಗಿ ವರದಿಯನ್ನು ಕಳುಹಿಸಿಕೊಡಬೇಕು, ವರದಿಯನ್ನು ಪ್ರತಿ ವಾರ ಪರಿಶೀಲಿಸಲಾಗುವುದು. ಕಾನೂನು ಮಾಪನ ಶಾಸ್ತ್ರ ಇಲಾಖೆಯ ಉಪ ನಿಯಂತ್ರಕರಾದ ಸರಳಾ ನಾಯ್ಡು ಹಾಗೂ ಆಹಾರ ಇಲಾಖೆ ಜಂಟಿ ನಿರ್ದೇಶಕ ಮಂಟೇಸ್ವಾಮಿ ಇಲಾಖೆಯ ಕಾರ್ಯನಿರ್ವಹಣೆಯ ಬಗ್ಗೆ ವಿವರ ನೀಡಿದರು. ಸಭೆಯಲ್ಲಿ ಆಹಾರ ಇಲಾಖೆ ಕಾರ್ಯದರ್ಶಿ ಕನಗವಲ್ಲಿ, ಆಯುಕ್ತೆ ಪೂರ್ಣಿಮಾ, ನಿರ್ದೇಶಕ ರಾಜಶೇಖರ್, ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಪ್ರಧಾನ ವ್ಯವಸ್ಥಾಪಕ ಮಂಜುನಾಥ್ ಸೇರಿ ಇನ್ನಿತರರು ಉಪಸ್ಥಿತರಿದ್ದರು.



## ಕೃಷ್ಣ ವಂದನ

ಸ್ನೇಹಾ ಆನಂದ್



### ಹೇ ಕೃಷ್ಣಾ !

ರಾಮ,ಶ್ಯಾಮರು ಸದನಕೆ ಬಂದರು
ಕದವ ತೆಗೆಯಿರಿ|
ಕಲ್ಪವೃಕ್ಷವೇ ಕಂಡಂತಾಯ್ತು ಬಾಗಿ ನಮಿಸಿರಿ||

ಪನ್ನೀರೆರದು ಚರಣ ತೊಳೆದು ಪಾವನರಾಗಿರಿ|
ಮಣಿಯ ಹಾಕಿ ಹೂವ ತೋರಣ ನೀವು ಕಟ್ಟಿರಿ|
ಪದವ ಪಾಡಿ ಪರಿಮಳದ ಪಾನಕ ತನ್ನಿರಿ|
ಕರಗಳನ್ನು ಹಿಡಿದುಕೊಂಡು ಅಭಯ ಬೇಡಿರಿ||

ಛತ್ರ, ಚಾಮರ ತಂದು ನೀವು ಪಕ್ಕದಿ ನಿಲ್ಲಿರಿ|
ನಸುನಗುತ ಭಕ್ತಿಯಿಂದ ಚಾಮರ ಬೀಸಿರಿ|
ನೊರೆ ಹಾಲನು ಹದವಾಗಿ ನೀವು ಕಾಸಿರಿ|
ರುಚಿಯಾದ ಬೆಣ್ಣೆ ಕಡೆದು ಭರಣಿ ತುಂಬಿರಿ||

ಶಬರಿ ರಾಮ, ಸುಧಾಮ ಸಖನೆಂದು ಪೊಗಳಿರಿ|
ಸೀತಾರಾಮ,ರಾಧಕೃಷ್ಣರಿಗೆ ನೈವೇದ್ಯ ನೀಡಿರಿ|
ಹರೇ ರಾಮ,ಹರೇ ಕೃಷ್ಣರೆಂದು ನೆನೆಯಿರಿ|
ಹೇಮಗಿರೀಶನೆಂದು ನೀವು ಓಲೈಸಿ ಕರೆಯಿರಿ ||

ರಾಸಾಯನಿಕ ಬಣ್ಣಗಳನ್ನು ಬಳಸಿದ, ಪಿಓಪಿಯಿಂದ ತಯಾರಾದ

# ಗಣೇಶ, ಗೌರಿ ಮೂರ್ತಿಗಳಿಗೆ ನಿಷೇಧ

- ಮಾರ್ಗಸೂಚನೆಗಳ ಪಾಲನೆಗೆ ಜಿಲ್ಲಾಧಿಕಾರಿ ಕರೆ
- ತಾಲ್ಲೂಕು ಮಟ್ಟದ ಸಮಿತಿಗಳ ರಚನೆ

ರಾಮನಗರ: ಪ್ಲಾಸ್ಟರ್ ಆಫ್ ಪ್ಯಾರೀಸ್‌ನಿಂದ (ಪಿಒಪಿ) ತಯಾರಿಸದ ಗಣೇಶ ಮತ್ತು ಗೌರಿ ಮೂರ್ತಿಗಳು, ರಾಸಾಯನಿಕ/ಭಾರ ಲೋಹ ಆಧಾರಿತ ಬಣ್ಣಗಳನ್ನು ಬಳಸಿದ ಮೂರ್ತಿಗಳನ್ನು ಜಿಲ್ಲೆಯಲ್ಲಿ ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಯಶವಂತ್ ವಿ ಗುರುಕರ್ ತಿಳಿಸಿದ್ದಾರೆ.



ಈ ಸಂಬಂಧ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಗಣೇಶ ಹಾಗೂ ಗೌರಿ ಮೂರ್ತಿಗಳ ತಯಾರಿಕೆ, ಸಂಗ್ರಹಣೆ, ಮಾರಾಟ, ಸಾಗಾಣಿಕೆ, ಪ್ರತಿಷ್ಠಾಪನೆ, ತಪಾಸಣೆ, ನಿಯಂತ್ರಣ, ವಿಸರ್ಜನೆಯನ್ನು ನಿಷೇಧಿಸಲಾಗಿದೆ. ಪರಿಸರ ಸ್ನೇಹಿ ಗಣೇಶೋತ್ಸವ ಆಚರಣೆ ಹಾಗೂ ತಾಲ್ಲೂಕು ಮಟ್ಟದ ಕಾರ್ಯಾಚರಣೆ ಮತ್ತು ಉಸ್ತುವಾರಿ ಸಮಿತಿ ರಚನೆಯ ಕುರಿತು ಸಂಪೂರ್ಣ ಮಾರ್ಗಸೂಚಿಗಳನ್ನು ಹೊರಡಿಸಲಾ ಗಿದೆ ಅವರು ತಿಳಿಸಿದ್ದಾರೆ. ಪಿಒಪಿ ಮತ್ತು ರಾಸಾಯನಿಕ/ಭಾರ ಲೋಹ ಆಧಾರಿತ ಬಣ್ಣಗಳಿಂದ ತಯಾರಿಸಿದ ಮೂರ್ತಿಗಳು ನೀರಿನಲ್ಲಿ ಕರಗದೆ ಜಲಮೂಲಗಳ ಆಮ್ಲಜನಕ ಕುಗ್ಗಿಸುವುದು, ಕಾಯಂ ಗಡಸುತನ ಹೆಚ್ಚಿಸುವುದು ಹಾಗೂ ಪಾದರಸ, ಆರ್ಸೆನಿಕ್, ಸೀಸ, ಕ್ರೋಮಿಯಂ, ತಾಮ್ರ, ಕ್ಯಾಡ್ಮಿಯಂ, ಕೋಬಾಲ್ಟ್ ಮತ್ತು ಸತುವುಗಳಂತಹ ವಿಷಕಾರಿ ಭಾರ ಲೋಹಗಳನ್ನು ಜಲಮೂಲಗಳಿಗೆ ಬಿಡುಗಡೆ ಮಾಡಿ ಜಲಚರಗಳಿಗೆ ಹಾನಿ ಹಾಗೂ ಸಾರ್ವಜನಿಕ ಆರೋಗ್ಯಕ್ಕೆ ತೀವ್ರ ಅಪಾಯವನ್ನುಂಟುಮಾಡುವುದನ್ನು ತಡೆಯಲು ಕ್ರಮವಹಿಸುವಂತೆ ಮತ್ತು ಜಿಲ್ಲೆಯ ಎಲ್ಲಾ ತಾಲ್ಲೂಕು ವ್ಯಾಪ್ತಿಯಲ್ಲಿ ಕಟ್ಟುನಿಟ್ಟಾಗಿ ಜಾರಿಗೊಳಿಸಲು ಮಾರ್ಗಸೂಚಿಗಳನ್ನು ನೀಡಲಾಗಿದೆ. ಈ ಮಾರ್ಗಸೂಚಿಗಳನ್ನು ತಾಲ್ಲೂಕು ಮಟ್ಟದಲ್ಲಿ ಸಂಪೂರ್ಣವಾಗಿ ಅನುಷ್ಠಾನಗೊಳಿಸಲು, ಅನುಮತಿ ನೀಡಲು ಹಾಗೂ ಹಬ್ಬದ ಪ್ರತಿಯೊಂದು ಚಟುವಟಿಕೆಗಳನ್ನು ಉಸ್ತುವಾರಿ ಮಾಡಲು ಕಂದಾಯ ಇಲಾಖೆಯ ತಹಶೀಲ್ದಾರ್ ಅಧ್ಯಕ್ಷತೆಯಲ್ಲಿ ನಗರ ಸ್ಥಳೀಯ ಸಂಸ್ಥೆ, ವಿದ್ಯುತ್ ಇಲಾಖೆ, ಪೊಲೀಸ್ ಇಲಾಖೆ, ಅಗ್ನಿಶಾಮಕ ಇಲಾಖೆ, ಪರಿಸರ ಇಲಾಖೆ ಹಾಗೂ ಸಾರಿಗೆ ಇಲಾಖೆಯ ಅಧಿಕಾರಿಗಳನ್ನೊಳಗೊಂಡ ತಾಲ್ಲೂಕು ಮಟ್ಟದ ಸಮಿತಿಯನ್ನು ರಚಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

**ಸಮಿತಿಗಳಿಗೆ ಮಾರ್ಗಸೂಚಿಗಳು:**

ಸಂಪೂರ್ಣ ನಿಷೇಧ: ಕರ್ನಾಟಕ ಸರ್ಕಾರವು ಪರಿಸರ (ಸಂರಕ್ಷಣೆ) ಕಾಯ್ದೆ, 1986ರ ಕಲಂ 5ರ ಅಡಿಯಲ್ಲಿ ಸರ್ಕಾರಿ ಆದೇಶದ ಮೂಲಕ ಭಾರ ಲೋಹ ಆಧಾರಿತ ರಾಸಾಯನಿಕ ಬಣ್ಣಗಳಿಂದ ಲೇಪಿತವಾದ ಪಿಒಪಿ ಮೂರ್ತಿಗಳ ತಯಾರಿಕೆ, ಮಾರಾಟ ಮತ್ತು ವಿಸರ್ಜನೆಯನ್ನು ರಾಜ್ಯಾದ್ಯಂತ ಸಂಪೂರ್ಣವಾಗಿ ನಿಷೇಧಿಸಿದೆ. ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು, ರಿಟ್ ಅರ್ಜಿ ಸಂಖ್ಯೆ 24118/2025 ರಲ್ಲಿ ಈ ನಿಷೇಧವನ್ನು ಕಟ್ಟುನಿಟ್ಟಾಗಿ ಮತ್ತು ಸಂಪೂರ್ಣವಾಗಿ ಜಾರಿಗೊಳಿಸಲು ನಿರ್ದೇಶಿಸಿದೆ. ಹಾಗೂ ಮಂಡಳಿಯು ದಿನಾಂಕ 05.08.2026 ರ ಸುತ್ತೋಲೆಯ ಮೂಲಕ ಈ ನಿರ್ದೇಶನಗಳನ್ನು ಪುನರುಚ್ಚರಿಸಿದ್ದು, ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿಒಪಿ), ರಾಸಾಯನಿಕ/ಭಾರ ಲೋಹ ಆಧಾರಿತ ಬಣ್ಣಗಳಿಂದ ಅಲಂಕರಿಸಿದ ಗೌರಿ-ಗಣೇಶ ಮೂರ್ತಿಗಳ ತಯಾರಿಕೆ, ಸಂಗ್ರಹಣೆ, ಮಾರಾಟ, ವಿತರಣೆ, ಪ್ರದರ್ಶನ ಮತ್ತು ಬಳಕೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.

ಜೇಡಿಮಣ್ಣು/ಮಣ್ಣು ಮತ್ತು ಇತರ ಜೈವಿಕವಾಗಿ ವಿಘಟನೀಯ ಪರಿಸರ ಸ್ನೇಹಿ ವಸ್ತುಗಳಿಂದ ಮಾಡಿದ ಮೂರ್ತಿಗಳ ತಯಾರಿಕೆ ಮತ್ತು ಬಳಕೆಗೆ ಮಾತ್ರ ಅನುಮತಿ ನೀಡಬೇಕು. ಮಾರ್ಗದಸೂಚಿಗಳನ್ನು ಪರಿಣಾಮಕಾರಿಯಾಗಿ ಜಾರಿಮಾಡಲು ವಿವಿಧ ಇಲಾಖೆಗಳ ನಡುವೆ ಸಮನ್ವಯ ಜಾರಿಯಾಗಬೇಕು. ಪಿಒಪಿ ಮೂರ್ತಿಗಳ ತಯಾರಿಕೆ ಮತ್ತು ಮಾರಾಟವನ್ನು ತಡೆಗಟ್ಟಲು ತಯಾರಿಕಾ ಘಟಕಗಳು, ಸಂಗ್ರಹಣಾ ಗೋದಾಮುಗಳು ಮತ್ತು ಮಾರಾಟ ಕೇಂದ್ರಗಳ ಮುಂಗಡ ತಪಾಸಣೆ ನಡೆಸಬೇಕು. ಸಾರ್ವಜನಿಕ ಸ್ಥಳಗಳಲ್ಲಿ ತಯಾರಿಸಿದ. ಸಂಗ್ರಹಿಸಿದ ಅಥವಾ ಮಾರಾಟಕ್ಕೆ ಇಟ್ಟಿರುವ ಪಿಒಪಿ ಮೂರ್ತಿಗಳನ್ನು ಜಪ್ತಿ ಮಾಡುವುದು ಮತ್ತು ಸಂಬಂಧಪಟ್ಟ, ವ್ಯಕ್ತಿಗಳು/ಘಟಕಗಳ ವಿರುದ್ಧ ಕಾನೂನು ಕ್ರಮ ಜರುಗಿಸಲು ಜಿಲ್ಲಾಧಿಕಾರಿಗಳು ಸೂಚಿಸಿದ್ದಾರೆ.

# ಸರ್ಕಾರದ ದ್ವಂದ್ವ ನೀತಿಗೆ ವಿರೋಧ

ರಾಮನಗರ: ಬಿಡದಿ ಸಮಗ್ರ ನಗರ ಯೋಜನೆ ವಿಚಾರದಲ್ಲಿ ರಾಜ್ಯ ಸರ್ಕಾರ ದ್ವಂದ್ವ ನೀತಿ ಅನುಸರಿಸುತ್ತಿದೆ ಎಂದು ಜನತಾ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಜೈಪ್ರಕಾಶ್ ಅಸಮಾಧಾನ ವ್ಯಕ್ತಪಡಿಸಿದರು.

ಜಿಲ್ಲಾ ಜನತಾ ಪಕ್ಷದ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. ಯೋಜನೆಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಹೈಕೋರ್ಟಿನಲ್ಲಿಪರಿಹಾರಮೊತ್ತಇತ್ಯಾರ್ಥವಾಗುವವರೆಗೂ ಭೂಸ್ವಾಧೀನ ಮಾಡುವುದಿಲ್ಲ ಎಂದು ಪ್ರಮಾಣ ಪತ್ರ ಸಲ್ಲಿಸಿದೆ. ಇನ್ನೊಂದೆಡೆ ಜಿಬಿಡಿಎ ಭೂಸ್ವಾಧೀನಕ್ಕೆ ಒಪ್ಪಿರುವ ರೈತರಿಗೆ ಪರಿಹಾರವನ್ನು ವಿತರಿಸುತ್ತಿದೆ. ಇದು ಸರ್ಕಾರದ ದ್ವಂದ್ವ ನೀತಿ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಯೋಜನೆ ಸಧ್ಯ ನ್ಯಾಯಾಲಯದಲ್ಲಿದೆ. ಆದರೂ ಪರಿಹಾರ ವಿತರಿಸುತ್ತಿರುವುದು ನ್ಯಾಯಾಲಯಕ್ಕೆ ಜಿಬಿಡಿಎ ಅಪಮಾನ ಮಾಡುತ್ತಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

**ದೆಹಲಿಯಲ್ಲಿ ಹೋರಾಟ:**

ಬಿಡದಿ ಸಮಗ್ರ ನಗರ ಯೋಜನೆಯನ್ನು ಕೈಬಿಡಬೇಕು ಎಂದು ರಾಜ್ಯ ಸರ್ಕಾರವನ್ನು ಆಗ್ರಹಿಸಿ ದೆಹಲಿಯ ಜಂತರ್ ಮಂತರ್‌ನಲ್ಲಿ ಹೋರಾಟ ನಡೆಸುವುದಾಗಿ ಜೈಪ್ರಕಾಶ್ ತಿಳಿಸಿದರು. ಸ್ಮಾರ್ಟ್




ಸಿಟಿ ಹೆಸರಿನಲ್ಲಿ ಅಪಾರ್ಟ್‌ಮೆಂಟ್‌ಗಳನ್ನು ನಿರ್ಮಿಸಿದರೆ ಸುತ್ತಮುತ್ತ ಇರುವ ಹಳ್ಳಿಗಳಿಗೆ ಅಪಾಯ ಎದುರಾಗಲಿದೆ. ಕೂಡಲೇ ಸರ್ಕಾರ ಈ ಯೋಜನೆಯನ್ನು ಕೈಬಿಡಬೇಕು. ಅನ್ನ ಬೆಳೆಯುವ ಭೂಮಿಯನ್ನು ಬಲವಂತವಾಗಿ ಕಸಿಯ ಬಾರದು ಎಂದು ರಾಜ್ಯ ಸರ್ಕಾರವನ್ನು ಆಗ್ರಹಿಸಿದರು. ತಮ್ಮ ಮನವಿಗೆ ಮುಖ್ಯಮಂತ್ರಿಗಳು ಸ್ಪಂದಿಸದಿದ್ದಲ್ಲ, ಅವರ ಪಕ್ಷದ ರಾಷ್ಟ್ರೀಯ ವರಿಷ್ಠ ರಾಹುಲ್ ಗಾಂಧಿಯವರ ಗಮನ ಸೆಳೆಯಲು ಎಐಸಿಸಿ ಕಚೇರಿಯ ಮುಂಭಾಗವೂ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಸಿದರು.

ಜನತಾ ಪಕ್ಷದ ಪದಾಧಿಕಾರಿಗಳಾದ ವಿನಯ್ ಕುಮಾರ್, ಮೀನಾಕ್ಷಮ್ಮ ನಾಗೇಶ್, ರೈತ ಸಂಘದ ಜಿಲ್ಲಾಧ್ಯಕ್ಷ ಎಲ್. ಬೈರೇಗೌಡ, ರೈತ ಮುಖಂಡರಾದ ಕೃಷ್ಣ, ಪುಷ್ಪಲತಾ, ಹೊಸೂರು ಶ್ರೀನಿವಾಸ್, ರಾಮಕೃಷ್ಣಪ್ಪ ಮುಂತಾದವರು ಇದ್ದರು.

# ಶ್ರೀರಾಮ ಮಂದಿರ ಪ್ರತಿಷ್ಠಾಪನೆ

ಚಾಮರಾಜನಗರ: ತಾಲೂಕಿನ ಬಿಸಲವಾಡಿ ಗ್ರಾಮದ ಕುಂಬಾರ ಬೀದಿಯಲಿ ನೂತನವಾಗಿ ನಿರ್ಮಿಸಲಾಗಿರುವ ಶ್ರೀರಾಮ ಮಂದಿರದ ಪ್ರತಿ?ಾ?ಠಪನಾ ಮಹೋತ್ಸವವು ನೆರವೇರಿತು.

ಈ ಸಂದರ್ಭದಲ್ಲಿ ಪಶುಸಂಗೋಪನೆ, ರೇ??ಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸಿ. ಪುಟ್ಟರಂಗಶೆಟ್ಟಿ ಅವರು ನೂತನ ಶ್ರೀರಾಮ ಮಂದಿರವನ್ನು ಉದ್ಘಾಟಿಸಿದರು. ಬಳಿಕ ಮಾತನಾಡಿದ ಸಚಿವ ಸಿ. ಪುಟ್ಟರಂಗಶೆಟ್ಟಿ, ಶ್ರೀರಾಮನ ಹೆಸರಿನಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಮಂದಿರವನ್ನು ಉದ್ಘಾಟಿಸಿರುವುದು ಸಂತಸ ತಂದಿದೆ. ಶ್ರೀರಾಮನು ಪ್ರತಿಯೊಬ್ಬರಿಗೂ ಉತ್ತಮ ಆರೋಗ್ಯ, ನೆಮ್ಮದಿ ಹಾಗೂ ಸುಖ-ಸಮೃದ್ಧಿಯನ್ನು ಕರುಣ ಸಲಿ ಎಂದು ಪ್ರಾರ್ಥಿಸಿದರು.

ರಾಜ್ಯ ಹಾಗೂ ಜಿಲ್ಲೆಯಲ್ಲಿ ಬರದ ಪರಿಸ್ಥಿತಿ ನಿರ್ಮಾಣವಾಗಿರುವ ಹಿನ್ನೆಲೆಯಲ್ಲಿ ಉತ್ತಮ ಮಳೆಯಾಗಿ, ರೈತರಿಗೆ ಉತ್ತಮ ಬೆಳೆ ದೊರೆಯಲಿ. ಜನರು ನೆಮ್ಮದಿಯಿಂದ ಜೀವನ ನಡೆಸುವಂತಾಗಲಿ ಎಂದು ದೇವರಲ್ಲಿ ಪ್ರಾರ್ಥಿಸೋಣ ಎಂದು ಹೇಳಿದರು.ತಮ್ಮ ಕ್ಷೇತ್ರದ ವ್ಯಾಪ್ತಿಯಲ್ಲಿ ದೇವಸ್ಥಾನಗಳ ನಿರ್ಮಾಣ ಹಾಗೂ ಅಭಿವೃದ್ಧಿ



ಕಾಮಗಾರಿಗಳಿಗೆ ಸುಮಾರು 5 ಕೋಟಿ ಅನುದಾನ ನೀಡಲಾಗಿದೆ. ಮಂಟೇಸ್ವಾಮಿ, ಸಿದ್ದಪ್ಪಾಜಿ, ಮಾರಮ್ಮ ದೇವಸ್ಥಾನ ಸೇರಿದಂತೆ ವಿವಿಧ ದೇವ ಸ್ಥಾನಗಳ ಅಭಿವೃದ್ಧಿಗೆ ಅನುದಾನ ಕಲ್ಪಿಸಲಾಗಿದೆ ಎಂದರು. ಅದೇ ರೀತಿ ಹರದನಹಳ್ಳಿಯ ದಿವ್ಯಲಿಂಗೇಶ್ವರಸ್ವಾಮಿ ದೇವಸ್ಥಾನದ ಅಭಿವೃದ್ಧಿಗೆ 3.60 ಕೋಟಿ ವೆಚ್ಚದಲ್ಲಿ ಕಾಮಗಾರಿಗಳು ನಡೆಯುತ್ತಿದೆ ಎಂದು ಸಚಿವರು ತಿಳಿಸಿದರು ವೇಳೆ ಮುಖಂಡರಾದ ಪಿ.ಎಲ್.ಡಿ, ಬ್ಯಾಂಕ್ ನಿರ್ದೇಶಕ ರವಿ, ಮಹದೇವಪ್ಪ ಶೇಖರ್, ನಂದೇಶ್, ಸಿದ್ದಮಲ್ಲು, ಶಿವಸ್ವಾಮಿ, ನಾರಾಯಣ ನಾಯಕ ಸೇರಿದಂತೆ ಬಿಸಲವಾಡಿಗ್ರಾಮದ ಸಮುದಾಯಗಳ ಮುಖಂಡರು ಅರ್ಚಕರಾದ ರಂಗಪ್ಪ, ಸಮಿತಿಯ ಸದಸ್ಯರು ಕುಂಬರ ಜನಾಂಗದ ಯಜಮಾನರು, ಗ್ರಾಮಸ್ಥರು, ಭಾಗವಹಿಸಿದ್ದರು.

# ನೂತನ ಎಸ್ಪಿಯಾಗಿ ರೋಹನ್ ಜಗದೀಶ್

## ಕಾನೂನಾತ್ಮಕವಾಗಿ ಎಷ್ಟು ಸಾಧ್ಯವೋ ಅಷ್ಟು ಸಹಾಯ ಮಾಡಲು ಪೊಲೀಸ್ ಅಧಿಕಾರಿ ಸೂಚನೆ

ರಾಮನಗರ: ಪೊಲೀಸ್ ಠಾಣೆಗೆ ಜನರು ನೋವಿನಿಂದ ಬರುತ್ತಾರೆ. ನೊಂದ ಜನರ ಕಣ್ಣೀರು ಒರೆಸುವ ಕೆಲಸ ಮಾಡಬೇಕೇ ಹೊರತು ಮತ್ತಷ್ಟು ನೋವು ಕೊಡುವ ಕೆಲಸ ಮಾಡಬಾರದು ಎಂದು ಅಧಿಕಾರಿಗಳು ಮತ್ತು ಇಲಾಖೆಯ ಸಿಬ್ಬಂದಿಗೆ ಸೂಚನೆ ನೀಡಿದ್ದೇನೆ ಎಂದು ನೂತನ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಹೇಳಿದರು.

ನಗರದ ಪೊಲೀಸ್ ಭವನದಲ್ಲಿ ಬೆಂಗಳೂರು ದಕ್ಷಿಣ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯಾಗಿ ಅಧಿಕಾರ ಸ್ವೀಕರಿಸಿದ ತರುವಾಯ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ಜನರ ದೂರನ್ನು ತಾಳ್ಮೆಯಿಂದ ಆಲಿಸಿ, ಕಾನೂನಾತ್ಮಕವಾಗಿ ನಮ್ಮಿಂದ ಎಷ್ಟು ಸಾಧ್ಯವೊ ಅಷ್ಟು ಸಹಾಯ ಮಾಡಬೇಕು. ವಿನಾಃ ಕಾರಣ ಜನರಿಗೆ ನೋವುಂಟು ಮಾಡುವ, ಕಾಯಸುವ ಅಥವಾ ಮಾನಸಿಕವಾಗಿ ಕಿರುಕುಳ ನೀಡುವಂತಹ ಕೆಲಸ ಮಾಡಬಾರದೆಂದು ತಿಳಿಸಿರುವುದಾಗಿ ಹೇಳಿದರು.



**ಸಮಾಜಘಾತುಕ ಶಕ್ತಿಗಳ ವಿರುದ್ಧ ಕಠಿಣ ಕ್ರಮ :**

ನಾನು ದಕ್ಷಿಣ ಕನ್ನಡ ಜಿಲ್ಲೆ, ಶಿವಮೊಗ್ಗ, ಬೆಳಗಾವಿ ನಗರ ಹಾಗೂ ಗದಗದಲ್ಲಿ ಕಾರ್ಯ ನಿರ್ವಹಿಸಿದ್ದೇನೆ. ಸುಮಾರು 7 ವರ್ಷಗಳ ಸೇವೆಯಲ್ಲಿ ಪೊಲೀಸರು ಮತ್ತು ಜನರ ನಡುವಿನ ಅಂತರ ಕಡಿಮೆ ಮಾಡಿ ಬಾಂಧವ್ಯ ಗಟ್ಟಿಗೊಳಿಸಿ ಪೊಲೀಸ್ ಇಲಾಖೆಯನ್ನು ಜನಸ್ನೇಹಿಯನ್ನಾಗಿ ರೂಪಿಸಿದ್ದೇನೆ.

ನಾನು ಕೆಲಸ ಮಾಡಿರುವ ಎಲ್ಲಾ ಜಿಲ್ಲೆಗಳಲ್ಲಿ ಜನಸಾಮಾನ್ಯರ ಹೃದಯ ಗೆದ್ದಿದ್ದೇನೆ. ಅದೇ ರೀತಿ ಈ ಜಿಲ್ಲೆಯಲ್ಲಿಯೂ ಜನರ ಮನಸ್ಸು ಗೆಲ್ಲುವ ಪ್ರಯತ್ನ ಮಾಡುತ್ತೇನೆ. ಒಳ್ಳೆಯವರಿಗೆ ಒಳ್ಳೆಯ ರೀತಿ ಕೆಲಸ ಮಾಡಿ, ಸಮಾಜದ ಶಾಂತಿ ಸುವ್ಯವಸ್ಥೆ ಕದಡುವುದನ್ನೇ ಪ್ರವೃತ್ತಿ ಮಾಡಿಕೊಂಡಿರುವ ಸಮಾಜಘಾತುಕ ಶಕ್ತಿಗಳ ವಿರುದ್ಧ ಕಾನೂನು ಪ್ರಕಾರ ಕಠಿಣ ರೀತಿಯಲ್ಲಿ ಕ್ರಮ ಕೈಗೊಳ್ಳುತ್ತೇವೆ ಎಂದು ಹೇಳಿದರು.

ಇಲಾಖೆಯ ಮೇಲಾಧಿಕಾರಿಗಳು, ಅಧಿಕಾರಿಗಳು ಹಾಗೂ ಸಿಬ್ಬಂದಿಗಳೆಂಬ ಬೇಧ ಭಾವ ಇಲ್ಲದೆ ಎಲ್ಲರನ್ನು ಒಟ್ಟಿಗೆ ಕರೆದೊಯ್ಯುತ್ತೇನೆ. ಯಾವುದೇ ಕಾನೂನು ಬಾಹಿರ ಚಟುವಟಿಕೆ ಇರಲಿ ಎಲ್ಲರ ಸಲಹೆ ಸೂಚನೆ ಮೇರೆಗೆ ಕಾನೂನು ಮತ್ತು ನೈತಿಕವಾಗಿ ಎಲ್ಲ ರೀತಿಯಲ್ಲೂ ನಿರ್ವಹಿಸಿ ಅದಕ್ಕೆ ಕಾನೂನು ಪ್ರಕಾರ ಪರಿಹಾರ ಕಂಡುಕೊಳ್ಳುತ್ತೇವೆ.

ನಾವೆಲ್ಲರು ಒಂದು ತಂಡವಾಗಿ ಉತ್ತಮವಾಗಿ ಕೆಲಸ ಮಾಡುತ್ತೇವೆ. ಸವಾಲುಗಳು ಇದ್ದೇ ಇರುತ್ತವೆ. ಎಲ್ಲರ ಜೊತೆಗೆ ಒಟ್ಟಾಗಿ ಕೆಲಸ ಮಾಡಿದರೆ ಪ್ರತಿ ಸವಾಲಿಗೂ ಪರಿಹಾರ ಕಂಡುಕೊಳ್ಳಲು ಸಾಧ್ಯವಿದೆ. ಇದಕ್ಕೆ ಎಲ್ಲರ ಸಹಕಾರವೂ ಬೇಕಿದೆ ಎಂದು ರೋಹನ್ ಜಗದೀಶ್ ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ರಾಜೇಂದ್ರ ಹಾಜರಿದ್ದರು.

### ಐಎಎಸ್, ಐಪಿಎಸ್ ಆಗುವುದು ಹೇಗೆ? ಸಲಹೆ ನೀಡಲು ಸಿದ್ದ

ರೋಹನ್ ಜಗದೀಶ್ ಕರ್ನಾಟಕ ರಾಜ್ಯದವರೇ ಆಗಿರುವ ನೂತನ ಎಸ್ಪಿ ರೋಹನ್ ಜಗದೀಶ್ 1991ರಲ್ಲಿ ಜನಿಸಿದ್ದಾರೆ. 2019ರಲ್ಲಿ ಐಪಿಎಸ್ ಪೂರೈಸಿದ್ದಾರೆ. ಇಲ್ಲಿಯವರೆಗೆ 7 ವರ್ಷ ಕರ್ತವ್ಯಾವಧಿ ಪೂರೈಸಿದ್ದಾರೆ. ಬಿ.ಎ ಪದವೀಧರರಾದ ಇವರು ಬೆಂಗಳೂರಿನ ಯೂನಿವರ್ಸಿಟಿ ಲಾ ಕಾಲೇಜಿನಲ್ಲಿ ಎಲ್.ಎಲ್.ಬಿ ಪದವಿ ಪೂರೈಸಿದ್ದಾರೆ. ಗದಗ ಜಿಲ್ಲೆಯ ಪೊಲೀಸ್ ವರಿಷ್ಠಾಧಿಕಾರಿಯಾಗಿದ್ದ ಇವರು ಸರ್ಕಾರದ ಆದೇಶದ ಮೇರೆಗೆ ಬೆಂಗಳೂರು ದಕ್ಷಿಣ ಜಿಲ್ಲೆಗೆ ವರ್ಗಾವಣೆ ಆಗಿದ್ದಾರೆ.

ಐಪಿಎಸ್ ಅಧಿಕಾರಿಯಾಗಿರುವ ರೋಹನ್ ಜಗದೀಶ್ ಯುವ ಸಮುದಾಯಕ್ಕೆ ಸ್ಫೂರ್ತಿಯಾಗಬಲ್ಲರು. ಟಿಕೆಟ್ ಟು ಸಿವಿಲ್ ಸರ್ವಿಸಸ್ ಮತ್ತು ಕನ್ನಡದಲ್ಲಿ ಐಎಎಸ್, ಐಪಿಎಸ್ ಆಗುವುದು ಹೇಗೆ ಎಂಬ ಪುಸ್ತಕಗಳನ್ನು ಬರೆದಿದ್ದಾರೆ. ಇವರೆಡು ಪುಸ್ತಕಗಳು ಯುಪಿಎಸ್ಸಿ ಪರೀಕ್ಷೆ ತೆಗೆದುಕೊಳ್ಳುವ ಅಭ್ಯರ್ಥಿಗಳಿಗೆ ಸಹಾಯಕವಾಗುತ್ತಿವೆ. ಯುಪಿಎಸ್ಸಿ ಪರೀಕ್ಷೆಗಳನ್ನು ಬರೆಯಲಿಚ್ಚಿಸುವ ವಿದ್ಯಾರ್ಥಿಗಳಿಗೆ ಸಲಹೆಗಳನ್ನು ನೀಡಲು ತಾವು ಉತ್ಸುಕರಾಗಿರುವುದಾಗಿ ಅವರು ತಿಳಿಸಿದ್ದಾರೆ.

### ಪೊಲೀಸರಿಗೆ ಅಗೌರವ ಸಹಿಸುವುದಿಲ್ಲ

ಪೊಲೀಸರು ಮತ್ತು ಜನರ ನಡುವಿನ ಅಂತರ ಕಡಿಮೆ ಮಾಡಿ ಬಾಂಧವ್ಯ ಗಟ್ಟಿಗೊಳಿಸಬೇಕು. ಆ ಮೂಲಕ ಪೊಲೀಸ್ ಇಲಾಖೆಯನ್ನು ಜನಸ್ನೇಹಿ ಇಲಾಖೆಯನ್ನಾಗಿ ರೂಪಿಸುವುದು ತಮ್ಮ ಉದ್ದೇಶ. ಯಾರೇ ಆಗಲಿ ಪೊಲೀಸ್ ಇಲಾಖೆಗೆ ಅಗೌರವ ತರುವ ಕೆಲಸ ಮಾಡಿದರೆ ಸಹಿಸುವುದಿಲ್ಲ. ಪೊಲೀಸ್ ಇಲಾಖೆ ಗೌರವ ಹೆಚ್ಚಿಸುವ ಕೆಲಸ ಮಾಡುವಂತೆ ಅಧಿಕಾರಿಗಳಿಗೆ ತಾಕೀತು ಮಾಡಿರುವುದಾಗಿ ತಿಳಿಸಿದರು. ಈಗಾಗಲೇ ಅಧಿಕಾರಿಗಳ ಸಭೆ ನಡೆಸಿದ್ದೇನೆ. 2024 ರಿಂದ 2026ರವರೆಗೆ ಜಿಲ್ಲೆಯಲ್ಲಿ ನಡೆದಿರುವ ಘಟನೆಗಳು, ಪ್ರಕರಣಗಳ ಬಗ್ಗೆ ಮಾಹಿತಿ ಪಡೆದುಕೊಂಡಿದ್ದೇನೆ. ಅಪರಾಧ ಪ್ರಕರಣಗಳನ್ನು ಯಾವ ರೀತಿ ಫಾಲೋ ಆಪ್ ಮಾಡುತ್ತಿದ್ದಾರೆ. ಯಾವೆಲ್ಲ ಪ್ರಕರಣಗಳನ್ನು ಬೇಧಿಸಿದ್ದಾರೆ. ಗಾಂಜಾ, ಡ್ರಗ್ಸ್ ನಂತಹ ಚಟುವಟಿಕೆಗಳಲ್ಲಿ ಯಾರೆಲ್ಲರು ಸಕ್ರಿಯರಾಗಿದ್ದಾರೆ ಎಂಬುದನ್ನು ಪರಿಶೀಲಿಸಲು ಸೂಚನೆ ನೀಡಿದ್ದೇನೆ ಎಂದು ತಿಳಿಸಿದರು

# ನಟ ಸುದೀಪ್ ಹುಟ್ಟುಹಬ್ಬ ಆಚರಣೆ



ಚಾಮರಾಜನಗರ: ವಿವಿಧ ಸಮಾಜಮುಖಿ ಸೇವಾ ಕಾರ್ಯಗಳೊಂದಿಗೆ ಕಿಚ್ಚಸುದೀಪ್ ಹುಟ್ಟುಹಬ್ಬವನ್ನು ನಗರದಲ್ಲಿ ಅಭಿಮಾನಿಗಳು ಆಚರಣೆ ಮಾಡಿದರು.

ಕನ್ನಡ ಚಿತ್ರರಂಗದ ನಟ ಕಿಚ್ಚು ಸುದೀಪ್ ಅವರ ಹುಟ್ಟುಹಬ್ಬ ಅಂಗವಾಗಿ ಚಾಮರಾಜನಗರ ಜಿಲ್ಲಾ ಆಲ್ ಇಂಡಿಯಾ ಬಾದ್‌ಷಾ ಕಿಚ್ಚ ಸುದೀಪ್ ಫ್ಯಾನ್ಸ್ ಅಸೋಸಿಯೇಷನ್ ವತಿಯಿಂದ ಮೊದಲಿಗೆ ಕೊಳದ ಗಣಪತಿ ದೇವಸ್ಥಾನದಲ್ಲಿ ವಿಶೇಷ ಪೂಜೆ ನಂತರ ಶ್ರೀ ಚಾಮರಾಜೇಶ್ವರ ದೇವಸ್ಥಾನದಲ್ಲಿ ಸುದೀಪ್ ಭಾವಚಿತ್ರ ಹಿಡಿದು ವಿಶೇಷ ಪೂಜೆ ಸಲ್ಲಿಸಲಾಯಿತು.

ಸಂತೇಮರಳ್ಳಿ ವೃತ್ತದಲ್ಲಿ ಅನ್ನಸಂತರ್ಪಣೆ ಮಾಡಲಾಯಿತು.ಬಡ 50 ಕುಟುಂಬಗಳಿಗೆ ಆಹಾರ ಕಿಟ್ ವಿತರಿಸಲಾಯಿತು. ಭೋಗಾಪುರ ಗ್ರಾಮದ ಅಂಧ ಮಕ್ಕಳ ಆಶ್ರಮಕ್ಕೆ ಊಟದ ವ್ಯವಸ್ಥೆ ಮಾಡಲಾಯಿತು. ಶ್ರೀ ಬಿಳಿಗಿರಿರಂಗನಾಥಸ್ವಾಮಿ ಬೆಟ್ಟದಲ್ಲಿ ವಿಶೇಷ ಪೂಜೆ ಸಲ್ಲಿಸಿ ಭಕ್ತಾಧಿಗಳಿಗೂ ಊಟದ ವ್ಯವಸ್ಥೆ ಮಾಡುವ ಮೂಲಕ ಬಹಳ ಅರ್ಥಪೂರ್ಣವಾಗಿ ಕಿಚ್ಚುಸುದೀಪ್ ಹುಟ್ಟುಹಬ್ಬ ಆಚರಿಸಲಾಯಿತು.

ಕಾರ್ಯಕ್ರಮ ನೇತೃತ್ವ ವಹಿಸಿದ್ದ ಚಾಮರಾಜನಗರ ಜಿಲ್ಲಾ ಆಲ್ ಇಂಡಿಯಾ ಬಾದ್‌ಷಾ, ಕಿಚ್ಚ ಸುದೀಪ್ ಫ್ಯಾನ್ಸ್ ಅಸೋಸಿಯೇಷನ್ ಜಿಲ್ಲಾಧ್ಯಕ್ಷ ಎಸ್. ನಾಗೇಂದ್ರ ಮಾತನಾಡಿ ದರು. ನಗರಸಭಾ ಮಾಜಿ ಸದಸ್ಯ ಶಿವರಾಜ್ ಮಾತನಾಡಿ, ಕನ್ನಡ ಚಿತ್ರರಂಗದ ದೊಡ್ಡಮಟ್ಟದಲ್ಲಿ ಹೆಸರುಗಳಿಸಿರುವ ಕಿಚ್ಚಸುದೀಪ್ ಅವರು ಭಾರತೀಯ ಚಿತ್ರರಂಗದಲ್ಲೂ ಉನ್ನತ ಮಟ್ಟದಲ್ಲಿ ಬೆಳೆಯಲಿ ಅವರ ಹುಟ್ಟುಹಬ್ಬ ಅಂಗವಾಗಿ ಅವರ ಅಭಿಮಾನಿ ಬಳಗವು ಸಮಾಜಮುಖಿ ಕಾರ್ಯಗಳನ್ನು ಹಮ್ಮಿಕೊಂಡಿರುವುದು ಒಳ್ಳೆಯ ಬೆಳವಣಿಗೆ ಆಗಿದೆ. ಎಂದು ಆಶಿಸಿದರು. ಚಾಮರಾಜನಗರ ಜಿಲ್ಲಾ ಆಲ್ ಇಂಡಿಯಾ ಬಾದ್‌ಷಾ ಕಿಚ್ಚ ಸುದೀಪ್ ಫ್ಯಾನ್ಸ್ ಅಸೋಸಿಯೇಷನ್‌ನ ಆನಂದ್, ಚಂದ್ರು, ಸತೀಶ್, ಉಲ್ಲಾಸ್, ರವಿ, ಸಂತೋಷ, ಸ್ವಾಮಿನಾಯಕ್, ಚೇತು, ಮೋಹನ್, ಚಂದ್ರು, ಮಾದೇಶ್ ಇತರರು ಹಾಜರಿದ್ದರು.

# ಯೋಜನೆ ಸದುಪಯೋಗಪಡಿಸಿಕೊಳ್ಳಿ



ಚಾಮರಾಜನಗರ:ರಾಜ್ಯ ಮತ್ತು ಕೇಂದ್ರ ಸರ್ಕಾರ ಜಾರಿಗೊಳಿಸಿರುವ ವಿಬಿಜಿ ರಾಮ್ ಜಿ ಯೋಜನೆಯನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಎಂ.ಸಿದ್ದರಾಜು ಹೇಳಿದರು.

ತಾಲೂಕಿನ ಚಂದಕವಾಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚಂದಕವಾಡಿ ಗ್ರಾಮದ ಸಂಜೀವಿನಿ ಸುಗಂಧ ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟದ ಮಹಿಳಾ ಸ್ವ-ಸಹಾಯ ಸಂಘಕ್ಕೆ ಭೇಟಿ ನೀಡಿ ಅವರು ವಿಬಿಜಿ ರಾಮ್‌ಜಿ ಯೋಜನೆ ಕುರಿತು ಮಾತನಾಡಿ, ಆ. 15 ರಿಂದ ಸೆ. 15 ರ ವರಗೆ ಜಾಬ್ ಕಾರ್ಡ್ ಮೇಳ. ಅಭಿಮಾನ ನಡೆಯುತ್ತಿದ್ದು, ಪ್ರತಿಯೊಬ್ಬರೂ ಇದರ ಸದುಪಯೋಗಪಡಿಸಿಕೊಳ್ಳಬೇಕು ಎಂದರು,

ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜಗಾರ್ ಅಂಡ್ ಆಜೀವಿಕ ಮಿಷನ್ ಗ್ರಾಮೀಣ ಯೋಜನೆಯು ಗ್ರಾಮೀಣ ಉದ್ಯೋಗ ಖಾತರಿ ಕಾಯ್ದೆಯಾಗಿದ್ದು, ಪ್ರತಿ ಗ್ರಾಮೀಣ ಕುಟುಂಬಕ್ಕೆ ದಿನ 382 ರೂ. ಕೂಲಿಯಂತೆ ವಾರ್ಷಿಕವಾಗಿ ಕನಿಷ್ಠ 125 ದಿನಗಳ ಉದ್ಯೋಗವನ್ನು ನೀಡಲಾಗುತ್ತದೆ. ಪ್ರತಿಯೊಬ್ಬರೂ ಇದರ ಸದುಪಯೋಗಪಡಿಸಿಕೊಳ್ಳಬೇಕು ಎಂದರು. ಈ ಯೋಜನೆಯಡಿಯಲ್ಲಿ 318 ಹೊಸ ಕಾಮಗಾರಿಗಳನ್ನು ಸೇರ್ಪಡೆ ಮಾಡಲಾಗಿದೆ. ಯೋಜನೆಯ ಲಾಭವನ್ನು ಪ್ರತಿಯೊಬ್ಬ ಅರ್ಹ ಕುಟುಂಬಗಳಿಗೆ. ತಲುಪಿಸುವ ಉದ್ದೇಶದಿಂದ ಮನೆಮನೆ ಭೇಟಿ, ಐಇಸಿ ಚಟುವಟಿಕೆಗಳು, ಕೆಲಸದ ಭೇಡಿಕೆಗಳಿಗೆ ಅರ್ಜಿಗಳ ವಿತರಣೆ ಹಾಗೂ ಸಾಮಾಜಿಕ ಜಾಲತಾಣಗಳ ಮೂಲಕ ವ್ಯಾಪಕ ಅರಿವು ಮೂಡಿಸಲಾಗುತ್ತಿದೆ ಎಂದರು. ಈ ಸಂದರ್ಭದಲ್ಲಿ ಎನ್‌ಆರ್‌ಎಲ್ ಎಂ ತಂಡದ, ಬಿಎಫ್‌ಟಿ ಮತ್ತು ಇತರರು ಹಾಜರಿದ್ದರು.

: ಜಿ.ಪಂ ಸಿ.ಇ.ಓ ಮೋನಾ ರೋತ್ ಸಲಹೆ

# ವಿಬಿ ಜಿ ರಾಮ್ ಜಿ ಯೋಜನೆ ಸದುಪಯೋಗ ಪಡಿಸಿಕೊಳ್ಳಿ

ಚಾಮರಾಜನಗರ, ವಿಕಸಿತ ಭಾರತ್ ಗ್ಯಾರಂಟಿ ಫಾರ್ ರೋಜ್ ಗಾರ್ ಅಜೀವಿಕಾ ಮಿಷನ್ (ಗ್ರಾಮೀಣ) ಯೋಜನೆಯು ಗ್ರಾಮೀಣ ಜನರ ಆರ್ಥಿಕ ಸ್ವಾವಲಂಬನೆ ಹಾಗೂ ನಿರುದ್ಯೋಗ ಸಮಸ್ಯೆ ನಿವಾರಣೆಗೆ ಸಹಕಾರಿಯಾಗಿದೆ. ಸಮುದಾಯದ ಸಹಯೋಗದೊಂದಿಗೆ ಗ್ರಾಮಗಳ ಸವಾರ್‌ಂಗೀಣ ಅಭಿವೃದ್ಧಿಗೆ ಮುಕ್ತ ಅವಕಾಶ ಕಲ್ಪಿಸುವ ಈ ಯೋಜನೆಯನ್ನು ಪ್ರತಿಯೊಬ್ಬರೂ ಸದುಪಯೋಗಪಡಿಸಿಕೊಳ್ಳಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ತಿಳಿಸಿದರು.

ಚಾಮರಾಜನಗರ ತಾಲ್ಲೂಕಿನ ಸಂತೇಮರಹಳ್ಳಿ ಗ್ರಾಮಪಂಚಾಯಿತಿ ವ್ಯಾಪ್ತಿಯ ಕಾವುದವಾಡಿ ಗ್ರಾಮದ ದೇವಯ್ಯನ ಕಟ್ಟೆ ಅಭಿವೃದ್ಧಿ ಕಾಮಗಾರಿ ಹಾಗೂ ಉಮ್ಮತ್ತೂರು ಗ್ರಾಮಪಂಚಾಯಿತಿ ವ್ಯಾಪ್ತಿಯ ಉಮ್ಮತ್ತೂರು ಗ್ರಾಮದ ಸಿದ್ದಕಟ್ಟೆಯಿಂದ ದಕ್ಷಿಣದ ಕಡೆಗೆ ಕಾಲುವೆ ಅಭಿವೃದ್ಧಿ ಕಾಮಗಾರಿ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ಕಾರ್ಮಿಕರೊಂದಿಗೆ ಚರ್ಚಿಸಿದರು.



ವಿಬಿ ಜಿ ರಾಮ್ ಜಿ ಯೋಜನೆಯಡಿ ಗ್ರಾಮೀಣ ನೊಂದಾಯಿತ ಕುಟುಂಬಕ್ಕೆ 125 ದಿನಗಳ ಉದ್ಯೋಗ ಪಡೆಯಲು ಅವಕಾಶವಿದ್ದು, ಗ್ರಾಮದ ಜನರು ಉದ್ಯೋಗ ಪಡೆದು ಸ್ವಾವಲಂಬಿಯಾಗಬೇಕು. ಯೋಜನೆಯಡಿ ದಿನದ ಕೂಲಿ ಮೊತ್ತ 382 ರೂ. ಗಳಾಗಿದ್ದು ಪುರುಷ ಮತ್ತು ಮಹಿಳೆಯರಿಗೆ ಸಮಾನ ವೇತನ ನೀಡಲಾಗುತ್ತದೆ ಎಂದು ಮಾಹಿತಿ ನೀಡಿದರು.

ಸೆ. 15 ರವರೆಗೆ ಜಾಬ್ ಕಾರ್ಡ್ ಮೇಳ ಪ್ರಾರಂಭವಾಗಿದ್ದು, ಉದ್ಯೋಗ ಚೀಟಿ ಹೊಂದಿಲ್ಲದ ಕುಟುಂಬಗಳನ್ನು ಗುರುತಿಸಿ ನಮೂನೆ-1 ರಲ್ಲಿ ಬೇಡಿಕೆ ಪಡೆದು ರೋಜ್ ಗಾರ್ ಗ್ಯಾರಂಟಿ ಕಾರ್ಡ್ ವಿತರಿಸಲು ಹಾಗೂ ನಮೂನೆ 6ರಲ್ಲಿ ಉದ್ಯೋಗ ಬೇಡಿಕೆ ಸಂಗ್ರಹಿಸಿ ಆದ್ಯತೆ ಮೇರೆಗೆ ಗ್ರಾಮೀಣ ಜನರಿಗೆ ಉದ್ಯೋಗ ನೀಡಲು ಕ್ರಮವಹಿಸಲಾಗುತ್ತಿದೆ ಎಂದರು. ದುರ್ಬಲ ವರ್ಗದ ಕುಟುಂಬಗಳಿಗೆ ವೈಯಕ್ತಿಕ ಕಾಮಗಾರಿಗಳನ್ನು ಕೈಗೊಳ್ಳಲು ಅವಕಾಶವಿದ್ದು ಈಗಾಗಲೇ ಎಲ್ಲಾ ಗ್ರಾಮ ಪಂಚಾಯಿತಿಗಳ ಕ್ರಿಯಾಯೋಜನೆಗೆ ಅನುಮೋದನೆ ನೀಡಲಾಗಿದ್ದು ನಿಯಮಾನುಸಾರ ಸೌಲಭ್ಯ ಪಡೆಯಬಹುದು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ಹೇಳಿದರು.

ಇದೇ ವೇಳೆ ಉಮ್ಮತ್ತೂರು ಗ್ರಾಮದ ಕಾರ್ಮಿಕರು ಜಿ.ಪಂ ಸಿ.ಇ.ಓ ಅವರನ್ನು ಅಭಿನಂದಿಸಿ ನಿರಂತರ ಉದ್ಯೋಗ ಹಾಗೂ ಸಕಾಲದಲ್ಲಿ ಕೂಲಿ ಪಾವತಿಸಲು ಮನವಿ ಮಾಡಿದರು. ಜಿಲ್ಲಾ ಪಂಚಾಯತ್ ಸಹಾಯಕ ಕಾರ್ಯದರ್ಶಿ ಶ್ರೀಕಂಠರಾಜೇ ಅರಸ್, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಎಂ.ಎಸ್. ಗಿರಿಧರ್, ಸಹಾಯಕ ನಿರ್ದೇಶಕರಾದ ಪ್ರಕಾಶ್ ಕುಮಾರ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮಮತಾ, ಮಹದೇವಪ್ರಭು, ಜಿಲ್ಲಾ ಸಂಯೋಜಕರಾದ ನವೀನ್, ತಾಲ್ಲೂಕು ಸಂಯೋಜಕರಾದ ಯತೀಶ್, ಇತರರು ಇದೇ ಸಂದರ್ಭದಲ್ಲಿ ಇದ್ದರು.

# ಮನು.ಎನ್.ಗೆ ಪಿಎಚ್ ಡಿ

ಮೈಸೂರು: ಡಾ.ಟಿ.ಕೆ.ಕೆಂಪೇಗೌಡ ಅವರ ಮಾರ್ಗದರ್ಶನದಲ್ಲಿ ಸಂಶೋಧನೆ ನಡೆಸಿ ಮನು ಎನ್, ಅವರು ಸಾಧರಪಡಿಸಿದ ಹುಣಸೂರು ತಾಲೂಕಿನ ಗ್ರಾಮದೇವತೆಗಳು ಎಂಬ ಮಹಾ ಪ್ರಬಂದವನ್ನು ಮೈಸೂರು ವಿಶ್ವವಿದ್ಯಾನಿಲಯ ಅಂಗೀಕರಿಸಿ ಕನ್ನಡ ವಿಷಯದಲ್ಲಿ ಪಿಎಚ್.ಡಿ ಪದವಿ ನೀಡಿದೆ. ಮನು ಎನ್ ಅವರು ಪ್ರಸ್ತುತ ಪಿ ಯು ಕಾಲೇಜಿನಲ್ಲಿ ಉಪನ್ಯಾಸಕ'ರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ.



# 5ರಂದು ಅಹವಾಲು ಸಲ್ಲಿಸಿ

ರಾಮನಗರ: ಕರ್ನಾಟಕ ರಾಜ್ಯ ಸರ್ಕಾರದ ಪ್ರಜಾಸೇವಾ ಅಭಿಯಾನದಡಿ ಬಾಗಿಲಿಗೆ ಬಂತು ಸರ್ಕಾರ ಸೇವೆಗೆ ಇರಲಿ ಸಹಕಾರ ಎಂಬ ಮಹಾತ್ವಕಾಂಕ್ಷೆ ಕಾರ್ಯಕ್ರಮವನ್ನು ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಚನ್ನಪಟ್ಟಣ ಟೌನಿನ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಸೆ. 5ರ ಶನಿವಾರ ಬೆಳಿಗ್ಗೆ 11 ಗಂಟೆಗೆ ಪೌರಾಡಳಿತ ಸಚಿವರು ಹಾಗೂ ಬೆಂಗಳೂರು ದಕ್ಷಿಣ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಸಿ. ಬಾಲಕೃಷ್ಣ ಹಾಗೂ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಸಿ.ಪಿ. ಯೋಗೇಶ್ವರ್ ರವರ ನೇತೃತ್ವದಲ್ಲಿ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಕುಂದುಕೊರತೆಗಳನ್ನು ಬಗೆಹರಿಸಿಕೊಳ್ಳಬೇಕೆಂದು ಪ್ರಟಕಣೆಯಲ್ಲಿ ತಿಳಿಸಿದೆ.

# ಕರಾಟೆ ಕಲರ್ ಬೆಲ್ಟ್ ಟೆಸ್ಟ್ ಕಾರ್ಯಕ್ರಮಕ್ಕೆ ಚಾಲನೆ



ಚಾಮರಾಜನಗರ, ನಿರಂತರವಾಗಿ ಕರಾಟೆಯಿಂದ ದೈಹಿಕ ಮತ್ತು ಮಾನಸಿಕ ಸಾಮರ್ಥ್ಯವನ್ನು ವೃದ್ಧಿಸಿಕೊಳ್ಳಬಹುದಾಗಿದೆ ಎಂದು ಚುಡಾ ಅಧ್ಯಕ್ಷ ಮೊಹಮ್ಮದ್ ಅಸ್ಗರ್ (ಮುನ್ನಾ) ಸಲಹೆ ನೀಡಿದರು.

ನಗರದ ಗುಂಡ್ಲುಪೇಟೆ ರಸ್ತೆಯಲ್ಲಿರುವ ಹುದಾ ಪಬ್ಲಿಕ್ ಶಾಲೆಯಲ್ಲಿ ಸೋಟಕನ್ ಸ್ಕೂಲ್ ಆಫ್ ಕರಾಟೆ ಆರ್ಟ್ ವತಿಯಿಂದ ಭಾನುವಾರ ಆಯೋಜಿಸಿದ್ದ ಕರಾಟೆ ಕಲರ್ ಬೆಲ್ಟ್ ಟೆಸ್ಟ್ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಪ್ರಸ್ತುತ ದಿನಗಳಲ್ಲಿ ಪ್ರತಿಯೊಬ್ಬರಿಗೂ, ವಿಶೇಷವಾಗಿ ಮಹಿಳೆಯರು ಮತ್ತು ಮಕ್ಕಳಿಗೆ ಆತ್ಮರಕ್ಷಣೆ ತುಂಬಾ ಅಗತ್ಯವಾಗಿದೆ. ಕರಾಟೆ ನಮಗೆ ಸಂಕಷ್ಟದ ಸಮಯದಲ್ಲಿ ನಮ್ಮನ್ನು ನಾವು ರಕ್ಷಿಸಿಕೊಳ್ಳುವ ಧೈರ್ಯ ಮತ್ತು ಕಲಿಸುತ್ತದೆ. ಕರಾಟೆ ಅಭ್ಯಾಸ ಮಾಡುವುದರಿಂದ ದೇಹವು ಸದೃಢವಾಗುತ್ತದೆ ಎಂದು ಹೇಳಿದರು.

ಸೋಟಕನ್ ಸ್ಕೂಲ್ ಆಫ್ ಕರಾಟೆ ಆರ್ಟ್ ಸಂಸ್ಥಾಪಕ ಅಧ್ಯಕ್ಷ ರೆನ್ಷಿ ನಾಗರಾಜ್ ಜಟ್ಟಿ ಮಾತನಾಡಿ, ಕಳೆದ 30 ವರ್ಷಗಳಿಂದ ನಮ್ಮ ಸಂಸ್ಥೆಯ ವತಿಯಿಂದ ನಿರಂತರವಾಗಿ ಕರಾಟೆ ತರಬೇತಿ ನೀಡಲಾಗುತ್ತಿದೆ. ಜಿಲ್ಲಾ ಕೇಂದ್ರದಲ್ಲಿ 4–5 ಕರಾಟೆ ತಂಡಗಳು ಬಹಳ ಉತ್ತಮ ರೀತಿಯಲ್ಲಿ ಕರಾಟೆ ತರಬೇತಿ ನೀಡುತ್ತಿವೆ. 200–250 ಮಕ್ಕಳು ತರಬೇತಿ ಪಡೆಯುತ್ತಿರುವುದು ಕರಾಟೆ ಮಹತ್ವವನ್ನು ತಿಳಿಸಿಕೊಡುತ್ತದೆ ಎಂದರು.

ಸಿಹಾನ್ ನಾಗೇಂದ್ರ ಮಾತನಾಡಿ, ಕರಾಟೆ ಜಪಾನ್ ದೇಶದಲ್ಲಿ ಉಗಮವಾದ ಒಂದು ಸಾಂಪ್ರದಾಯಿಕ ಸಮರ ಕಲೆಯಾಗಿದೆ.ಕರಾಟೆ ಕೇವಲ ಹೊಡೆದಾಟವಲ್ಲ, ಅದು ಜೀವನದ ಶಿಸ್ತನ್ನು ಕಲಿಸುತ್ತದೆ. ಇದು ನಮ್ಮ ಮನಸ್ಸಿನ ಏಕಾಗ್ರತೆ ಮತ್ತು ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ. ನಾವೆಲ್ಲರೂ ಈ ಅದ್ಭುತ ಕಲೆಯನ್ನು ಕಲಿತು ನಮ್ಮ ಜೀವನದಲ್ಲಿ ಶಿಸ್ತು ಮತ್ತು ಸುರಕ್ಷತೆಯನ್ನು ಅಳವಡಿಸಿಕೊಳ್ಳೋಣ ಎಂದು ಹೇಳಿದರು.

ಕರಾಟೆ ಕಲರ್ ಬೆಲ್ಟ್ ಟೆಸ್ಟ್ ನಲ್ಲಿ 150 ಕ್ಕಿಂತಲೂ ಹೆಚ್ಚು ಕರಾಟೆ ಪಟುಗಳು ಭಾಗವಹಿಸುವ ಮೂಲಕ ವಿವಿಧ ಕಲರ್ ಬೆಲ್ಟ್ ಗಳನ್ನು ಪಡೆದುಕೊಂಡರು. ಈ ವೇಳೆ ಸಿಹಾನ್ ಗಣೇಶ್ ಮೂರ್ತಿ, ತರಬೇತುದಾರರಾದ ರೆಹಾನ್, ರವೀಶ್, ಜಿತೇಶ್, ಫುರ್ಖಾನ್ ರೆಹಾನ್ ಹಾಗೂ ಇತರರು ಭಾಗವಹಿಸಿದ್ದರು.

# 22 ಜನರನ್ನು ಜೀತಕ್ಕಿಟ್ಟ ಆರೋಪ



ಚಾಮರಾಜನಗರ: ಜಿಲ್ಲೆಯ ಹನೂರು ತಾಲೂಕಿನ ಸೂಳೇರಿಪಾಳ್ಯ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗಂಗನದೊಡ್ಡಿ ಗ್ರಾಮದ ಗುಡ್ಡದ ತಪ್ಪಲಿನಲ್ಲಿ ನಡೆದಿರುವ ಅತ್ಯಂತ ಅಮಾನವೀಯ ಕೃತ್ಯವೊಂದು ತಡವಾಗಿ ಬೆಳಕಿಗೆ ಬಂದಿದೆ.

ತಮಿಳುನಾಡು, ಬಿಹಾರ ಮತ್ತು ಆಂಧ್ರಪ್ರದೇಶ ಮೂಲದ ಸುಮಾರು 22 ಬಡ, ಅನಾಥ ಮತ್ತು ಅಂಗವಿಕಲ ಕಾರ್ಮಿಕರನ್ನು ಕಳೆದ ಒಂದು ವರ್ಷದಿಂದ ಅಕ್ರಮವಾಗಿ ಬಂಧನದಲ್ಲಿಟ್ಟು, ಜೀತದಾಳುಗಳಂತೆ ದುಡಿಸಿಕೊಳ್ಳುತ್ತಿರುವ ಗಂಭೀರ ಆರೋಪ ಕೇಳಿಬಂದಿದೆ.

**ರೈಲ್ವೆ ನಿಲ್ದಾಣದಿಂದ ಕರೆತಂದು ವಂಚನೆ:**

ಆರೋಪಿ ಷಣ್ಮುಗಂ ಮೇಸ್ತ್ರಿ ಎಂಬಾತ ತಮಿಳುನಾಡಿನ ವಿವಿಧ ರೈಲ್ವೆ ನಿಲ್ದಾಣಗಳಲ್ಲಿ ಭಿಕ್ಷಾಟನೆ ಮಾಡುತ್ತಿದ್ದ ನಿರ್ಗತಿಕರು, ಕೈ–ಕಾಲು ಊನವಿರುವ ಅಂಗವಿಕಲರು ಮತ್ತು ಅನಾಥರಿಗೆ ಕೆಲಸ ಕೊಡಿಸುವುದಾಗಿ ನಂಬಿಸಿ ಹನೂರಿಗೆ ಕರೆತಂದಿದ್ದಾನೆ ಎಂದು ತಿಳಿದುಬಂದಿದೆ.

**ಊಟ, ನೀರಿಲ್ಲದೆ ಚಿತ್ರಹಿಂಸೆ**

ಕಳೆದ ಒಂದು ವರ್ಷದಿಂದ ಈ 22 ಜನರಿಗೆ ಯಾವುದೇ ಕೂಲಿ ನೀಡದೆ, ಸರಿಯಾಗಿ ಊಟ, ನೀರು ಸಹ ನೀಡದೆ ಗುಡ್ಡದ ತುದಿಯಲ್ಲಿ ಬಂಧಿಸಿ ಕೆಲಸ ಮಾಡಿಸಲಾಗುತ್ತಿದೆ. ಪ್ರಶ್ನಿಸಿದರೆ ಹಲ್ಲೆ ನಡೆಸಲಾಗುತ್ತಿದೆ ಎಂದು ಸಂತ್ರಸ್ತರು ಅಳಲು ತೋಡಿಕೊಂಡಿದ್ದಾರೆ.

**ಕ್ರಮಕ್ಕೆ ಆಗ್ರಹ**

ಈ ಅಮಾನವೀಯ ಕೃತ್ಯದ ಬಗ್ಗೆ ತಿಳಿದ ಸ್ಥಳೀಯರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕೂಡಲೇ ಹನೂರು ತಾಲೂಕು ಆಡಳಿತ, ತಹಸೀಲ್ದಾರ್ ಮತ್ತು ಪೊಲೀಸ್ ಇಲಾಖೆಯವರು ಸ್ಥಳಕ್ಕೆ ಭೇಟಿ ನೀಡಿ, ಬಂಧನದಲ್ಲಿರುವ 22 ಅಮಾಯಕರನ್ನು ರಕ್ಷಿಸಿ, ಅವರಿಗೆ ಸೂಕ್ತ ಆಹಾರ, ಆಶ್ರಯ ಮತ್ತು ವೈದ್ಯಕೀಯ ನೆರವು ಒದಗಿಸಬೇಕು. ಜೊತೆಗೆ ಮುಖ್ಯ ಆರೋಪಿ ಷಣ್ಮುಗಂ ಮೇಸ್ತ್ರಿ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಹಾಗೂ ರೈತ ಸಂಘದ ಜಿಲ್ಲಾ ಕಾರ್ಯಾಧ್ಯಕ್ಷ ಅಮ್ಜದ್ ಖಾನ್ ಒತ್ತಾಯಿಸಿದ್ದಾರೆ.

# ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ತರಬೇತಿ ಕಾರ್ಯಾಗಾರ




ಚಾಮರಾಜನಗರ, ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧವಾಗುತ್ತಿರುವ ವಿದ್ಯಾರ್ಥಿಗಳು ನಿರಂತರವಾಗಿ ಅಧ್ಯಯನ ಮಾಡುವುದರಿಂದ ಯಶಸ್ಸು ಸಾಧಿಸಬಹುದಾಗಿದೆ ಎಂದು ಮೈಸೂರು ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ (ಆಡಳಿತ), ವಕೀಲರು ಹಾಗೂ ದೇವರತ್ನ ಪೌಂಡ್ಶೇನ್ ಸಂಸ್ಥಾಪಕ ಅಧ್ಯಕ್ಷ ಎಂ.ಶಿವಪ್ರಸಾದ್ ಸಲಹೆ ನೀಡಿದರು.

ನಗರದ ವರನಟ ಡಾ.ರಾಜಕುಮಾರ್ ಜಿಲ್ಲಾ ರಂಗಮಂದಿರದಲ್ಲಿ ದೇವರತ್ನ ಪೌಂಡೇಶನ್ ವತಿಯಿಂದ ಭಾನುವಾರ ಆಯೋಜಿಸಿದ್ದ 2026–27 ನೇ ಸಾಲಿನ ಯುಪಿಎಸ್ ಸಿ, ಕೆಪಿಎಸ್ ಸಿ ಹಾಗೂ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ನಡೆದ ಉಚಿತ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ದೇವರತ್ನ ಪೌಂಡೇಶನ್ ವತಿಯಿಂದ ಪ್ರಾಯೋಗಿಕ ಪರೀಕ್ಷೆ ನಡೆಸಿ, ಆ ಪರೀಕ್ಷೆಯಲ್ಲಿ ಉತ್ತಮ ಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಗೆ ಯುಪಿಎಸ್ಸಿ, ಕೆಪಿಎಸ್ಸಿ ಪರೀಕ್ಷೆಗಳನ್ನು ಎದುರಿಸಲು ಉಚಿತವಾಗಿ ಪರೀಕ್ಷಾ ಸಾಮಗ್ರಿಗಳು ಹಾಗೂ ವಸತಿ ಸೌಲಭ್ಯ ಸೇರಿದಂತೆ ಇತರೆ ಸೌಲಭ್ಯಗಳನ್ನು ಒದಗಿಸಲಾಗುತ್ತದೆ. ಯುಪಿಎಸ್ಸಿ, ಐಎಎಸ್, ಐಪಿಎಸ್ ನಂತಹ ಪರೀಕ್ಷೆಗಳಲ್ಲಿ ಉತ್ತೀರ್ಣರಾದರೆ ಇತರೆ ಯಾವುದೇ ಪರೀಕ್ಷೆಗಳನ್ನು ಪಾಸ್ ಮಾಡಲು ಸುಲಭವಾಗುತ್ತದೆ. ಈ ನಿಟ್ಟಿನಲ್ಲಿ ಸ್ಪರ್ಧಾರ್ಥಿಗಳಿಗೆ ಇಂತಹ ಅವಕಾಶವನ್ನು ಒದಗಿಸಲಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಬಾಬು ಜಗಜೀವನ ರಾಮ್ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಹೆಚ್.ಹೆಚ್.ನಾಗರಾಜು, ಅರಕಲವಾಡಿ ಜವರಯ್ಯ, ಹಸಗೂಲಿ ಸಿದ್ದಯ್ಯ ಕಾಂತರಾಜು, ದೇವರತ್ನ ಫೌಂಡೇಶನ್ ವಿಭಾಗೀಯ ಅಧ್ಯಕ್ಷ ಶಿವಮೂರ್ತಿ ಸೇರಿದಂತೆ ಇತರರು ಮಾತನಾಡಿದರು. ಈ ವೇಳೆ ದೇವರತ್ನ ಪೌಂಡೇಶನ್ ವತಿಯಿಂದ ಕಾರ್ಯಾಗಾರಕ್ಕೆ ಆಗಮಿಸಿದ ಎಲ್ಲಾರಿಗೂ ಸ್ಪರ್ಧಾ ಅರಿವು ಎಂಬ ಪುಸ್ತಕವನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಅರುಂಧತಿ ಕ್ರೆಡಿಟ್ ಕೋ ಆಪರೇಟಿವ್ ಸೊಸೈಟಿ ಅಧ್ಯಕ್ಷ ಜವರಯ್ಯ ಅರಕಲವಾಡಿ, ಉಪಾಧ್ಯಕ್ಷ ಹಸಗೂಲಿ ಸಿದ್ದಯ್ಯ, ಮುಖಂಡ ಮೂಡಹಳ್ಳಿ ಮೂರ್ತಿ, ಶಿಕ್ಷಕ ಕಾಂತರಾಜು, ಸಂಘದ ವಿಭಾಗೀಯ ಅಧ್ಯಕ್ಷ ಶಿವಮೂರ್ತಿ, ನೌಕರರ ಸಂಘದ ಅಧ್ಯಕ್ಷ ಮಹದೇವಸ್ವಾಮಿ, ಬಾಬು ಜಗಜೀವನ ರಾಮ್ ಸಂಘಟನೆಗಳ ಒಕ್ಕೂಟದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಮಸಮುದ್ರ ಎಂ.ಶಿವಕುಮಾರ್, ಸಮಾಜದ ಮುಖಂಡರಾದ ರಾಮು, ರಾಕ್ ಗಿರೀಶ್, ಸಿದ್ದು, ಸ್ವಾಮಿ ನಾಯಕ್, ಡ್ಯಾನ್ಸರ್ ಸೀನು, ಕ್ವಾಲಿಟಿ ನವೀನ್, ನಾಗೇಶ್, ಸಿದ್ದಪ್ಪಾಜಿ, ಚನ್ನಬಸವಯ್ಯ, ಮಹದೇವಯ್ಯ, ಶಂಕರ್, ಸುಂದರ್, ದೇವರಾಜು, ಲಿಂಗರಾಜು, ಶ್ರೀನಿವಾಸ್, ಸಾಗರ್, ಶ್ರೀಕಂಠ, ಪುನೀತ್, ಮೂಡಳ್ಳಿ ಶಂಕರ್, ಚನ್ನಬಸವಯ್ಯ, ಅರಕಲವಾಡಿ ಮಹಾದೇವಯ್ಯ, ಸ್ವಾಮಿ, ಶಿವಕುಮಾರ್, ಸುರೇಶ್, ಅಮಚವಾಡಿ ಪುಟ್ಟಸ್ವಾಮಿ ಹಾಗೂ ಇತರರು ಹಾಜರಿದ್ದರು.

**ಮೈಸೂರು ಅಭಿವೃದ್ಧಿ ಪ್ರಾಧಿಕಾರ, ಮೈಸೂರು**

ಝಾನ್ಸಿಲಕ್ಷ್ಮೀಬಾಯಿ ರಸ್ತೆ, ಮೈಸೂರು – 570 005

ಸಂಖ್ಯೆ:ಮೈಅಪ್ರಾ:ನಯೋಶಾ:ಭೂಉಬ:ನಯೋ–1:2026–27 ದಿನಾಂಕ : 31.08.2026

**ಸಾರ್ವಜನಿಕ ಪ್ರಕಟಣೆ**

**ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಪ್ರಕರಣ 14(ಎ)ರನ್ವಯ** ಮೈಸೂರು ತಾಲ್ಲೂಕು, ವರುಣಾ ಹೋಬಳಿ, ಸರ್ಕಾರಿ ಉತ್ತನಹಳ್ಳಿ ಗ್ರಾಮದ ಸ.ನಂ.86/1ರಲ್ಲಿ 04 ಎಕರೆ 12.08 ಗುಂಟೆ ವಿಸ್ತೀರ್ಣದ ಜಮೀನನ್ನು ಕೆ.ಟಿ.ಸಿ.ಪಿ. ಕಾಯ್ದೆ 1961ರ ಪ್ರಕರಣ 14(ಎ) ರನ್ವಯ ವ್ಯವಸಾಯ ವಲಯದಿಂದ ವಸತಿ ವಲಯಕ್ಕೆ ಭೂ ಉಪಯೋಗ ಬದಲಾವಣೆ ಮಾಡುವಂತೆ ಶ್ರೀಮತಿ ದೇವಿ ಹರಿಶೇಖರನ್ ಕೋಂ ಪಿ.ಹರಿಶೇಖರನ್ ಇವರು ಅರ್ಜಿ ಸಲ್ಲಿಸಿರುತ್ತಾರೆ. ಭೂ ಉಪಯೋಗ ಬದಲಾವಣೆಯಿಂದ **"ಈ ಜಮೀನುಗಳಲ್ಲಿ ವಿನ್ಯಾಸ ಅಭಿವೃದ್ಧಿಪಡಿಸುವುದರಿಂದ ಕಾಮಗಾರಿಗಳು ನಡೆಯುವ ಸಂಧರ್ಭದಲ್ಲಿ ಕೂಲಿ ಕಾರ್ಮಿಕರಿಗೆ ಉದ್ಯೋಗ ದೊರಕುತ್ತದೆ ಮತ್ತು ಈ ವಿನ್ಯಾಸ ಅಭಿವೃದ್ಧಿಯಿಂದ ಸುತ್ತಲಿನ ಪ್ರದೇಶದ ಅಭಿವೃದ್ಧಿ ಹೊಂದುತ್ತದೆ"** ಎಂದು ಸಾರ್ವಜನಿಕ ಹಿತಾಸಕ್ತಿ ಕುರಿತು ಮನವಿಯಲ್ಲಿ ತಿಳಿಸಿರುತ್ತಾರೆ. ಸದರಿ ಜಮೀನಿನ ಭೂ ಉಪಯೋಗದ ಬದಲಾವಣೆ ಬಗ್ಗೆ ಯಾವುದೇ ಆಕ್ಷೇಪಣೆಗಳಿದ್ದಲ್ಲಿ ಸಾರ್ವಜನಿಕರು ಈ ಪ್ರಕಟಣೆಯ ಪತ್ರಿಕೆಯಲ್ಲಿ ಪ್ರಕಟವಾದ ದಿನಾಂಕದಿಂದ 15 ದಿನಗಳೊಳಗಾಗಿ ನಗರ ಯೋಜಕ ಸದಸ್ಯರು, ಮೈಸೂರು ಅಭಿವೃದ್ಧಿ ಪ್ರಾಧಿಕಾರ, ಮೈಸೂರು–570005 ಇವರಿಗೆ ಮುದ್ದಾಂ ಅಥವಾ ನೋಂದಾಯಿತ ಅಂಚೆ ಮೂಲಕ ತಲುಪಿಸಬಹುದಾಗಿದೆ. ಅವಧಿ ಮುಗಿದ ನಂತರ ಸ್ವೀಕೃತವಾಗುವ ಆಕ್ಷೇಪಣೆಯನ್ನು ಪರಿಗಣಿಸುವುದಿಲ್ಲ.




ಸಹಿ/–
ನಗರ ಯೋಜಕ ಸದಸ್ಯರು,
ಮೈಸೂರು ಅಭಿವೃದ್ಧಿ ಪ್ರಾಧಿಕಾರ, ಮೈಸೂರು.

ವಾಸಾಸಂಇ/ಮೈಸೂರು/649/ಶಿರಡಿ ಸಾಯಿ/2026–27

# ಬರಪೀಡಿತ ಪ್ರದೇಶಗಳಿಗೆ ಡಿಸಿಎಂ ಭೇಟಿ

## ಸೆ.15ರೊಳಗೆ ಕೇಂದ್ರಕ್ಕೆ ಬರ ಪರಿಹಾರಕ್ಕಾಗಿ ಮನವಿ: ಡಾ.ಜಿ.ಪರಮೇಶ್ವರ್



ಗುಂಡ್ಲುಪೇಟೆ, ಸೆ.2: ರಾಜ್ಯದಲ್ಲಿ ಈ ಬಾರಿ ಭೀಕರ ಬರಗಾಲ ಆವರಿಸಿದ್ದು, ಬೆಳೆ ನಷ್ಟದ ಸಂಪೂರ್ಣ ಪರಿಶೀಲನೆ ನಡೆಸಿ ಸೆಪ್ಟೆಂಬರ್ 15ರೊಳಗೆ ಕೇಂದ್ರ ಸರ್ಕಾರಕ್ಕೆ ಬರ ಪರಿಹಾರಕ್ಕಾಗಿ ಮನವಿ ಸಲ್ಲಿಸ ಲಾಗುವುದು ಎಂದು ಉಪಮುಖ್ಯಮಂತ್ರಿ ಹಾಗೂ ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದರು.

ತಾಲೂಕಿನ ಬೇಗೂರು ಹೋಬಳಿ ವ್ಯಾಪ್ತಿಯ ವಿವಿಧ ಗ್ರಾಮಗಳಿಗೆ ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು ಹಾಗೂ ಅಧಿಕಾರಿಗಳೊಂದಿಗೆ ಭೇಟಿ ನೀಡಿದ ಅವರು, ಮಳೆಯಿಲ್ಲದೆ ಒಣಗಿರುವ ಬೆಳೆಗಳನ್ನು ಪರಿಶೀಲಿಸಿ ರೈತರ ಸಮಸ್ಯೆಗಳನ್ನು ಆಲಿಸಿದರು.

ಸೋಮಹಳ್ಳಿ ಗ್ರಾಮದ ನಾಗರಾಜು ಅವರ ಜಮೀನಿನಲ್ಲಿ ಬೆಳೆದಿದ್ದ ಹತ್ತಿ ಬೆಳೆ ಮಳೆಯ ಕೊರ ತೆಯಿಂದ ಸಂಪೂರ್ಣ ಒಣಗಿರುವುದನ್ನು ವೀಕ್ಷಿಸಿದ ಡಿಸಿಎಂ, ರೈತರಿಂದ ಬೆಳೆ ನಷ್ಟ ಹಾಗೂ ಕೃಷಿ ವೆಚ್ಚದ ಕುರಿತು ಮಾಹಿತಿ ಪಡೆದರು. ಮರಳಾಪುರದ ಸಣ್ಣಮ್ಮಣಿ ಹಾಗೂ ರಾಜಪ್ಪ ದಂಪತಿಗೆ ಸೇರಿದ 5 ಎಕರೆ 20 ಗುಂಟೆ ಜಮೀನಿನಲ್ಲೂ ಹತ್ತಿ ಬೆಳೆ ಒಣ ಗಿರುವುದನ್ನು ಪರಿಶೀಲಿಸಿ, ರೈತ ದಂಪತಿಯೊಂದಿಗೆ ಆತ್ಮೀಯವಾಗಿ ಮಾತನಾಡಿದರು.

**ಸಾಲ ಮಾಡಿ ಬೆಳೆ ಬೆಳೆದ ರೈತರ ಅಳಲು:**

ಬೆಳೆ ಬೆಳೆಯಲು ?50 ಸಾವಿರಕ್ಕೂ ಹೆಚ್ಚು ಖರ್ಚು ಮಾಡಿದ್ದು, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ಸಾಲ ಪಡೆದಿದ್ದೇವೆ. ಚಿನ್ನಾಭರಣ ಅಡಮಾನವಿಟ್ಟು ಕೂಡ ಹಣ ಪಡೆದು ಕೃಷಿ ಮಾಡಿದ್ದು, ಬೆಳೆ ಒಣಗಿರುವುದರಿಂದ ಮುಂದೇನು ಎಂಬ ಚಿಂತೆ ಕಾಡುತ್ತಿದೆ ಎಂದು ರೈತ ದಂಪತಿ ತಮ್ಮ ಅಳಲು ತೋಡಿಕೊಂಡರು.

ತಾಲೂಕಿನ ವಿವಿಧ ಭಾಗಗಳಲ್ಲಿ ಜೋಳ, ಸೂರ್ಯಕಾಂತಿ, ಹತ್ತಿ, ಬಾಳೆ ಸೇರಿದಂತೆ ಹಲವು ಬೆಳೆಗಳು ನೀರಿನ ಕೊರತೆಯಿಂದ ಒಣಗಿವೆ. ಅಂತರ್ಜಲ ಮಟ್ಟ ಕುಸಿದ ಪರಿಣಾಮ ಬೋರ್‌ವೆಲ್‌ಗಳು ಬತ್ತಿದ್ದು, ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಡಾ.ಪರಮೇಶ್ವರ್ ಹೇಳಿದರು.

ಕಳೆದ ವರ್ಷ ಬರ ಪರಿಹಾರಕ್ಕಾಗಿ ರಾಜ್ಯ ಸರ್ಕಾರ ಕೇಂದ್ರದಿಂದ ?18 ಸಾವಿರ ಕೋಟಿ ನೆರವು ಕೋರಿತ್ತು. ಈ ಬಾರಿ ಪರಿಸ್ಥಿತಿ ಇನ್ನಷ್ಟು ಗಂಭೀರವಾಗಿದ್ದು, ಬೆಳೆ ನಷ್ಟದ ಪ್ರಮಾಣವೂ ಹೆಚ್ಚಾಗಿದೆ. ಹೀಗಾಗಿ ಸಂಪೂರ್ಣ ಸಮೀಕ್ಷೆ ಹಾಗೂ ನಷ್ಟದ ಅಂದಾಜು ಪೂರ್ಣಗೊಳಿಸಿ ಕೇಂದ್ರಕ್ಕೆ ಸೂಕ್ತ ನೆರವು ಕೋರಿ ಮನವಿ ಸಲ್ಲಿಸಲಾಗುವುದು ಎಂದರು.

ಕೆಲವು ಬೆಳೆಗಳಿಗೆ ಬೆಳೆ ವಿಮೆ ಸೌಲಭ್ಯ ದೊರೆಯದಿರುವುದು ರೈತರ ಸಂಕಷ್ಟವನ್ನು ಮತ್ತಷ್ಟು ಹೆಚ್ಚಿಸಿದೆ. ರಾಜ್ಯ ಸರ್ಕಾರದಿಂದ ರೈತರಿಗೆ ಯಾವ ರೀತಿಯಲ್ಲಿ ನೆರವು ನೀಡಬಹುದು ಎಂಬುದನ್ನು ಮುಖ್ಯಮಂತ್ರಿ ಅವರೊಂದಿಗೆ ಚರ್ಚಿಸಿ ಸೂಕ್ತ ನಿರ್ಧಾರ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ವಿ.ಪುಟ್ಟರಂಗಶೆಟ್ಟಿ, ಶಾಸಕ ಎಚ್.ಎಂ.ಗಣೇಶ್ ಪ್ರಸಾದ್, ದರ್ಶನ್ ಧ್ರುವನಾರಾಯಣ್, ಎ.ಆರ್.ಕೃಷ್ಣಮೂರ್ತಿ, ಕಾಡಾ ಅಧ್ಯಕ್ಷ ಮರಿಸ್ವಾಮಿ, ನಂಜಪ್ಪ, ಚಾಮುಲ್ ನಿರ್ದೇಶಕ ನಂಜುಂಡಪ್ರಸಾದ್, ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೇರಿದಂತೆ ಕಂದಾಯ, ಕೃಷಿ, ತೋಟಗಾರಿಕೆ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು

### ವಿಬಿ–ಜಿ ರಾಮ್–ಜಿ ಕಾಮಗಾರಿ ಪರಿಶೀಲನೆ

ನಿಟ್ರೆ ಗ್ರಾಮದಲ್ಲಿ ವಿಕಸಿತ ಭಾರತ?ಗ್ಯಾರಂಟಿ ಫಾರ್ ರೋಜ್ಗಾರ್ ಅಂಡ್ ಅಜೀವಿಕ ಮಿಷನ್ (ವಿಬಿ–ಜಿ ರಾಮ್–ಜಿ) ಯೋಜನೆಯಡಿ ಕೈಗೊಂಡಿರುವ ಊರ ಮುಂದಿನ ಕಟ್ಟೆ ಅಭಿವೃದ್ಧಿ ಕಾಮಗಾರಿಯನ್ನು ಡಿಸಿಎಂ ಪರಿಶೀಲಿಸಿದರು. ಈ ವೇಳೆ ಕೂಲಿ ಕಾರ್ಮಿಕ ಮಹಿಳೆಯರೊಂದಿಗೆ ಮಾತನಾಡಿದ ಅವರು, ಅವರ ಸಮಸ್ಯೆಗಳನ್ನು ಆಲಿಸಿದರು. ಮಹಿಳಾ ಕಾರ್ಮಿಕರಾದ ಪುಷ್ಪ, ಮಹದೇವಮ್ಮ ಹಾಗೂ ಗಂಗಮ್ಮ ಅವರು ಕೂಲಿ ಮೊತ್ತ ಹೆಚ್ಚಳ ಮಾಡುವಂತೆ ಡಾ.ಜಿ. ಪರಮೇಶ್ವರ್ ಅವರಿಗೆ ಮನವಿ ಮಾಡಿದರು. ಬರಪರಿಸ್ಥಿತಿ ವೀಕ್ಷಣೆ ವೇಳೆ ಅಭಿಮಾನಿಯೊಬ್ಬರ ಕರೆಗೆ ಸ್ಪಂದಿಸಿ ಕೆಲಕಾಲ ಆತ್ಮೀಯವಾಗಿ ಮಾತನಾಡಿದ ಡಿಸಿಎಂ, ರೈತರೊಂದಿಗೆ ನೇರವಾಗಿ ಸಂವಾದ ನಡೆಸಿ ಅವರ ಸಮಸ್ಯೆಗಳನ್ನು ಆಲಿಸಿದ್ದು ಗಮನ ಸೆಳೆಯಿತು.



# ಮಗುವಿಗೆ ಹಿಂಸೆ: ಕ್ರಮಕ್ಕೆ ಮನವಿ

ಮೈಸೂರು: ಪೌರಕಾರ್ಮಿಕ ದಂಪತಿಗಳ ಮೂರೂವರೆ ವರ್ಷದ ಮಗುವಿಗೆ ಲೈಂಗಿಕ ಹಿಂಸೆ ನೀಡಿದ ಆರೋಪಿಗಳ ವಿರುದ್ಧ ಸೂಕ್ತ ಕಠಿಣ ಕ್ರಮ ಕೈಗೊಂಡು ನ್ಯಾಯ ದೊರಕಿಸಿಕೊಡುವಂತೆ ವಕೀಲ ಜಿ.ಜಗದೀಶ್ ನೇತೃತ್ವದಲ್ಲಿ ಸ್ಥಳೀಯರು ನಗರ ಪೊಲೀಸರಿಗೆ ಮನವಿ ಮಾಡಿದರು.

ನಗರದ ಪೊಲೀಸ್ ಆಯುಕ್ತರ ಕಚೇರಿಗೆ ಭೇಟಿ ನೀಡಿ ಮನವಿ ಪತ್ರ ಸಲ್ಲಿಸಿದ ಅವರು, ಆ.28ರಂದು ಉದಯಗಿರಿ ಠಾಣೆಗೆ ಈ ಸಂಬಂಧ ದೂರು ಸಹ ದಾಖಲಾಗಿದೆ. ಈಗಾಗಲೇ ಇಬ್ಬರ ಮೇಲೆ ಪ್ರಕರಣ ದಾಖಲಿಸಿದ್ದು, ಆದರೆ, ಬಾಲಕಿಯ ಚಿಕ್ಕಮ್ಮನಾದ ಮಂಗಳ, ಅವರ ಗಂಡ ಮಣಿ ಮತ್ತು ಮಗಳು ದ್ರಾಕ್ಷಾಯಣಿ, ಅಳಿಯ ಅಭಿಷೇಕ್, ಮಗ ಶ್ರೀಕಾಂತ್ ಹಾಗೂ ರೂಪಾಳ ತಾಯಿ ಮುತ್ತಮ್ಮ ಸಾಮೂಹಿಕವಾಗಿ ಬಾಲಕಿಯ ಮೇಲೆ ಹಿಂಸೆ ನೀಡಿದ್ದು, ಈ ಬಗ್ಗೆ ಸೂಕ್ತ ಕಾನೂನು ಕ್ರಮ ಜರುಗಿಸಬೇಕೆಂದು ಕೋರಿದರು.

ಗೀತಾ, ಆಶಾ, ಮಹೇಶ್ವರಿ, ಶಿಲ್ಪ, ರಾಧ, ಕಾವೇರಿ, ತುಳಸಿ, ರಾಜೇಶ್ವರಿ, ಲಕ್ಷ್ಮಿ, ಮಮತಾ, ಚಿನ್ನಮ್ಮ, ಜ್ಯೋತಿ, ಚಂದ್ರಕಲಾ, ಗೀತ, ಧನಲಕ್ಷ್ಮಿ, ಮುತ್ತು ಇನ್ನಿತರರು ಇದ್ದರು.



# ಅರ್ಹರಿಗೆ ಜಾತಿ ಪ್ರಮಾಣಪತ್ರ ತಲುಪಿಸಿ



**ಚಾಮರಾಜನಗರ.** ಮಕ್ಕಳ ಶೈಕ್ಷಣಿಕ ಸೌಲಭ್ಯಕ್ಕೆ ಅನುಕೂಲವಾಗುವಂತೆ ಸ್ಥಳ ಮಹಜರು ಮಾಡಿ ಸತ್ಯಾಸತ್ಯತೆ ಪರಿಶೀಲಿಸಿ ಅರ್ಹರಿಗೆ ಜಾತಿ ಪ್ರಮಾಣಪತ್ರ ತಲುಪಿಸುವಂತೆ ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಂ. ರಾಮಪ್ಪ ಅವರು ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಕೊಠಡಿಯಲ್ಲಿಂದು ಜಾತಿ ಪ್ರಮಾಣಪತ್ರ ವಿತರಣೆ ಸಂಬಂಧ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಂ. ರಾಮಪ್ಪ ಅವರು ಜಿಲ್ಲಾಧಿಕಾರಿ ಶ್ರೀರೂಪ ಅವರೊಂದಿಗೆ ಚರ್ಚಿಸಿ ಸಮಾಲೋಚನೆ ನಡೆಸಿದರು.

ನಾಗೇಶ್ ಎಂಬುವವರು ಪರಿಶಿಷ್ಟ ಜಾತಿಯ ಭೋವಿ ಸಮುದಾಯದ ಒಡ್ಡರ ಜಾತಿಗೆ ಸೇರಿದ್ದು, ಇವರಿಗೆ ತೊಡಕಾಗಿರುವ ಜಾತಿ ಪ್ರಮಾಣ ಪತ್ರವನ್ನು ಸರಿಪಡಿಸಿಕೊಡುವಂತೆ ಮನವಿ ಮಾಡಿರುವ ಹಿನ್ನೆಲೆಯಲ್ಲಿ ಅಧ್ಯಕ್ಷರು ಇವರ ಮನವಿಯಂತೆ ತಹಶೀಲ್ದಾರವರಿಗೆ ಸೂಚಿಸಿ ಜಾತಿ ಪ್ರಮಾಣ ಪತ್ರವನ್ನು ನೀಡಲು ತಿಳಿಸಿದರು.

ಇಡೀ ರಾಜ್ಯದಲ್ಲಿ ಪ್ರವಾಸ ಮಾಡಿದ್ದೇನೆ. ಈ ಸಮಸ್ಯೆ ಎಲ್ಲಿಯೂ ಕಂಡುಬಂದಿಲ್ಲ, ಕೊಳ್ಳೇಗಾಲ ತಾಲೂಕಿನ ಹೊಂಡರಬಾಳುವಿನಲ್ಲಿ 14 ಭೋವಿ ಸಮುದಾಯದ ಕುಟುಂಬಗಳು ವಾಸಿಸುತ್ತಿವೆ. ಅವರೆಲ್ಲರಿಗೂ ಕ್ರಮಬದ್ಧವಾಗಿ ಒಡ್ಡರು ಎಂಬುದಾಗಿ ನಮೂದಿಸಿ ಜಾತಿ ಪ್ರಮಾಣಪತ್ರ ನೀಡಲಾಗಿದೆ. ಇದರಂತೆ ಕಾನೂನು ಚೌಕಟ್ಟಿನಲ್ಲಿ ಮನವಿದಾರರಿಗು ಸೂಕ್ತ ಪ್ರಮಾಣ ಪತ್ರ ನೀಡಬೇಕು ಎಂದು ಹೇಳಿದರು.

ಜಿಲ್ಲಾಧಿಕಾರಿ ಶ್ರೀರೂಪ ಅವರು ಮಾತನಾಡಿ ಸಾರ್ವಜನಿಕರಿಗೆ ಜಾತಿ ಪ್ರಮಾಣಪತ್ರಗಳನ್ನು ವಿತರಿಸುವ ಸಂದರ್ಭದಲ್ಲಿ ದಾಖಲೆಗಳನ್ನು ಗಂಭೀರವಾಗಿ ಪರಿಶೀಲಿಸಿ ಪ್ರಮಾಣಪತ್ರ ನೀಡಲಾಗುತ್ತದೆ. ನಾಗೇಶ್ ಅವರ ಮನವಿ ಹಾಗೂ ದೂರಿನ ಬಗ್ಗೆ ಮತ್ತೊಮ್ಮೆ ಪರಿಶೀಲಿಸಿ ಸಮಸ್ಯೆ ಪರಿಹರಿಸಲು ಸಂಬಂಧಪಟ್ಟ ತಹಶೀಲ್ದಾರ್ ಅವರಿಗೆ ಸೂಚನೆ ನೀಡಲಾಗಿದೆ. ಅಲ್ಲದೆ ಡಿ.ಸಿ.ಆರ್.ಇ (ಡೈರೆಕ್ಟರೇಟ್ ಆಫ್ ಸಿವಿಲ್ ರೈಟ್ಸ್ ಎನ್ಫೋರ್ಸ್‌ಮೆಂಟ್) ವಿಭಾಗದ ಡಿವೈಎಸ್‌ಪಿ ವರದಿ ಆಧಾರದ ಮೇರೆಗೆ ಆದಷ್ಟು ಬೇಗನೆ ಸಮಸ್ಯೆ ಪರಿಹರಿಸಲಾಗುವುದು ಎಂದರು.

ಕಾಡಾ ಅಧ್ಯಕ್ಷ ಪಿ. ಮರಿಸ್ವಾಮಿ, ಡಿ.ಸಿ.ಆರ್.ಇ ವಿಭಾಗದ ಡಿವೈಎಸ್.ಪಿ ರಘು, ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ಬಿ.ಎಸ್. ರಾಜು, ಮುಖಂಡರಾದ ಬಿ.ಕೆ. ರವಿಕುಮಾರ್, ಮಹಾದೇವ್, ಕೃಷ್ಣಮೂರ್ತಿ, ರವಿ, ನಾಗೇಶ್, ರಾಜೇಂದ್ರ, ಇತರರು ಇದೇ ಸಂದರ್ಭದಲ್ಲಿ ಇದ್ದರು.

**ಗಂಗೆ ಪೂಜೆ ನೆರವೇರಿಸಿ ಬೋರ್‌ವೆಲ್‌ಗೆ ಚಾಲನೆ ನೀಡಿದ ಶಾಸಕ ಮಂಜುನಾಥ್**

# ಮಹಾಲಿಂಗನ ಕಟ್ಟೆಯಲ್ಲಿ ಹರಿಯಿತು ಜಲಧಾರೆ



ಹನೂರು: ಮಹಾಲಿಂಗನ ಕಟ್ಟೆಯಲ್ಲಿ ವರ್ಷಗಳಿಂದ ಕಾಡುತ್ತಿದ್ದ ಕುಡಿಯುವ ನೀರಿನ ಸಮಸ್ಯೆಗೆ ಕೊನೆಗೂ ಮುಕ್ತಿ ಸಿಕ್ಕಿದೆ. ಶಾಸಕರ ಅನುದಾನದಲ್ಲಿ ಕೊರೆದ ನೂತನ ಬೋರ್‌ವೆಲ್‌ನಲ್ಲಿ ಹೇರಳ ನೀರು ದೊರೆತಿದ್ದು, ಶಾಸಕ ಎಂ.ಆರ್. ಮಂಜುನಾಥ್ ಅವರು ಗಂಗೆ ಪೂಜೆ ನೆರವೇರಿಸಿ ನೀರು ಪೂರೈಕೆಗೆ ಚಾಲನೆ ನೀಡಿದರು.

ಶಾಸಕರು ಗ್ರಾಮಕ್ಕೆ ಕಾಲಿಡುತ್ತಿದ್ದಂತೆ ಗ್ರಾಮಸ್ಥರು ವಾದ್ಯಗೋಷ್ಠಿ, ಪಟಾಕಿ ಮತ್ತು ಆರತಿ ಬೆಳಗಿ ಸಂಭ್ರಮದಿಂದ ಬರಮಾಡಿಕೊಂಡರು. ಬೋರ್‌ವೆಲ್‌ನಿಂದ ನೀರು ಚಿಮ್ಮುತ್ತಿದ್ದಂತೆ ಮಹಿಳೆಯರು, ಮಕ್ಕಳು ಸೇರಿ ಇಡೀ ಗ್ರಾಮದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು. ನಂತರ ಗ್ರಾಮಸ್ಥರನ್ನು ಉದ್ದೇಶಿಸಿ ಮಾತನಾಡಿದ ಶಾಸಕ ಎಂ.ಆರ್. ಮಂಜುನಾಥ್ ಅವರು ಭರವಸೆ ನೀಡಿದರು.

"ಹನೂರು ತಾಲೂಕನ್ನು ಸರ್ಕಾರ ಬರಪೀಡಿತ ತಾಲೂಕು ಎಂದು ಘೋಷಿಸಿದೆ. ಈ ಹಿನ್ನೆಲೆಯಲ್ಲಿ ಕುಡಿಯುವ ನೀರಿಗೆ ನಾವು ಮೊದಲ ಆದ್ಯತೆ ನೀಡಿದ್ದೇವೆ. ನನ್ನ ಅನುದಾನದಲ್ಲಿ ಮಹಾಲಿಂಗನ ಕಟ್ಟೆ ಗ್ರಾಮಕ್ಕೆ ಈ ಬೋರ್‌ವೆಲ್ ಕಲ್ಪಿಸಲಾಗಿದೆ. ಇದು ತಾತ್ಕಾಲಿಕ ಪರಿಹಾರವಲ್ಲ" ಎಂದರು.

"ಇಡೀ ಕ್ಷೇತ್ರದ ಎಲ್ಲಾ ಗ್ರಾಮಗಳ ಅಭಿವೃದ್ಧಿಗೆ ನಾನು ಹೆಚ್ಚು ಸಮಯ ಕೊಡುತ್ತಿದ್ದೇನೆ. ಇನ್ನು ಆರು ತಿಂಗಳಲ್ಲಿ ಶಾಶ್ವತ ಪರಿಹಾರ ನೀಡುತ್ತೇನೆ. ಈಗಾಗಲೇ ಸರ್ಕಾರದ ಉನ್ನತ ಕಾರ್ಯದರ್ಶಿಗಳ ಜೊತೆ ಚರ್ಚಿಸಿದ್ದೇನೆ. ಅತ್ಯಂತ ಮಹತ್ವದ ಬೆಳವಣಿಗೆ ಎಂದರೆ, ಅರಣ್ಯ ಪ್ರದೇಶಗಳ ಒಳಗಿರುವ ಗ್ರಾಮಗಳಲ್ಲೂ ಜಲ ಜೀವನ್ ಮಿಷನ್ (ಎಎಬ) ಕಾಮಗಾರಿ ಮಾಡಲು ಅರಣ್ಯ ಇಲಾಖೆಯಿಂದ ಅನುಮೋದನೆ ಪಡೆದಿದ್ದೇವೆ. ಇದರಿಂದ ಅರಣ್ಯಾಂಚಿನ ಗ್ರಾಮಗಳಿಗೂ ಶಾಶ್ವತವಾಗಿ ಮನೆಮನೆಗೆ ನಲ್ಲಿ ನೀರು ಬರಲಿದೆ" ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಚಾಮುಲ್ ನಿರ್ದೇಶಕ ಉದ್ದನೂರು ಪ್ರಸಾದ್ ಅವರು ಶಾಸಕರ ಕಾರ್ಯವನ್ನು ಶ್ಲಾಘಿಸಿದರು. ಬಂಡಳ್ಳಿ ಭಾಗದ ಜನರು ಈ ಹಿಂದೆ ಆಸ್ಪತ್ರೆ, ಸಾವು–ನೋವಿನ ಸಂದರ್ಭದಲ್ಲಿ ತುಂಬಾ ಕಷ್ಟ ಅನುಭವಿಸುತ್ತಿದ್ದರು. ಶಾಸಕರು ಬಂದ ಮೇಲೆ ರಸ್ತೆ, ಕುಡಿಯುವ ನೀರಿನ ಸಮಸ್ಯೆಗಳಿಗೆ ಸ್ಪಂದಿಸಿ ದ್ದಾರೆ. ಅದರಲ್ಲೂ ಈ ಭಾಗದ ಜೀವನಾಡಿಗಳಾದ ಹುಬ್ಬೆ ಮತ್ತು ಹುಣಸೆ ಡ್ಯಾಂಗಳಿಗೆ ನೀರು ತುಂಬಿ ಸುವಲ್ಲಿ ಶಾಸಕರು ಅಹರ್ನಿಶಿ ಶ್ರಮ ವಹಿಸಿದ್ದಾರೆ. ಇದರಿಂದ ರೈತರಿಗೆ ದೊಡ್ಡ ಅನುಕೂಲವಾಗಿದೆ" ಎಂದರು. ಈ ಸಂದರ್ಭದಲ್ಲಿ ಗ್ರಾಮದ ಮುಖಂಡರಾದ ಮಲ್ಲೇಶ್, ನಾಗರಾಜಪ್ಪ, ರುದ್ರಪ್ಪ, ಹಲಗಪ್ಪ, ಮಹದೇವಪ್ಪ, ಗ್ರಾ.ಪಂ. ಮಾಜಿ ಸದಸ್ಯ ಮಲ್ಲೇಶ್, ಹಾಲಿನ ಡೈರಿ ಅಧ್ಯಕ್ಷ ಕುಮಾರ್, ಕಾರ್ಯದರ್ಶಿ ರುದ್ರಸ್ವಾಮಿ, ಜೆಡಿಎಸ್ ಮುಖಂಡ ರಾಜಶೇಖರ ಮೂರ್ತಿ ಸೇರಿದಂತೆ ಗ್ರಾಮ ಪಂಚಾಯಿತಿ ಸದಸ್ಯರು ಮತ್ತು ನೂರಾರು ಗ್ರಾಮಸ್ಥರು ಭಾಗವಹಿಸಿದ್ದರು.

## ಸೆ.05 ರಂದು ಪ್ರಜಾ ಸೇವೆ ಆಂದೋಲನ ಕಾರ್ಯಕ್ರಮ

**ಮಂಡ್ಯ:** ಮಂಡ್ಯ ವಿಧಾನ ಸಭಾಕ್ಷೇತ್ರದ ಮಾನ್ಯ ಶಾಸಕರಅಧ್ಯಕ್ಷತೆಯಲ್ಲಿ ಸೆಪ್ಟೆಂಬರ್ 05 ರಂದು ಬೆಳಿಗ್ಗೆ 10.00 ಗಂಟೆಗೆ "ಪ್ರಜಾ ಸೇವೆ ಆಂದೋಲನ ಕಾರ್ಯಕ್ರಮ" ವನ್ನು ಮಂಡ್ಯ ತಾಲ್ಲೂಕು,ಕಸಬಾ-2ನೇ ಹೋಬಳಿ ಹನಕೆರೆಗ್ರಾಮದರೈತ ಸಮುದಾಯ ಭವನದಲ್ಲಿಆಯೋಜಿಸಲಾಗಿದೆ.

ಮಂಡ್ಯತಾಲ್ಲೂಕು ವ್ಯಾಪ್ತಿಯ ಸಾರ್ವಜನಿಕರುಕುಂದುಕೊರತೆ ಬಗ್ಗೆ ಅಗತ್ಯ ದಾಖಲಾತಿಗಳೊಂದಿಗೆ ಹಾಜರಾಗಿ ಮಾನ್ಯ ಶಾಸಕರಿಗೆ ಮನವಿ ಸಲ್ಲಿಸಬಹುದುಎಂದು ಮಂಡ್ಯತಾಲ್ಲೂಕು ತಹಸೀಲ್ದಾರ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಮಂಡ್ಯ:** 2026-27 ನೇ ಸಾಲಿಗೆ ಜಿಲ್ಲೆಯ ವಿವಿಧ ಕಾಲೇಜುಗಳಲ್ಲಿ ಎಸ್.ಎಸ್.ಎಲ್.ಸಿ ನಂತರದಕಾಲೇಜು ವ್ಯಾಸಂಗ ಮಾಡುತ್ತಿರುವ ವಿಕಲಚೇತನ ವಿದ್ಯಾರ್ಥಿಗಳು 2026-27ನೇ ಸಾಲಿನಲ್ಲಿ ಕಾಲೇಜುಗಳಿಗೆ ಪಾವತಿಸಿರುವ ಶುಲ್ಕಗಳ್ನು (ಪರೀಕ್ಷಾ ಶುಲ್ಕ, ಬೋಧನಾ ಶುಲ್ಕ, ಪ್ರಯೋಗಾಲಯ ಶುಲ್ಕ, ಕ್ರೀಡಾ ಶುಲ್ಕ, ಗ್ರಂಥಾಲಯ ಶುಲ್ಕ) ಮರುಪಾವತಿಸಲು ಮೂಲ ರಶೀದಿಯೊಂದಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ತಾಲ್ಲೂಕು ಪಂಚಾಯಿತಿ ಕಾರ್ಯಾಲಯಗಳಾದ ಮಂಡ್ಯ, ಮದ್ದೂರು, ಮಳವಳ್ಳಿ, ಶ್ರೀರಂಗಪಟ್ಟಣ, ಪಾಂಡವಪುರ, ನಾಗಮಂಗಲ, ಕೆ.ಆರ್.ಪೇಟೆ ಕಛೇರಿಗಳಲ್ಲಿ ಎಂ.ಆರ್.ಡಬ್ಲ್ಯೂರವರಿಂದ ಪಡೆದು ಭರ್ತಿಮಾಡಿಅಗತ್ಯ ದಾಖಲಾತಿಗಳೊಂದಿಗೆ ಸೆಪ್ಟೆಂಬರ್ 30 ರೊಳಗೆ ಆಯಾತಾಲ್ಲೂಕು ಪಂಚಾಯಿತಿ ಕಛೇರಿಗಳಲ್ಲಿ ಅರ್ಜಿಯನ್ನು ಸಲ್ಲಿಸಬಹುದು.ಹೆಚ್ಚಿನ ಮಾಹಿತಿಗಾಗಿದೂ.ಸಂ. 08232-239234ಅನ್ನು ಸಂಪರ್ಕಿಸಬಹುದುಎಂದುಮಂಡ್ಯ.ಜಿಲ್ಲಾಅಂಗವಿಕಲರ ಹಾಗೂ ಹಿರಿಯನಾಗರೀಕರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿಆಹ್ವಾನ

**ಮಂಡ್ಯ:** ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದ ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆಯಲು ಪ್ರೋತ್ಸಾಹಿಸುವ ಉದ್ದೇಶದಿಂದ ಮಂಡಳಿಯು ಸಾಂದೀಪನಿ ಶಿಷ್ಯ ವೇತನಯೋಜನೆಯನ್ನುರಾಜ್ಯ ಈ-ಆಡಳಿತ ಇಲಾಖೆಯುರಾಜ್ಯ ಶಿಷ್ಯ ವೇತನವನ್ನು ಪ್ರಥಮ, ದ್ವಿತೀಯ ಪಿಯು, ಹಾಗೂ ಸಾಮಾನ್ಯ ಪದವಿ ಕೋರ್ಸ್‌ಗಳನ್ನು ವ್ಯಾಸಂಗ ಮಾಡುತ್ತಿರುವ ಬ್ರಾಹ್ಮಣ ವಿದ್ಯಾರ್ಥಿಗಳಿಗೆ ರೂ.15,000/-ದಂತೆ ಶಿಷ್ಯ ವೇತನ ಹಾಗೂ ಅಇಖಿ, ಓಇಇಖಿ ಸೇರಿದಂತೆ ಸಾಮಾನ್ಯ ಪ್ರವೇಶ ಪರೀಕ್ಷೆಗಳ ಮೂಲಕ ಪದವಿ ಮತ್ತು ಸ್ನಾತಕೋತ್ತರ ಪದವಿಗಳಿಗೆ ದಾಖಲಾತಿ ಪಡೆದ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಶುಲ್ಕದ 2/3 ಭಾಗದ ಮೊತ್ತವನ್ನು ಮರುಪಾವತಿ ಮಾಡಲಾಗುವುದು. ಆದ್ದರಿಂದ ಬ್ರಾಹ್ಮಣ ಸಮುದಾಯದ ಆಸಕ್ತ ವಿದ್ಯಾರ್ಥಿಗಳು ತಿತಿತಿ.ಇಊಜಊ.ಇಚಿಡಿಟಿಚಿಣಚಿಇಚಿ. ರಡಿಬ.ಟಿನಲ್ಲಿಅರ್ಜಿ ಸಲ್ಲಿಸಬಹುದುಎಂದುಮಂಡ್ಯಜಿಲ್ಲೆ, ಜಿಲ್ಲಾಕೌಶಲ್ಯಾಭಿವೃದ್ಧಿಕಛೇರಿಯಜಿಲ್ಲಾಕೌಶಲ್ಯಾಭಿವೃದ್ಧಿ ಅಧಿಕಾರಿಗಳಾದ ದಿವ್ಯಶ್ರೀ.ಎನ್‌ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೆ.05 ರಂದು ಶಿಕ್ಷಕರ ದಿನಾಚರಣೆ

**ಮಡಿಕೇರಿ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ ಇವರ ಸಂಯುಕ್ತಾಶ್ರಯದಲ್ಲಿ ಸೆಪ್ಟೆಂಬರ್, 5 ರಂದು ಬೆಳಗ್ಗೆ 10 ಗಂಟೆಗೆ ನಗರದ ಸಂತ ಜೋಸೆಫರ ಪ್ರೌಢಶಾಲೆಯಲ್ಲಿ" ಶಿಕ್ಷಕರ ದಿನಾಚರಣೆ ಮತ್ತು ಜಿಲ್ಲಾ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ.

ಕೊಡಗು ಜಿಲ್ಲಾ ಉಸ್ತುವಾರಿ ಸಚಿವರಾದ ಪಿ.ಎಂ.ನರೇಂದ್ರಸ್ವಾಮಿ, ಮಡಿಕೇರಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ.ಮಂತರ್ ಗೌಡ, ಮುಖ್ಯಮಂತ್ರಿ ಅವರ ರಾಜಕೀಯ ಕಾರ್ಯದರ್ಶಿ ಹಾಗೂ ವಿರಾಜಪೇಟೆ ವಿಧಾನಸಭಾ ಕ್ಷೇತ್ರದ ಶಾಸಕರಾದ ಎ.ಎಸ್.ಪೊನ್ನಣ್ಣ, ಸಂಸದರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ರಾಜ್ಯಸಭಾ ಸದಸ್ಯರಾದ ಅಜಯ್ ಮಾಕನ್, ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಎಸ್.ಆರ್.ಮೆಹರೋಜ್ ಖಾನ್, ಕರ್ನಾಟಕ ವಿಧಾನ ಪರಿಷತ್ ಸದಸ್ಯರಾದ ಎಂ.ಪಿ.ಸುಜಾ ಕುಶಾಲಪ್ಪ, ಎಸ್.ಎಲ್.ಭೋಜೇಗೌಡ, ಡಾ.ಧನಂಜಯ ಸರ್ಜಿ, ಕರ್ನಾಟಕ ಕ್ರೀಡಾ ಪ್ರಾಧಿಕಾರದ ಉಪಾಧ್ಯಕ್ಷರಾದ ಸಿ.ಎಸ್.ಅರುಣ್ ಮಾಚಯ್ಯ, ಮಡಿಕೇರಿ ನಗರಸಭೆ ಅಧ್ಯಕ್ಷರಾದ ಕಲಾವತಿ ಪಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾ ಅಧ್ಯಕ್ಷರಾದ ಟಿ.ಎಂ.ಧರ್ಮಜ ಉತ್ತಪ್ಪ, ಕೊಡಗು ಜಿಲ್ಲಾ ಪಂಚಾಯತ್ ಆಡಳಿತಾಧಿಕಾರಿ ಹಾಗೂ ಕೊಡಗು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ಎಸ್.ವಿ.ಪ್ರಸಾದ್, ಶಕ್ತಿ ದಿನಪತ್ರಿಕೆಯ ಸಲಹಾ ಸಂಪಾದಕರಾದ ಬಿ.ಜಿ.ಅನಂತಶಯನ, ಜಿಲ್ಲಾಧಿಕಾರಿ ಎಸ್.ಜೆ.ಸೋಮಶೇಖರ್, ಜಿ.ಪಂ.ಸಿಇಒ ಆನಂದ್ ಪ್ರಕಾಶ್ ಮೀನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್.ಎನ್.ಬಿಂದುಮಣಿ ಇತರರು ಪಾಲ್ಗೊಳ್ಳಲಿದ್ದಾರೆ.

# ಕುಡಿಯುವ ನೀರಿನ ಸಮಸ್ಯೆಯಾಗದಂತೆ ಮುಂಜಾಗ್ರತೆ ವಹಿಸಿ: ಜಿಲ್ಲಾಧಿಕಾರಿ



**ಮಂಡ್ಯ:** ಮಾನ್ಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ, ಮಾನ್ಯಕೆ.ಆರ್. ಪೇಟೆ ವಿಧಾನಸಭಾಕ್ಷೇತ್ರದ ಶಾಸಕರು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳ ಉಪಸ್ಥಿತಿಯಲ್ಲಿ ಕೆ.ಆರ್. ಪೇಟೆತಾಲ್ಲೂಕಿನ ಬರ ನಿರ್ವಹಣೆ, ಕುಡಿಯುವ ನೀರಿನ ಪೂರೈಕೆ, ವಸತಿ/ನಿವೇಶನ ರಹಿತರಿಗೆ ನಿವೇಶನ ಹಂಚಿಕೆ ಹಾಗೂ ವಿವಿಧಅಭಿವೃದ್ಧಿ ವಿಷಯಗಳ ಕುರಿತು ಚಿಕ್ಕೋನಹಳ್ಳಿ ಫಾರಂ ಸಭಾ ಭವನದಲ್ಲಿ ಪರಿಶೀಲನಾ ಸಭೆ ನಡೆಯಿತು.

ಸಭೆಯಲ್ಲಿಕುಡಿಯುವ ನೀರಿನ ನಿರ್ವಹಣೆಗೆ ಪ್ರಥಮಆದ್ಯತೆ ನೀಡಿ, ಗ್ರಾಮವಾರು ನೀರಿನ ಲಭ್ಯತೆ ಹಾಗೂ ಬೇಡಿಕೆಯನ್ನು ಪರಿಶೀಲಿಸಿ, ಸಮಸ್ಯಾತ್ಮಕ ಗ್ರಾಮಗಳನ್ನು ಮುಂಚಿತವಾಗಿಯೇಗುರುತಿಸುವಂತೆ ಸೂಚಿಸಲಾಯಿತು.ಕೊಳವೆಬಾವಿ, ಪಂಪ್‌ಸೆಟ್ ಹಾಗೂ ಪೈಪ್‌ಲೈನ್‌ಗಳ ದುರಸ್ತಿಯನ್ನು ವಿಳಂಬವಿಲ್ಲದೆಕೈಗೊಂಡು, ಅಗತ್ಯವಿರುವಕಡೆ ಪರ್ಯಾಯ ನೀರಿನ ಮೂಲಗಳನ್ನು ಗುರುತಿಸಬೇಕು.ಅನಿವಾರ್ಯ ಸಂದರ್ಭಗಳಲ್ಲಿ ಟ್ಯಾಂಕರ್ ಮೂಲಕ ಕುಡಿಯುವ ನೀರು ಪೂರೈಸಲು ಪೂರ್ವಸಿದ್ಧತೆ ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಲಾಯಿತು.

ಜಲ ಜೀವನ್ ಮಿಷನ್ ಹಾಗೂ ಬಹುಗ್ರಾಮಕುಡಿಯುವ ನೀರಿನ ಯೋಜನೆಗಳ ಪ್ರಗತಿಯನ್ನು ಪರಿಶೀಲಿಸಿ, ಅಪೂರ್ಣ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಿ ಸಾರ್ವಜನಿಕರಿಗೆ ನಿರಂತರವಾಗಿ ಶುದ್ಧಕುಡಿಯುವ ನೀರುದೊರೆಯುವಂತೆಕ್ರಮ ವಹಿಸಲು ತಿಳಿಸಲಾಯಿತು.

ಇದೇ ವೇಳೆ ತಾಲ್ಲೂಕಿನ ಬರ ಪರಿಸ್ಥಿತಿ, ಕೆರೆ-ಕಟ್ಟೆಗಳಲ್ಲಿನ ನೀರಿನ ಸಂಗ್ರಹ, ಅಂತರ್ಜಲ ಮಟ್ಟ, ಬೆಳೆಗಳ ಸ್ಥಿತಿಗತಿ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರು ಮತ್ತು ಮೇವಿನ ಲಭ್ಯತೆಕುರಿತು ಪರಿಶೀಲಿಸಿ, ಯಾವುದೇತುರ್ತು ಪರಿಸ್ಥಿತಿ ಎದುರಾದರೂ ಸಮರ್ಪಕವಾಗಿ ನಿರ್ವಹಿಸಲು ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಲಾಯಿತು.

ವಸತಿ/ನಿವೇಶನ ರಹಿತಅರ್ಹ ಕುಟುಂಬಗಳನ್ನು ಗುರುತಿಸಿ ನಿವೇಶನ ಹಂಚಿಕೆ ಪ್ರಕ್ರಿಯೆಯನ್ನು ತ್ವರಿತಗೊಳಿಸಲು ಹಾಗೂ ಗ್ರಾಮವಾರು ಲಭ್ಯವಿರುವ ಸರ್ಕಾರಿ ಜಮೀನುಗಳನ್ನು ಗುರುತಿಸಿ, ನಿವೇಶನ ಪ್ರದೇಶಗಳಲ್ಲಿ ರಸ್ತೆ, ಕುಡಿಯುವ ನೀರು, ವಿದ್ಯುತ್ ಸೇರಿದಂತೆಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸುವಕುರಿತು ಸಭೆಯಲ್ಲಿಚರ್ಚಿಸಲಾಯಿತು.

ಅಲ್ಲದೆ, ಕೃಷಿ, ಪಶುಸಂಗೋಪನೆ, ನರೇಗಾ ಕಾಮಗಾರಿಗಳು, ಜಲ ಸಂರಕ್ಷಣೆ, ವಿದ್ಯುತ್ ಹಾಗೂ ಸಾರ್ವಜನಿಕರಇತರೆ ಸಮಸ್ಯೆಗಳ ಕುರಿತು ಪರಿಶೀಲಿಸಲಾಯಿತು. ಸಂಬಂಧಪಟ್ಟಎಲ್ಲಾ ಇಲಾಖೆಗಳು ಪರಸ್ಪರ ಸಮನ್ವಯದಿಂದಕಾರ್ಯನಿರ್ವಹಿಸಿ, ಸಾರ್ವಜನಿಕರ ಸಮಸ್ಯೆಗಳಿಗೆ ಸ್ಥಳೀಯ ಹಂತದಲ್ಲಿಯೇತ್ವರಿತವಾಗಿ ಪರಿಹಾರಒದಗಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಯಿತು.

ಸದರಿ ಸಭೆಯಲ್ಲಿಕೆ.ಆರ್.ಪೇಟೆತಾಲ್ಲೂಕು ತಹಶೀಲ್ದಾರ್, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕಅಧಿಕಾರಿ ಹಾಗೂ ವಿವಿಧ ಇಲಾಖೆಗಳ ತಾಲ್ಲೂಕು ಮಟ್ಟದ ಅಧಿಕಾರಿಗಳು ಮತ್ತು ಸಂಬಂಧಪಟ್ಟ ಅಧಿಕಾರಿಗಳು ಹಾಜರಿದ್ದರು.

### 19 ನೇ ಕೊಡವ ಪುಸ್ತಕ ಪತ್ತಾಯ

## ಸಂಸ್ಕೃತಿ-ಸಂಸ್ಕಾರದಿಂದ ಮನುಷ್ಯತ್ವ ರೂಢಿಸಿಕೊಳ್ಳಲು ಸಾಧ್ಯ: ನಾಚಯ್ಯ

**ಮಡಿಕೇರಿ:** ಸಂಸ್ಕೃತಿಯ ಜೊತೆಗೆ ಒಳ್ಳೆಯ ಸಂಸ್ಕಾರವನ್ನು ರೂಢಿಸಿಕೊಂಡರೆ ಜಾತಿ ವ್ಯವಸ್ಥೆ ನಿರ್ಮೂಲನೆ ಸಾಧ್ಯ. ಜಾತಿ ವ್ಯವಸ್ಥೆಯಿಂದ ದೂರ ಸರಿಯಬೇಕಾದಲ್ಲಿ ವಿದ್ಯೆ, ಬುದ್ಧಿಯ ಜೊತೆಗೆ ಒಳ್ಳೆಯ ನಡೆ-ನುಡಿ, ಸಂಸ್ಕೃತಿಯನ್ನು ಬೆಳೆಸಿಕೊಂಡು ಸಂಸ್ಕಾರವನ್ನು ರೂಢಿಸಿಕೊಳ್ಳಬೇಕು. ಇದಕ್ಕಾಗಿ ಒಳ್ಳೆಯ ಪುಸ್ತಕಗಳನ್ನು ಓದುವ ಅಭ್ಯಾಸ ಇರಬೇಕು. ಕರ್ನಾಟಕ ಕೊಡವ ಅಕಾಡೆಮಿಯ ನೂತನ ಯೋಜನೆಯಾದ ಕೊಡವ ಪುಸ್ತಕ ಪತ್ತಾಯದ ಮೂಲಕ ನಾಡಿನೆಲ್ಲೆಡೆ ಸಂಘ-ಸಂಸ್ಥೆ, ಸಮಾಜ, ದೇವನೆಲೆ ಐನ್‌ಮನೆಗಳಲ್ಲಿ ಅನಾವರಣಗೊಳಿಸುತ್ತಿದ್ದೇವೆ. ಇದರ ಪ್ರಯೋಜನವನ್ನು ಎಲ್ಲರೂ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಕರ್ನಾಟಕ ಕೊಡವ ಸಾಹಿತ್ಯ ಅಕಾಡೆಮಿಯ ಅಧ್ಯಕ್ಷ ಅಜ್ಜಿನಿಕಂಡ ಸಿ. ಮಹೇಶ್ ನಾಚಯ್ಯ ಕರೆ ನೀಡಿದರು.



ಅಕಾಡೆಮಿಯ 19ನೇ ಕೊಡವ ಪುಸ್ತಕ ಪತ್ತಾಯ ಅನಾವರಣ ಕಾರ್ಯಕ್ರಮವನ್ನು ಕೈಕೇರಿಯಲ್ಲಿರುವ ಸವಿತಾ ಸಮಾಜ ಕಟ್ಟಡದಲ್ಲಿ ನೆರವೇರಿಸಿ ಮಾತನಾಡಿದ ಇವರು, ಸಂಘ, ಸಂಸ್ಥೆ, ಸಮಾಜ, ಐನ್‌ಮನೆಗಳಿಗೆ ಅಕಾಡೆಮಿ ವತಿಯಿಂದ ದುಡಿ, ತಾಳ, ಪರಿಕರಗಳನ್ನು ಕೊಡವ ಸಂಸ್ಕೃತಿಯ ಉನ್ನತಿಗೆ ಉಪಯೋಗವಾಗುವಂತೆ ಬಳಕೆ ಮಾಡಬೇಕಾಗಿ ಹೇಳಿದರು. ಆಯಾಯ ಸ್ಥಳಗಳಲ್ಲಿ ಬಾಳೋಪಾಟ್, ಉಮ್ಮತ್ತಾಟ್, ಕೋಲಾಟ್ ಅರಿತಿರುವವರು 'ಆಟ್-ಪಾಟ್' ಕಲಿಸಿಕೊಡಲು ಬಯಸಿದ್ದಲ್ಲಿ ಅಕಾಡೆಮಿಯಿಂದ ನೆರವು ನೀಡಲಾಗುವುದು ಎಂದರು.

ಸವಿತಾ ಸಮಾಜದ ಅಧ್ಯಕ್ಷ ನಾಯಂದಿರ ಆರ್.ಶಿವಾಜಿ ಮಾತನಾಡಿ, ಕಲಿಯಲು ಬೇಕಾದಷ್ಟಿದೆ. ಕಲಿತದ್ದು ಎಂದಿಗೂ ಶಾಶ್ವತವಾಗಿರುತ್ತದೆ. ಅಕಾಡೆಮಿಯ ವತಿಯಿಂದ ಸವಿತಾ ಸಮಾಜದಲ್ಲಿ ಕೊಡವ ಪುಸ್ತಕ ಪತ್ತಾಯ ಸ್ಥಾಪಿಸಿರುವುದು ಹೆಮ್ಮೆಯ ವಿಚಾರ. ಸಮಾಜ ಬಾಂಧವರು ಇದರ ಸದುಪಯೋಗ ಪಡೆದುಕೊಳ್ಳುವಂತಾಗಬೇಕು. ಅಂತೆಯೇ, ಅಕಾಡೆಮಿ ವತಿಯಿಂದ ಸವಿತಾ ಸಮಾಜಕ್ಕೆ ಒಡಿಕತ್ತಿ, ದುಡಿತಾಳ ನೀಡಿರುವುದು ಸಮಾಜದಲ್ಲಿ ಕೊಡವ ಸಂಸ್ಕೃತಿಯನ್ನು ಕಾಪಾಡಿಕೊಂಡು ಹೋಗಲು ಕಾರಣೀಭೂತವಾಗಿದೆ ಎಂದರು. ಅಕಾಡೆಮಿಯಿಂದ ಸವಿತಾ ಸಮಾಜಕ್ಕೆ ಪುಸ್ತಕ ಪತ್ತಾಯದ ನೋಂದಣಿ ಪತ್ರವನ್ನು ನೀಡಲಾಯಿತು. ಅಂತೆಯೇ ಸವಿತಾ ಸಮಾಜ ವತಿಯಿಂದ ಅಕಾಡೆಮಿ ಅಧ್ಯಕ್ಷರಿಗೆ ರೂ.ಹತ್ತು ಸಾವಿರದ ಚೆಕ್ ಹಸ್ತಾಂತರಿಸಿದರು.

ಈ ಸಂದರ್ಭದಲ್ಲಿ ಸವಿತಾ ಸಮಾಜದ ವೇದಪಂಡ, ಚೋಂದುವಂಡ ಹಾಗೂ ಮುಡುವಂಡ ಕುಟುಂಬಸ್ಥರಿಗೆ ದುಡಿ ನೀಡಲಾಯಿತು. ಸಮಾಜಕ್ಕೆ ಒಡಿಕತ್ತಿ ನೀಡಲಾಯಿತು. ಕಾರ್ಯಕ್ರಮದ ಆರಂಭದಲ್ಲಿ ವೇದಪಂಡ ವಿನುತ ಲವ ಪ್ರಾರ್ಥಿಸಿದರು. ತಾಪನೆರ ಸುಷ್ಮಿ ವಿಠಲ ಸ್ವಾಗತಿಸಿ ನಿರೂಪಿಸಿದರು. ಸಮಾಜದ ಉಪಾಧ್ಯಕ್ಷ ಮುಡುವಂಡ ಎಸ್. ರಮೇಶ, ನಿರ್ದೇಶಕ ಹಾಗೂ ನಿವೃತ್ತ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ತಾಪನೆರ ಎಂ.ಸುರೇಶ್, ಅಕಾಡೆಮಿಯ ಸದಸ್ಯರಾದ ಚೆಪ್ಪುಡಿರ ಉತ್ತಪ್ಪ, ಕಂಬೆಯಂಡ ಡೀನಾ ಬೋಜಣ್ಣ, ಪೊನ್ನಿರ ಗಗನ್, ಚೊಟ್ಟೆಯಂಡ ಸಂಜು ಕಾವೇರಪ್ಪ ಪಾನಿಕುಟ್ಟಿರ ಕುಟ್ಟಪ್ಪ ಉಪಸ್ಥಿತರಿದ್ದರು.

# ಬೊಮ್ಮನಾಯಕನಹಳ್ಳಿ ಗ್ರಾಮಕ್ಕೆ ಭೇಟಿ ನೀಡಿದ ಡಿಸಿ-ಸಿಇಒ

### ಕುಡಿಯುವ ನೀರಿನ ಸಮಸ್ಯೆ ಪರಿಶೀಲಿಸಿದ ಜಿಲ್ಲಾಧಿಕಾರಿ ಮತ್ತು ಸಿಇಒ



**ಮಂಡ್ಯ:** ಜಿಲ್ಲೆಯ ಕೆ.ಆರ್.ಪೇಟೆ ತಾಲ್ಲೂಕಿನ ಶೀಳನೆರೆ ಗ್ರಾಮ ಪಂಚಾಯಿತಿಯ ಬೊಮ್ಮನಾಯಕನಹಳ್ಳಿ ಗ್ರಾಮದಲ್ಲಿ ಎದುರಾಗಿರುವ ಕುಡಿಯುವ ನೀರಿನ ಸಮಸ್ಯೆಯನ್ನು ಜಿಲ್ಲಾಧಿಕಾರಿ ಕುಮಾರ್ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ನಂದಿನಿ ಕೆ.ಆರ್. ಅವರು ಭೇಟಿ ನೀಡಿ ಪರಿಶೀಲಿಸಿದರು.

ಗ್ರಾಮದಲ್ಲಿ ಪ್ರಸ್ತುತ ಖಾಸಗಿ ಕೊಳವೆ ಬಾವಿಯ ಮೂಲಕ ಕುಡಿಯುವ ನೀರು ಸರಬರಾಜು ಮಾಡುತ್ತಿರುವ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದ ಜಿಲ್ಲಾಧಿಕಾರಿ ಹಾಗೂ ಸಿಇಒ ಅವರು, ಖಾಸಗಿ ಕೊಳವೆ ಬಾವಿ ಮಾಲೀಕರಿಗೆ ನಿಯಮಾನುಸಾರ ಅನುದಾನ ಪಾವತಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯ ಯಾವುದೇ ಗ್ರಾಮದಲ್ಲಿಯೂ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡು, ಅಗತ್ಯವಿರುವಕಡೆಪರ್ಯಾಯನೀರುಪೂರೈಕೆಗೆ ವ್ಯವಸ್ಥೆ ಮಾಡಬೇಕು. ಬೇಸಿಗೆಯ ಹಿನ್ನೆಲೆಯಲ್ಲಿ ನೀರಿನ ಲಭ್ಯತೆ ಹಾಗೂ ಸರಬರಾಜಿನ ಮೇಲೆ ನಿರಂತರ ನಿಗಾವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯಪಾಲಕ ಎಂಜಿನಿಯರ್ ಪ್ರಮೋದ್ ಕುಮಾರ್ ಎನ್.ಜಿ., ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಸುಷ್ಮಾ, ಶೀಳನೆರೆ ಗ್ರಾಮ ಪಂಚಾಯಿತಿ ಪಿಡಿಒ ಸೇರಿದಂತೆ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

## ಕೊಡಗು ಜಿಲ್ಲೆಯ ಮಳೆ ವಿವರ(ಮಿಲಿ ಮೀಟರ್‌ಗಳಲ್ಲಿ)

**ಮಡಿಕೇರಿ:** ಕೊಡಗು ಜಿಲ್ಲೆಯಲ್ಲಿ ಬುಧವಾರ ಬೆಳಗ್ಗೆ 8.30ಕ್ಕೆ ಕೊನೆಗೊಂಡಂತೆ ಕಳೆದ 24 ಗಂಟೆ ಅವಧಿಯಲ್ಲಿ ಸರಾಸರಿ 1.96 ಮಿ.ಮೀ. ಮಳೆಯಾಗಿದೆ. ಕಳೆದ ವರ್ಷ ಇದೇ ದಿನ 12.52 ಮಿ.ಮೀ. ಮಳೆಯಾಗಿತ್ತು. ಜನವರಿಯಿಂದ ಇಲ್ಲಿಯವರೆಗಿನ ಮಳೆ 1420.38 ಮಿ.ಮೀ, ಕಳೆದ ವರ್ಷ ಇದೇ ಅವಧಿಯಲ್ಲಿ 2605.27 ಮಿ.ಮೀ ಮಳೆಯಾಗಿತ್ತು.

ಮಡಿಕೇರಿ ತಾಲ್ಲೂಕಿನಲ್ಲಿ ಇಂದಿನ ಸರಾಸರಿ ಮಳೆ 2.60 ಮಿ.ಮೀ. ಕಳೆದ ವರ್ಷ ಇದೇ ದಿನ 23.90 ಮಿ.ಮೀ. ಜನವರಿಯಿಂದ ಇಲ್ಲಿಯವರೆಗಿನ ಮಳೆ 2344.79 ಮಿ.ಮೀ, ಕಳೆದ ವರ್ಷ ಇದೇ ಅವಧಿಯಲ್ಲಿ 3916.78 ಮಿ.ಮೀ. ಮಳೆಯಾಗಿತ್ತು.

ವಿರಾಜಪೇಟೆ ತಾಲ್ಲೂಕಿನಲ್ಲಿ ಇಂದಿನ ಸರಾಸರಿ ಮಳೆ 0.90 ಮಿ.ಮೀ. ಮಳೆಯಾಗಿದೆ. ಕಳೆದ ವರ್ಷ ಇದೇ ದಿನ 4.75 ಮಿ.ಮೀ, ಜನವರಿಯಿಂದ ಇಲ್ಲಿಯವರೆಗಿನ ಮಳೆ 1257.67 ಮಿ.ಮೀ. ಕಳೆದ ವರ್ಷ ಇದೇ ಅವಧಿಯಲ್ಲಿ 2349.40 ಮಿ.ಮೀ. ಮಳೆಯಾಗಿತ್ತು.

ಪೊನ್ನಂಪೇಟೆ ತಾಲ್ಲೂಕಿನಲ್ಲಿ ಇಂದಿನ ಸರಾಸರಿ ಮಳೆ 3.60 ಮಿ.ಮೀ. ಮಳೆಯಾಗಿದೆ. ಕಳೆದ ವರ್ಷ ಇದೇ ದಿನ 7.45 ಮಿ.ಮೀ. ಜನವರಿಯಿಂದ ಇಲ್ಲಿಯವರೆಗಿನ ಮಳೆ 1286.01 ಮಿ.ಮೀ. ಕಳೆದ ವರ್ಷ ಇದೇ ಅವಧಿಯಲ್ಲಿ 2414.06 ಮಿ.ಮೀ. ಮಳೆಯಾಗಿತ್ತು.

ಸೋಮವಾರಪೇಟೆ ತಾಲ್ಲೂಕಿನಲ್ಲಿ ಇಂದಿನ ಸರಾಸರಿ ಮಳೆ 2.40 ಮಿ.ಮೀ. ಮಳೆಯಾಗಿದೆ. ಕಳೆದ ವರ್ಷ ಇದೇ ದಿನ 16.70 ಮಿ.ಮೀ. ಜನವರಿಯಿಂದ ಇಲ್ಲಿಯವರೆಗಿನ ಮಳೆ 1574.30 ಮಿ.ಮೀ. ಕಳೆದ ವರ್ಷ ಇದೇ ಅವಧಿಯಲ್ಲಿ 2992.02 ಮಿ.ಮೀ. ಮಳೆಯಾಗಿತ್ತು.

ಕುಶಾಲನಗರ ತಾಲ್ಲೂಕಿನಲ್ಲಿ ಇಂದಿನ ಸರಾಸರಿ ಮಳೆ 0.30 ಮಿ.ಮೀ. ಮಳೆಯಾಗಿದೆ. ಕಳೆದ ವರ್ಷ ಇದೇ ದಿನ 9.80 ಮಿ.ಮೀ. ಜನವರಿಯಿಂದ ಇಲ್ಲಿಯವರೆಗಿನ ಮಳೆ 638.89 ಮಿ.ಮೀ. ಕಳೆದ ವರ್ಷ ಇದೇ ಅವಧಿಯಲ್ಲಿ 1354.09 ಮಿ.ಮೀ. ಮಳೆಯಾಗಿತ್ತು.

# ಸಂಪನ್ಮೂಲ ಕ್ರೋಢೀಕರಣಕ್ಕೆ ಹೆಚ್ಚು ಒತ್ತು ನೀಡಿ : ಹೆಚ್.ಸಿ.ಬಾಲಕೃಷ್ಣ



**ಮೈಸೂರು:** ಜನಸಂಖ್ಯೆಯಲ್ಲಿ ಅಂದಾಜು ಶೇ.40 ರಷ್ಟು ಜನ ನಗರ ಪ್ರದೇಶದಲ್ಲಿ ವಾಸವಾಗಿದ್ದು, ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಶೇ 30 ರಷ್ಟು ಅನುದಾನ ದೊರಕುತ್ತದೆ ಉಳಿದ ಹಣವನ್ನು ಕ್ರೋಢೀಕರಿಸಬೇಕಿರುತ್ತದೆ. ಈ ಹಿನ್ನಲೆಯಲ್ಲಿ ಸಂಪನ್ಮೂಲ ಕ್ರೋಢೀಕರಣಕ್ಕೆ ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಹೆಚ್ಚು ಒತ್ತು ನೀಡಬೇಕು ಎಂದು ಪೌರಾಡಳಿತ ಸಚಿವ ಹೆಚ್.ಸಿ.ಬಾಲಕೃಷ್ಣ ತಿಳಿಸಿದರು.

ಪ್ರಾದೇಶಿಕ ಆಯುಕ್ತರ ಕಚೇರಿ ಸಭಾಂಗಣದಲ್ಲಿ ಹಾಸನ ಹಾಗೂ ಮಂಡ್ಯ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದರು. ಖಾಸಗಿ ರಸ್ತೆಗಳನ್ನು ನಗರ ಸ್ಥಳೀಯ ಸಂಸ್ಥೆ ವ್ಯಾಪ್ತಿಗೆ ತೆಗೆದುಕೊಂಡು ನಿರ್ವಹಿಸಲು ಸಿದ್ಧತೆ ನಡೆಯುತ್ತಿದೆ. ಈ ಕುರಿತಂತೆ ಇಲಾಖೆಯಿಂದ ಆದೇಶ ಹೊರಡಿಸಲಾಗುವುದು. ಆಸ್ತಿಗಳನ್ನು ಎ ಖಾತಾ ಮತ್ತು ಬಿ.ಖಾತಾ ಕುರಿತು ನಿರ್ಧರಿಸಿ ಖಾತೆ ಮಾಡಿಕೊಳ್ಳುವಂತೆ ಸಾರ್ವಜನಿಕರಿಗೆ ಅರಿವು ಮೂಡಿಸಿದರು. ಬಾಡಿಗೆಗೆ ನೀಡಲಾಗಿರುವ ವಾಣಿಜ್ಯ ಮಳಿಗೆ ಮಾಲೀಕರು ನಿಗದಿಪಡಿಸಿದ ದಿನಾಂಕದೊಳಗೆ ಬಾಡಿಗೆ ಪಾವತಿಸಬೇಕು, ಇಲ್ಲವಾದಲ್ಲಿ ನೋಟೀಸ್ ಜಾರಿ ಮಾಡಿ ಅಂಗಡಿಯನ್ನು ಮುಚ್ಚುವ ಕೆಲಸವಾಗಬೇಕು. ಅಧಿಕಾರಿಗಳ ನಿರ್ಲಕ್ಷ್ಯದಿಂದ ವಾಣಿಜ್ಯ ಮಳಿಗೆಗಳ ಬಾಡಿಗೆ ವಸೂಲಿಯಾಗದಿದ್ದಲ್ಲಿ ಅಂತಹ ಅಧಿಕಾರಿಗಳ ವಿರುದ್ಧ ಕ್ರಮವಹಿಸುವುದಾಗಿ ಎಚ್ಚರಿಕೆ ನೀಡಿದರು.

ವಿಳಂಬವಾಗುತ್ತಿರುವ ಕುಡಿಯುವ ನೀರು ಮತ್ತು ಒಳಚರಂಡಿ ಕಾಮಗಾರಿಗಳನ್ನು ಜಿಲ್ಲಾವಾರು ಪಟ್ಟಿಮಾಡಿಕೊಂಡು ಗುತ್ತಿಗೆದಾರರು, ಅಧಿಕಾರಿಗಳು ಹಾಗೂ ಸಂಬಂಧಿಸಿದ ಶಾಸಕರೊಂದಿಗೆ ಪ್ರತ್ಯೇಕ ಸಭೆ ನಡೆಸಲು ವ್ಯವಸ್ಥೆ ಮಾಡಿ. ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರು ಪ್ರತಿ ದಿನ ಬೆಳಿಗ್ಗೆ 6 ಗಂಟೆಗೆ ತಮ್ಮ ಕ್ಷೇತ್ರ ವ್ಯಾಪ್ತಿಯಲ್ಲಿ ಸ್ವಚ್ಛತೆ, ಕುಡಿಯುವ ನೀರು, ಒಳಚರಂಡಿ ಸೇರಿದಂತೆ ಇನ್ನಿತರೆ ಮೂಲಭೂತ ವ್ಯವಸ್ಥೆಗಳ ಬಗ್ಗೆ ಪರಿಶೀಲನೆ ನಡೆಸಬೇಕು. ಇದರಿಂದ ಬಹಳಷ್ಟು ಸಮಸ್ಯೆಗಳು ಪರಿಹಾರವಾಗುತ್ತದೆ. ನಗರ ಸ್ಥಳೀಯ ಸಂಸ್ಥೆಗಳು ಪೌರಕಾರ್ಮಿಕರಿಗೆ ವಸತಿ ಬಡಾವಣೆ ನಿರ್ಮಿಸಲು ಎರಡು ಎಕರೆ ಭೂಮಿ ಕಾಯ್ದಿರಿಸುವಂತೆ ಈಗಗಲೇ ತಿಳಿಸಲಾಗಿದೆ. ಕೆಲಸ ಪ್ರಗತಿಯಲ್ಲಿದೆ ಇದರೊಂದಿಗೆ ಪೌರಕಾರ್ಮಿಕರು ನಿವೃತ್ತಿ ಆದ ನಂತರ ಅವರಿಗೆ ನಿವೇಶನ ಒದಗಿಸಲು ನಗರ ಸ್ಥಳೀಯ ಸಂಸ್ಥೆಯ ಹೊರಭಾಗ ಅಥವಾ ಗ್ರಾಮೀಣ ಭಾಗದಲ್ಲಿ 5 ಎಕರೆ ಭೂಮಿ ಕಾಯ್ದರಿಸಲು ಪೌರಾಡಳಿತ ಇಲಾಖೆಯಿಂದ ಜಿಲ್ಲಾಡಳಿತಕ್ಕೆ ಪತ್ರ ಬರೆಯಲಾಗುವುದು ಎಂದರು.

ಅಬಕಾರಿ ಸಚಿವ ಶಿವಲಿಂಗೇಗೌಡ ಹಾಸನ ಜಿಲ್ಲೆಯ ಬಹಳಷ್ಟು ಪಟ್ಟಣ ಪಂಚಾಯಿತಿಗಳಲ್ಲಿ ಸಿಬ್ಬಂದಿಗಳ ಕೊರತೆ ಇದ್ದು, ಕನಿಷ್ಠ ಸಿಬ್ಬಂದಿಗಳನ್ನಾದರೂ ನಿಯೋಜಿಸಿಕೊಡಬೇಕು. ಪೌರಾಡಳಿತ ಸಚಿವರು ವಿಭಾಗಮಟ್ಟದಲ್ಲಿ ಅಧಿಕಾರಿಗಳಿಗೆ ನೀಡಲಾಗಿರುವ ಸೂಚನೆಗಳನ್ನು ಅನುಷ್ಠಾನ ಮಾಡಿರುವ ಬಗ್ಗೆ ಜಿಲ್ಲಾ ಮಟ್ಟದಲ್ಲಿ ಸಭೆ ನಡೆಸಿ ಪರಿಶೀಲಿಸಲಾಗುವುದು ಎಂದರು. ಇದಕ್ಕೆ ಪ್ರತಿಕ್ರಿಯಿಸಿದ ಪೌರಾಡಳಿತ ಸಚಿವರು ಬೇರೆ ಇಲಾಖೆಗೆ ನಿಯೋಜನೆಯ ಮೇಲೆ ತೆರಳಿರುವ ಅಧಿಕಾರಿಗಳು ಹಾಗೂ ಸಿಬ್ಬಂದಿಗಳನ್ನು ಹಿಂಪಡೆದು ಪೌರಾಡಳಿತ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆ ಇರುವ ಭಾಗಕ್ಕೆ ನಿಯೋಜಿಸಲಾಗುವುದು. ಹೆಚ್ಚಿನ ಅನುದಾನ ಕ್ರೋಢೀಕರಣವಾಗುವ ನಗರಸ್ಥಳೀಯ ಸಂಸ್ಥೆಗಳಲ್ಲಿ ನಿಯಮಾನುಸಾರ ಹೊರಗುತ್ತಿಗೆ ಮೇಲೆ ಪಡೆದುಕೊಳ್ಳಲು ಸಾಧ್ಯವಾಗುವ ಸಿಬ್ಬಂದಿಗಳನ್ನು ಹೊರಗುತ್ತಿಗೆಯ ಮೇಲೆ ಪಡೆದುಕೊಳ್ಳಿ ಎಂದರು.

ಅರಸೀಕೆರೆ ನಗರಸಭೆ ವ್ಯಾಪ್ತಿಯಲ್ಲಿರುವ ಕೆಲವು ಕಟ್ಟಡಗಳಿಗೆ ಬಾಡಿಗೆಗೆ ಜನರು ಬರುತ್ತಿಲ್ಲ ಇದರಲ್ಲಿ ಕೆಲವು ಮಾರ್ಪಟು ಮಾಡಿ ಹಾಸ್ಟೆಲ್ ಗಳಿಗೆ ಬಾಡಿಗೆ ನೀಡಬಹುದು ಇದಕ್ಕೆ ಪೌರಾಡಳಿತ ಇಲಾಖೆ ಅನುಮತಿ ನೀಡಬೇಕಿದೆ ಎಂದು ತಿಳಿಸಿದರು. ಸಭೆಯಲ್ಲಿ ಶಾಸಕರಾದ ಎ.ಮಂಜು, ಎ.ಬಿ.ರಮೇಶ ಬಾಬು ಬಂಡಿಸಿದ್ದೇಗೌಡ, ಪೌರಾಡಳಿತ ಇಲಾಖೆ ನಿರ್ದೇಶಕ ಪಿ.ರವೀಂದ್ರ, ಸೇರಿ ಇನ್ನಿತರರು ಉಪಸ್ಥಿತರಿದ್ದರು.

## ದೆಹಲಿಯಲ್ಲಿ ಕೈ ನಾಯಕರನ್ನು ಭೇಟಿಯಾದ ಚಲುವರಾಯಸ್ವಾಮಿ

## ರಾಜ್ಯ ರಾಜಕೀಯದ ಬಗ್ಗೆ ಮಹತ್ವದ ಸಮಾಲೋಚನೆ"

**ನವದೆಹಲಿ:** ಇಲಾಖಾ ಕಾರ್ಯಗಳು, ರಾಷ್ಟ್ರೀಯ ಜಲ ಸಮಾವೇಶ ಹಾಗೂ ಕೇಂದ್ರ ಸಚಿವರು ಮತ್ತು ಅಧಿಕಾರಿಗಳೊಂದಿಗಿನ ಸಭೆಗಳ ನಿಮಿತ್ತ ನವದೆಹಲಿ ಪ್ರವಾಸದಲ್ಲಿರುವ ಜಲಸಂಪನ್ಮೂಲ ಸಚಿವ ಎನ್. ಚಲುವರಾಯಸ್ವಾಮಿ ಅವರು ಇಂದು ಎಐಸಿಸಿ ವರಿಷ್ಠರನ್ನು ಸೌಹಾರ್ದಯುತವಾಗಿ ಭೇಟಿ ಮಾಡಿದ್ದಾರೆ.



ನವದೆಹಲಿಯಲ್ಲಿ ಎಐಸಿಸಿ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸಂಘಟನಾ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಹಾಗೂ ಕರ್ನಾಟಕ ಉಸ್ತುವಾರಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರನ್ನು ಸಚಿವರು ಪ್ರತ್ಯೇಕವಾಗಿ ಭೇಟಿ ಮಾಡಿ ಮಾತುಕತೆ ನಡೆಸಿದರು.

ಈ ಭೇಟಿ ವೇಳೆ ರಾಜ್ಯ ಸರ್ಕಾರದ ಪ್ರಮುಖ ಇಲಾಖಾ ಕಾರ್ಯಕ್ರಮಗಳು, ಅಭಿವೃದ್ಧಿ ಯೋಜನೆಗಳ ಪ್ರಗತಿ ಹಾಗೂ ಪ್ರಸ್ತುತ ರಾಜ್ಯದ ರಾಜಕೀಯ ವಿದ್ಯಮಾನಗಳ ಕುರಿತು ಪಕ್ಷದ ಹಿರಿಯ ನಾಯಕರೊಂದಿಗೆ ವಿಸ್ತೃತವಾಗಿ

ಜಲಸಂಪನ್ಮೂಲ ಇಲಾಖೆಗೆ ಸಂಬಂಧಿಸಿದಂತೆ ದೆಹಲಿಯಲ್ಲಿ ನಡೆದ ಸರಣಿ ಸಭೆಗಳ ಮಾಹಿತಿಯನ್ನು ಹೈಕಮಾಂಡ್ ನಾಯಕರಿಗೆ ಸಚಿವರು ವಿವರಿಸಿದರು

## ಕಂಬಳ ರದ್ದು ಹೋರಾಟಕ್ಕೆ ಸುತ್ತೂರು ಶ್ರೀಗೆ ಆಹ್ವಾನ

**ಮೈಸೂರು:** "ಪರಿಸರಕ್ಕಾಗಿ ನಾವು" ಸಂಘಟನೆಯ ರಾಜ್ಯಾಧ್ಯಕ್ಷ ಮತ್ತು ಮಾಜಿ ಶಾಸಕ ಎ.ಟಿ.ರಾಮಸ್ವಾಮಿ ನೇತೃತ್ವದಲ್ಲಿ "ಪರಿಸರಕ್ಕಾಗಿ ನಾವು" ಸಂಘಟನೆಯ ನಿಯೋಗ ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿಯನ್ನು ಭೇಟಿಯಾಗಿ ದಸರಾ ಹಬ್ಬದಲ್ಲಿ ಕಂಬಳ ಆಯೋಜನೆ ರದ್ದು ಪಡಿಸುವಂತೆ ಮುಖ್ಯಮಂತ್ರಿಗಳಿಗೆ ಸಲಹೆ ನೀಡಲು ಮನವಿ ಪತ್ರ ಸಲ್ಲಿಸಲಾಯಿತು.



ಮನವಿ ಸ್ವೀಕರಿಸಿದ ಸ್ವಾಮೀಜಿ ಕಂಬಳ ಆಯೋಜನೆ ಮಾಡಲೇಬೇಕು ಎಂಬ ಪ್ರತಿಷ್ಠೆ ತಮಗಿಲ್ಲ. ಅಧಿಕಾರಿಗಳ ಜೊತೆಗೆ ಮಾತನಾಡಿ ತೀರ್ಮಾನಿಸುವೆ ಎಂದು ಇತ್ತೀಚೆಗೆ ಮೈಸೂರಿನಲ್ಲಿ ಮುಖ್ಯಮಂತ್ರಿಗಳು ಹೇಳಿರುವುದನ್ನು

ಈ ಹಿಂದೆ ಟಿ.ನರಸೀಪುರ ರೇಷ್ಮೆ ಕಾರ್ಖಾನೆ ಆವರಣದಲ್ಲಿ ಕ್ರೀಡಾಂಗಣ ಮಾಡುವ ಯೋಜನೆಯನ್ನು ಸರ್ಕಾರ ರದ್ದು ಪಡಿಸಲು ಸಹಾಯ ಮಾಡಿದಂತೆ ಕಂಬಳ ಆಯೋಜನೆ ರದ್ದು ಪಡಿಸಲು

ಎಂದು ವಿನಂತಿ ಮಾಡಲಾಯಿತು. ತೋಟಗಾರಿಕೆ ಇಲಾಖೆಯ ನಿವೃತ್ತ ನಿರ್ದೇಶಕ ಡಾ.ರಾಮಕೃಷ್ಣ, ಪನಾಸಂ ರಾಜ್ಯ ಪ್ರಧಾನ ಕಾರ್ಯದರ್ಶಿ ಪರಶುರಾಮೇಗೌಡ, ಪ್ರೊ. ಕಾಳಚನ್ನೇಗೌಡ, ಕೆ.ಜಿ.ಗುರುಸ್ವಾಮಿ,

## ಸೆ.08 ರಂದು ನೇರ ಸಂದರ್ಶನ

**ಮಡಿಕೇರಿ:** ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಸೆಪ್ಟೆಂಬರ್, 08 ರಂದು ಬೆಳಗ್ಗೆ 10.30 ರಿಂದ ಮಧ್ಯಾಹ್ನ 1.30 ರವರೆಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ನೇರ ಸಂದರ್ಶನ ನಡೆಯಲಿದೆ. ಈ ನೇರ ಸಂದರ್ಶನದಲ್ಲಿ ಐಸಿಐಸಿಐ ಬ್ಯಾಂಕ್, ಬೆಂಗಳೂರು, ಇವರು ತಮ್ಮ ಸಂಸ್ಥೆಗಳಲ್ಲಿ ಖಾಲಿಯಿರುವ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲಿದ್ದಾರೆ.

ಈ ನೇರ ಸಂದರ್ಶನದಲ್ಲಿ ಸೇಲ್ಸ್ ಮತ್ತು ರಿಲೇಷನ್‌ಶಿಪ್ ಮ್ಯಾನೇಜರ್ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಈ ಹುದ್ದೆಗೆ ಪದವಿ ಮತ್ತು ಸ್ನಾತಕೋತ್ತರ ಪದವಿ (2024, 2025 ಮತ್ತು 2026 ರಲ್ಲಿ ಉತ್ತೀರ್ಣರಾದವರು ಮಾತ್ರ) ವಿದ್ಯಾರ್ಹತೆ ಹೊಂದಿರುವ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಭಾಗವಹಿಸಿ ಉದ್ಯೋಗದ ನೆರವನ್ನು ಪಡೆಯಬಹುದಾಗಿದೆ. ವಯೋಮಿತಿ 21 ರಿಂದ 25 ವರ್ಷಗಳು. ಅಭ್ಯರ್ಥಿಗಳು ವಿದ್ಯಾರ್ಹತೆಯ ಮೂಲ ದಾಖಲಾತಿಗಳು, ಅನುಭವ ಪ್ರಮಾಣಪತ್ರ (ಅನ್ವಯಿಸುವವರಿಗೆ ಮಾತ್ರ) ಹಾಗೂ ಸ್ವ-ವಿವರಗಳ ಪ್ರತಿಗಳೊಂದಿಗೆ ನೇರ ಸಂದರ್ಶನಕ್ಕೆ ಹಾಜರಾಗುವಂತೆ ಪ್ರಭಾರ ಜಿಲ್ಲಾ ಉದ್ಯೋಗಾಧಿಕಾರಿ ಗಣೇಶ್.ಎ.ಆರ್ ಅವರು ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗೆ ಜಾಬ್ ಕೋಆರ್ಡಿನೇಟರ್ 8296020826 ಇವರನ್ನು

# ರೀಲ್ಸ್‌ಗಾಗಿ ರಿಸ್ಕ್; ಲೈಕ್ಸ್‌ಗಾಗಿ ಲೈಫ್!



| ಶಿವಬಸಪ್ಪ ಗು ಜಂಗಾಲಿ

ಇಂದು ಮೊಬೈಲ್ ಫೋನ್ ನಮ್ಮ ಕೈಯಲ್ಲಿರುವ ಸಾಧನ ಮಾತ್ರವಲ್ಲ; ಅದು ನಮ್ಮ ಬದುಕಿನ ಅವಿಭಾಜ್ಯ ಅಂಗವಾಗಿದೆ. ಬೆಳಿಗ್ಗೆ ಕಣ್ಣು ತೆರೆದ ಕ್ಷಣದಿಂದ ರಾತ್ರಿ ಕಣ್ಣು ಮುಚ್ಚುವವರೆಗೂ ಮೊಬೈಲ್ ನಮ್ಮೊಂದಿಗೆ ಇರುತ್ತದೆ. ಸುದ್ದಿ ತಿಳಿಯಲು, ಶಿಕ್ಷಣ ಪಡೆಯಲು, ಸ್ನೇಹಿತರೊಂದಿಗೆ ಸಂಪರ್ಕದಲ್ಲಿರಲು, ವ್ಯಾಪಾರ ಮಾಡಲು ಹಾಗೂ ಮನರಂಜನೆ ಪಡೆಯಲು ಸಾಮಾಜಿಕ ಜಾಲತಾಣಗಳು ನೆರವಾಗುತ್ತಿವೆ. ಅದರಲ್ಲೂ ರೀಲ್ಸ್‌ಗಳು ಜನರ ದೈನಂದಿನ ಬದುಕಿನ ಭಾಗವಾಗಿವೆ. ಪ್ರತಿಭೆಯನ್ನು ಪ್ರದರ್ಶಿಸಲು ಮತ್ತು ಸೃಜನಶೀಲತೆಯನ್ನು ಜನರಿಗೆ ತಲುಪಿಸಲು ರೀಲ್ಸ್ ಒಂದು ಉತ್ತಮ ವೇದಿಕೆಯಾಗಿದೆ. ಆದರೆ ಇದೇ ವೇದಿಕೆ ಇಂದು ಕೆಲವರನ್ನು ಅಪಾಯಕಾರಿ ಸಾಹಸಗಳತ್ತ ಕರೆದೊಯ್ಯುತ್ತಿರುವುದು ಆತಂಕಕಾರಿ ಸಂಗತಿ. ಕೆಲವೇ ಸೆಕೆಂಡುಗಳ ವಿಡಿಯೋ ವೈರಲ್ ಆಗಬೇಕು, ಸಾವಿರಾರು ಲೈಕ್ಸ್ ಬರಬೇಕು ಎಂಬ ಆಸೆಗಾಗಿ ಕೆಲವರು ತಮ್ಮ ಜೀವವನ್ನೇ ಅಪಾಯಕ್ಕೆ ತಳ್ಳುತ್ತಿದ್ದಾರೆ.







ರೀಲ್ಸ್ ಮಾಡುವುದು ತಪ್ಪಲ್ಲ. ಹಾಡು, ನೃತ್ಯ, ಹಾಸ್ಯ, ಅಡುಗೆ, ಕಲೆ, ಪ್ರವಾಸ, ಶಿಕ್ಷಣ ಹಾಗೂ ಸಮಾಜಮುಖಿ ಸಂದೇಶಗಳನ್ನು ರೀಲ್ಸ್ ಮೂಲಕ ಸುಲಭವಾಗಿ ಜನರಿಗೆ ತಲುಪಿಸಬಹುದು. ಹಿಂದೆ ಒಬ್ಬ ವ್ಯಕ್ತಿಯ ಪ್ರತಿಭೆ ಕೆಲವೇ ಜನರಿಗೆ ಮಾತ್ರ ತಿಳಿಯುತ್ತಿತ್ತು. ಇಂದು ಸಾಮಾಜಿಕ ಜಾಲತಾಣಗಳ ಮೂಲಕ ಅದೇ ಪ್ರತಿಭೆ ಕ್ಷಣಾರ್ಧದಲ್ಲಿ ಸಾವಿರಾರು ಜನರನ್ನು ತಲುಪಬಹುದು. ಆದರೆ ಜನಪ್ರಿಯತೆಯ ಈ ಅವಕಾಶದ ಜೊತೆಗೆ ಅಪಾಯಕಾರಿ ಸ್ಪರ್ಧೆಯೂ ಬೆಳೆದಿದೆ. ?ನನ್ನ ವಿಡಿಯೋ ಎಲ್ಲರಿಗಿಂತ ವಿಭಿನ್ನವಾಗಿರಬೇಕು?, ?ನನ್ನ ರೀಲ್ಸ್ ವೈರಲ್ ಆಗಬೇಕು?, ?ನನಗೆ ಹೆಚ್ಚು ಲೈಕ್ಸ್ ಬರಬೇಕು? ಎಂಬ ಹಂಬಲ ಕೆಲವರನ್ನು ಸಾಮಾನ್ಯತೆಯ ಗಡಿ ದಾಟಿಸಿ ಅಪಾಯದ ಅಂಚಿನವರೆಗೆ ಕೊಂಡೊಯ್ಯುತ್ತಿದೆ.

ಎತ್ತರದ ಕಟ್ಟಡಗಳ ಅಂಚಿನಲ್ಲಿ ನಿಂತು ವಿಡಿಯೋ ಮಾಡುವುದು, ವೇಗವಾಗಿ ವಾಹನ ಚಲಾಯಿಸುತ್ತಾ ರೀಲ್ಸ್ ಚಿತ್ರೀಕರಿಸುವುದು, ರೈಲು ಹಳಿಗಳ ಬಳಿ ಅಪಾಯಕಾರಿ ದೃಶ್ಯಗಳನ್ನು ಸೆರೆಹಿಡಿಯುವುದು, ಜಲಪಾತಗಳ ಅಪಾಯಕಾರಿ ಸ್ಥಳಗಳಲ್ಲಿ ಸೆಲ್ಫಿ ತೆಗೆಯುವುದು, ಬೆಟ್ಟ-ಬಂಡೆಗಳ ಅಂಚಿನಲ್ಲಿ ನಿಂತು ಸಾಹಸ ಪ್ರದರ್ಶಿಸುವುದು ಅಥವಾ ರಸ್ತೆ ಸಂಚಾರದ ಮಧ್ಯೆ ವಿಡಿಯೋ ಮಾಡುವುದು ಕೆಲವರಿಗೆ ರೋಚಕ ಕಂಟೆಂಟ್ ಆಗಿರಬಹುದು. ಆದರೆ ಕ್ಯಾಮೆರಾದಲ್ಲಿ ಕಾಣಿಸುವ ಆ ಕೆಲವೇ ಸೆಕೆಂಡುಗಳ ಹಿಂದೆ ಜೀವದ ಅಪಾಯ ಅಡಗಿರುತ್ತದೆ. ಒಂದು ಸಣ್ಣ ತಪ್ಪು, ಒಂದು ಕ್ಷಣದ ಅಜಾಗರೂಕತೆ ಅಥವಾ ನಿರೀಕ್ಷಿಸದ ಅಪಘಾತ ಇಡೀ ಜೀವನವನ್ನೇ ಬದಲಿಸಬಹುದು.

ಒಂದು ಕ್ಷಣ ಯೋಚಿಸೋಣ. ಒಂದು ರೀಲ್ಸ್‌ಗೆ ಸಾವಿರ ಲೈಕ್ಸ್ ಬಂದರೆ ಏನು ಸಿಗುತ್ತದೆ? ನೂರು ಕಾಮೆಂಟ್‌ಗಳು ಬಂದರೆ ಏನು ಬದಲಾಗುತ್ತದೆ? ಇಂದು ವೈರಲ್ ಆಗಿರುವ ವಿಡಿಯೋವನ್ನು ನಾಳೆ ಮತ್ತೊಂದು ವಿಡಿಯೋ ಮೀರಿಸಬಹುದು. ಸಾಮಾಜಿಕ ಜಾಲತಾಣಗಳಲ್ಲಿ ಜನರ ಗಮನ ಬಹಳ ವೇಗವಾಗಿ ಬದಲಾಗುತ್ತದೆ. ಆದರೆ ಒಂದು ಅಪಾಯಕಾರಿ ಸಾಹಸದಲ್ಲಿ ಜೀವ ಕಳೆದುಕೊಂಡರೆ ಆ ಜೀವವನ್ನು ಯಾವ ಲೈಕ್ ಮರಳಿ ಕೊಡುತ್ತದೆ? ಯಾವ ಕಾಮೆಂಟ್ ಮತ್ತೆ ಉಸಿರು ತುಂಬುತ್ತದೆ? ಯಾವ ವೀಕ್ಷಣೆ ಕುಟುಂಬದ ಕಣ್ಣೀರನ್ನು ಒರೆಸುತ್ತದೆ? ಲೈಕ್ ಒಂದು ಸಂಖ್ಯೆ; ಜೀವ ಒಂದು ಅಮೂಲ್ಯ ಸತ್ಯ.

ವಿಶೇಷವಾಗಿ ಯುವಕರು ಈ ವಿಷಯದಲ್ಲಿ ಹೆಚ್ಚಿನ ಎಚ್ಚರಿಕೆ ವಹಿಸಬೇಕು. ಯೌವನ ಎಂದರೆ ಕನಸು ಕಾಣುವ ಕಾಲ, ಹೊಸದನ್ನು ಕಲಿಯುವ ಕಾಲ, ಸಾಧನೆಯ ಶಿಖರ ಏರುವ ಕಾಲ. ಸಾಹಸ ಮಾಡುವ ಉತ್ಸಾಹ ಸಹಜವಾದರೂ ಸಾಹಸ ಮತ್ತು ಅಜಾಗರೂಕತೆ ಒಂದೇ ಅಲ್ಲ. ಅಪಾಯವನ್ನು ಅರಿತು ಸುರಕ್ಷತೆಯೊಂದಿಗೆ ಸಾಧಿಸುವುದು ನಿಜವಾದ ಸಾಹಸ. ಆದರೆ ಜನರ ಗಮನ ಸೆಳೆಯಲು ತಿಳಿದ ಅಪಾಯವನ್ನೇ ಸ್ವೀಕರಿಸುವುದು ಅಜಾಗರೂಕತೆ. ?ಏನೂ ಆಗುವುದಿಲ್ಲ? ಎಂಬ ಅತಿಯಾದ ಆತ್ಮವಿಶ್ವಾಸವೇ ಕೆಲವೊಮ್ಮೆ ದೊಡ್ಡ ಅನಾಹುತಕ್ಕೆ ಕಾರಣವಾಗಬಹುದು.

ಸ್ನೇಹಿತರ ಒತ್ತಡವೂ ಈ ಪ್ರವೃತ್ತಿಗೆ ಕಾರಣವಾಗುತ್ತಿದೆ. ?ಮಾಡು, ವೈರಲ್ ಆಗುತ್ತೆ?, ?ಏನೂ ಆಗಲ್ಲ?, ?ಎಲ್ಲರೂ ಮಾಡ್ತಾರೆ? ಎಂಬ ಮಾತುಗಳು ಕ್ಷಣಿಕವಾಗಿ ಧೈರ್ಯ ತುಂಬಬಹುದು. ಆದರೆ ಅಪಘಾತ ಸಂಭವಿಸಿದಾಗ ಆ ಮಾತುಗಳು ಯಾವುದೇ ಪ್ರಯೋಜನಕ್ಕೆ ಬರುವುದಿಲ್ಲ. ಸ್ನೇಹಿತನನ್ನು ಅಪಾಯದತ್ತ ತಳ್ಳುವವನಿಗಿಂತ, ?ಬೇಡ ಗೆಳೆಯ, ನಿನ್ನ ಜೀವ ಮುಖ್ಯ? ಎಂದು ತಡೆಯುವವನೇ ನಿಜವಾದ ಸ್ನೇಹಿತ. ಸ್ನೇಹ ಎಂದರೆ ಕೇವಲ ನಗುವನ್ನು ಹಂಚಿಕೊಳ್ಳುವುದಲ್ಲ; ಅಪಾಯದ ಸಂದರ್ಭದಲ್ಲಿ ಒಬ್ಬರನ್ನೊಬ್ಬರು ಕಾಪಾಡುವುದೂ ಹೌದು.

ಪೋಷಕರ ಪಾತ್ರವೂ ಇಲ್ಲಿ ಬಹಳ ಮುಖ್ಯ. ಮಕ್ಕಳ ಕೈಗೆ ಮೊಬೈಲ್ ಕೊಡುವುದಷ್ಟೇ ಅಲ್ಲ, ಅವರು ಅದನ್ನು ಹೇಗೆ ಬಳಸುತ್ತಿದ್ದಾರೆ ಎಂಬುದರ ಬಗ್ಗೆ ಅರಿವು ಮೂಡಿಸಬೇಕು. ಮಕ್ಕಳೊಂದಿಗೆ ಸ್ನೇಹಪೂರ್ಣವಾಗಿ ಮಾತನಾಡಿ ಸಾಮಾಜಿಕ ಜಾಲತಾಣಗಳ ಒಳಿತು-ಕೆಡುಕುಗಳನ್ನು ತಿಳಿಸಬೇಕು. ಶಾಲೆ ಮತ್ತು ಕಾಲೇಜುಗಳಲ್ಲಿಯೂ ಡಿಜಿಟಲ್ ಜವಾಬ್ದಾರಿ ಹಾಗೂ ಸಾಮಾಜಿಕ ಜಾಲತಾಣಗಳ ಸುರಕ್ಷಿತ ಬಳಕೆಯ ಕುರಿತು ಜಾಗೃತಿ ಮೂಡಿಸುವ ಅಗತ್ಯವಿದೆ. ಯುವಕರಿಗೆ ಕ್ರೀಡೆ, ಕಲೆ, ಸಾಹಿತ್ಯ, ವಿಜ್ಞಾನ ಮತ್ತು ಸೃಜನಶೀಲ ಚಟುವಟಿಕೆಗಳಿಗೆ ಹೆಚ್ಚಿನ ಅವಕಾಶ ನೀಡಿದರೆ ಅವರ ಪ್ರತಿಭೆ ಅಪಾಯದ ಮೂಲಕವಲ್ಲ, ಸಾಧನೆಯ ಮೂಲಕ ಗುರುತಿಸಿಕೊಳ್ಳಲು ಸಾಧ್ಯವಾಗುತ್ತದೆ.

ಸಾಮಾಜಿಕ ಜಾಲತಾಣಗಳಲ್ಲಿ ಜನಪ್ರಿಯರಾಗುವುದು ತಪ್ಪಲ್ಲ. ಆದರೆ ಜನಪ್ರಿಯತೆಯ ಬೆಲೆ ನಮ್ಮ ಜೀವವಾಗಬಾರದು. ಪ್ರತಿಭೆಯಿಂದ ವೈರಲ್ ಆಗಿ; ಅಪಾಯದಿಂದ ಅಲ್ಲ. ಸೃಜನಶೀಲತೆಯಿಂದ ಗಮನ ಸೆಳೆದು; ಅಜಾಗರೂಕತೆಯಿಂದ ಅಲ್ಲ. ನಿಮ್ಮ ವಿಡಿಯೋ ಜನರನ್ನು ನಗಿಸಲಿ, ಯೋಚಿಸಲಿ, ಪ್ರೇರೇಪಿಸಲಿ; ಆದರೆ ನಿಮ್ಮ ಜೀವಕ್ಕೆ ಅಪಾಯ ತರಬಾರದು.

ನಮ್ಮ ಒಂದು ರೀಲ್ಸ್‌ಗೆ ಬಂದ ಸಾವಿರ ಲೈಕ್ಸ್‌ಗಿಂತ, ನಾವು ಸುರಕ್ಷಿತವಾಗಿ ಮನೆಗೆ ಮರಳುವುದನ್ನು ಕಾಯುವ ತಾಯಿಯ ಪ್ರೀತಿ ದೊಡ್ಡದು. ಲಕ್ಷಾಂತರ ವೀಕ್ಷಣೆಗಳಿಗಿಂತ, ನಮ್ಮನ್ನು ಪ್ರತಿದಿನ ಕಾಯುವ ಕುಟುಂಬದ ಒಂದು ನಗು ಅಮೂಲ್ಯ. ಲೈಕ್ಸ್ ಕಡಿಮೆಯಾಗಬಹುದು, ಫಾಲೋವರ್ಸ್ ಕಡಿಮೆಯಾಗಬಹುದು, ವಿಡಿಯೋ ವೈರಲ್ ಆಗದೇ ಇರಬಹುದು. ಆದರೆ ಜೀವ ಉಳಿದಿದ್ದರೆ ನಾಳೆ ಮತ್ತೊಂದು ರೀಲ್ಸ್ ಮಾಡಬಹುದು; ಮತ್ತೊಂದು ಅವಕಾಶವನ್ನು ಪಡೆಯಬಹುದು; ಮತ್ತೊಂದು ಕನಸನ್ನು ನನಸು ಮಾಡಬಹುದು.

ಜೀವನವೇ ಒಂದು ದೊಡ್ಡ ಕಥೆ. ಅದರಲ್ಲಿ ಇನ್ನೂ ಅನೇಕ ಅಧ್ಯಾಯಗಳನ್ನು ಬರೆಯಬೇಕಿದೆ. ಇನ್ನೂ ಅನೇಕ ಕನಸುಗಳನ್ನು ನನಸು ಮಾಡಬೇಕಿದೆ. ಇನ್ನೂ ಅನೇಕ ಬೆಳಗ್ಗುಗಳನ್ನು ನೋಡಬೇಕಿದೆ. ಹಾಗಿರುವಾಗ ಕೆಲವೇ ಸೆಕೆಂಡುಗಳ ರೀಲ್ಸ್‌ಗಾಗಿ ಇಡೀ ಬದುಕನ್ನೇ ಪಣಕ್ಕಿಡುವುದು ಏಕೆ?

ರೀಲ್ಸ್ ಮಾಡಿ, ಆದರೆ ಜವಾಬ್ದಾರಿಯಿಂದ.

ಸಾಹಸ ಮಾಡಿ, ಆದರೆ ಸುರಕ್ಷತೆಯೊಂದಿಗೆ.

ಜನಪ್ರಿಯರಾಗಿ?ಆದರೆ ಜೀವವನ್ನು ಕಳೆದುಕೊಂಡು ಅಲ್ಲ. ಒಂದು ರೀಲ್ಸ್ ಕೆಲ ಸೆಕೆಂಡುಗಳದ್ದು. ಒಂದು ಲೈಕ್ ಕೆಲ ಕ್ಷಣಗಳದ್ದು. ಒಂದು ವೈರಲ್ ವಿಡಿಯೋ ಕೆಲ ದಿನಗಳದ್ದು. ಆದರೆ "ಒಂದು ಜೀವ?ಒಂದೇ ಒಂದು".

# ಶ್ರೀ ಕೃಷ್ಣ ಜನ್ಮಾಷ್ಟಮಿಯ ಮಹತ್ವ

ಕೃಷ್ಣಾಯ ವಾಸುದೇವಾಯ
ಹರಯೇ ಪರಮಾತ್ಮನೆ।
ಪ್ರಣತಃ ಕ್ಲೇಶನಾಶಾಯ
ಗೋವಿಂದಾಯ ನಮೋ ನಮಃ॥



| ಗಿರಿಜಾ.ಎಸ್. ದೇಶಪಾಂಡೆ. ಬೆಂಗಳೂರು.

ಕೃಷ್ಣಜನ್ಮಾಷ್ಟಮಿ ಹಬ್ಬವು ಭಗವಾನ್ ಶ್ರೀಕೃಷ್ಣನ ಜನ್ಮವನ್ನು ಸ್ಮರಿಸಿ ಧರ್ಮಸ್ಥಾಪನೆ ಮತ್ತು ಒಳ್ಳೆಯತನದ ವಿಜಯ ಆಚರಿಸುವ ಪ್ರಮುಖ ಅಧ್ಯಾತ್ಮಿಕ ದಿನವಾಗಿದೆ.

**ಅಧ್ಯಾತ್ಮಿಕ ಅರ್ಥ:** ಕಂಸನು ಅಹಂಕಾರದ ಪ್ರತೀಕವಾದರೆ ಶ್ರೀಕೃಷ್ಣನ ಜನನವು ನಮ್ಮ ಅಂತರಂಗ; ಆನಂದದ ಜಾಗೃತಿಯನ್ನು ಸೂಚಿಸುತ್ತದೆ.

ಕೃಷ್ಣ ಹುಟ್ಟಿದ ದಿನವನ್ನು ಕೃಷ್ಣ ಜನ್ಮಾಷ್ಟಮಿ ಅಥವಾ ಗೋಕುಲಾಷ್ಟಮಿ ಎಂದು ವೈಭವದಿಂದ ಆಚರಿಸಲಾಗುತ್ತದೆ.ಶ್ರೀಕೃಷ್ಣನ ಜನ್ಮದಿನವನ್ನು ಚಾಂದ್ರಮಾನ ರೀತಿಯಲ್ಲಿ ಶ್ರಾವಣ ಕೃಷ್ಣ ಅಷ್ಟಮಿಯಂದು ಸೌರಮಾನ ರೀತಿಯಲ್ಲಿ ಸಿಂಹಮಾಸದ ರೋಹಿಣಿ ನಕ್ಷತ್ರದಂದು ಆಚರಿಸುತ್ತಾರೆ.ಕೃಷ್ಣ ಜನ್ಮಾಷ್ಟಮಿಯು ವಿಷ್ಣುವಿನ ಎಂಟನೇಯ ಅವತಾರವಾದ ಶ್ರೀಕೃಷ್ಣನ ಜನ್ಮವನ್ನು ಸೂಚಿಸುತ್ತದೆ.ಈ ಹಬ್ಬವನ್ನು ಬಹಳ ಭಕ್ತಿ ಮತ್ತು ಸಂತೋಷದಿಂದ ಆಚರಿಸಲಾಗುತ್ತದೆ.ಭಕ್ತರು ಉಪವಾಸ ಮಾಡಿ ಭಕ್ತಿಗೀತೆಗಳನ್ನು ಹಾಡಿ ಮಧ್ಯರಾತ್ರಿಯ ಆಚರಣೆಯಲ್ಲಿ ಭಾಗವಹಿಸುತ್ತಾರೆ.ಮಧ್ಯರಾತ್ರಿಯಲ್ಲಿ ಶ್ರೀಕೃಷ್ಣನು ಜನಿಸಿದನೆಂದು ನಂಬಲಾಗಿದೆ.ಕೃಷ್ಣನ ದೇವಾಲಯಗಳಲ್ಲಿ ಸುಂದರವಾಗಿ ಅಲಂಕರಿಸಿ ಅಂದಿನ ದಿನ ವಿಶೇಷ ಪ್ರಾರ್ಥನೆಯನ್ನು ಸಲ್ಲಿಸಲಾಗುತ್ತದೆ. ಜನಪ್ರೀಯ ಪದ್ಧತಿಗಳಲ್ಲಿ ಒಂದಾದ ದಹೀ ಹಂಡಿ ಕಾರ್ಯಕ್ರಮವಾಗಿರುತ್ತದೆ.ಇದನ್ನು ಆಚರಿಸುವ ತಂಡಗಳು ನೆಲದ ಮೇಲಿನಿಂದ ಎತ್ತರಕ್ಕೆ ಕಟ್ಟಿದ ಮೊಸರಿನ ಮಡಕೆ ಒಡೆಯಲು ಪ್ರಯತ್ನಿಸುತ್ತವೆ.ಶ್ರೀಕೃಷ್ಣ ಜನ್ಮಾಷ್ಟಮಿಯು ದುಷ್ಟತನ ಮತ್ತು ದೈವಿಕ ಪ್ರೀತಿಯ ಮೇಲೆ ಒಳ್ಳೆಯತನದ ವಿಜಯವನ್ನು ಸಂಕೇತಿಸುತ್ತದೆ.

**ಮಹತ್ವ:** ಹಿಂದೂ ಸಂಪ್ರದಾಯದಲ್ಲಿ ಕೃಷ್ಣಜನ್ಮಾಷ್ಟಮಿಯು ಅತ್ಯಂತ ಪ್ರಮುಖ ಸ್ಥಾನ ಹೊಂದಿದ್ದು ಕೆಟ್ಟದ್ದರ ವಿರುದ್ಧ ಒಳ್ಳೆಯ ವಿಜಯವನ್ನು ,ಕತ್ತಲೆಯ

ಮೇಲೆ ಬೆಳಕು ,ಅಜ್ಞಾನದ ಮೇಲೆ ಜ್ಞಾನದ ವಿಜಯವನ್ನುಸೂಚಿಸುತ್ತದೆ.

ಶ್ರೀಕೃಷ್ಣನ ಜನನವು ರಾಕ್ಷಸ ರಾಜ ಕಂಸನ ದಬ್ಬಾಳಿಕೆ ಕೊನೆಗೊಳಿಸಲು ಭವಿಷ್ಯವೆಂದು ಹೇಳಬಹುದು.ಶ್ರೀ ಕೃಷ್ಣನು ಬೆಳೆದಂತೆ ದುಷ್ಟತನ ನಿರ್ಮೂಲನೆ ಮಾಡುವಲ್ಲಿ ಧರ್ಮವನ್ನು ಸ್ಥಾಪಿಸುವದರಲ್ಲಿ ಅತ್ಯಗತ್ಯ ಪಾತ್ರ ವಹಿಸಿದನು.ಈ ಹಬ್ಬವು ಭಗವದ್ಗೀತೆಯಲ್ಲಿಯ ಬೋಧನೆಯನ್ನು ನೆನಪಿಸುತ್ತದೆ.ಭಗವದ್ಗೀತೆಯು ಅರ್ಜುನ ಮತ್ತು ಕೃಷ್ಣನ ನಡುವಿನ ಪವಿತ್ರ ಸಂಭಾಷಣೆಯಾಗಿದೆ.ಆಳವಾದ ಅಧ್ಯಾತ್ಮಿಕ ,ತಾತ್ವಿಕ ಮತ್ತು ನೈತಿಕ ಒಳನೋಟವನ್ನು ಒಳಗೊಂಡಿದೆ.ಈ ಜನ್ಮಾಷ್ಟಮಿಯು ಕೃಷ್ಣನ ಜನನವನ್ನು ಗುರುತಿಸುವದಲ್ಲದೇ ಗುರು,ರಕ್ಷಕ,ಮರ್ತ್ಯಲೋಕಕ್ಕೆ ಮಾರ್ಗದರ್ಶನ ನೀಡುವ ದೈವಿಕ ಅಸ್ತಿತ್ವವಾಗಿ ಅವನ ಪಾತ್ರವನ್ನು ಆಚರಿಸಲಾಗುತ್ತದೆ.



**ಹಿನ್ನೆಲೆ:** ಕೃಷ್ಣ ಜನ್ಮಾಷ್ಟಮಿಯ ಮಹತ್ವವು ಪ್ರಾಚೀನ ಭಾರತಕ್ಕೆ ಸೇರಿದುದಾಗಿದೆ.ಪುರಾಣ ಕಥೆಗಳ ಪ್ರಕಾರ ಮಥುರಾದ ಜೈಲು ಕೋಣೆಯಲ್ಲಿ ಕೃಷ್ಣನ ದೈವಿಕ ಜನನದ ಬಗ್ಗೆ ಹೇಳಲಾಗುತ್ತದೆ.ದೇವಕಿ ಮತ್ತು ವಾಸುದೇವರಿಗೆ ಜನಿಸಿದ ಕೃಷ್ಣನ ಭೂಮಿಯ ಮೇಲಿನ ಆಗಮನವು ಕಂಸನಿಗೆ ವಿನಾಶ ಆಗುತ್ತದೆ ಎನ್ನುವ ಮುನ್ಸೂಚನೆ ಬರಲಾಗಿತ್ತು.ಕಂಸನು ತನ್ನ ಮೇಲೆ ನಡೆಸುವ ಪ್ರಯತ್ನಗಳಿಂದ ಪುಟ್ಟ ಕೃಷ್ಣನನ್ನು ರಕ್ಷಿಸಲು ರಹಸ್ಯವಾಗಿ ಗೋಕುಲಕ್ಕೆ ಕರೆದೊಯ್ಯಲಾಯಿತು.ಯಶೋದಾ ಮತ್ತು ನಂದರಿಂದ ಬೆಳೆಸಲಾಯಿತು.ಶ್ರೀಕೃಷ್ಣನು ಜೀವನದುದ್ದಕ್ಕೂ ದೈವಿಕ ಚಿಹ್ನೆ ನೀಡಿದ್ದಲ್ಲದೇ ಪವಾಡ ಪುರುಷನಾಗಿ ಗೋಚರಿಸಿದನು.ಕೃಷ್ಣನ ಬಾಲ್ಯದ ಚೇಷ್ಟೆಗಳು,ರಾಧೆಯ ಮೇಲಿನ ಅವನ ಪ್ರೀತಿ ,ದೈವಿಕ ಲೀಲೆಗಳ ಕಥೆಗಳನ್ನು ಪೀಳಿಗೆಯಿಂದ ಪೀಳಿಗೆಗೆ ಹೇಳಲಾಗುತ್ತಿದೆ.ಇದು ನಮ್ಮ ದೇಶದ ಅಧ್ಯಾತ್ಮಿಕವನ್ನು ಎತ್ತಿ ತೋರಿಸುತ್ತದೆ.

ಕೃಷ್ಣ ಹುಟ್ಟಿದ ದಿನದಂದು ಮನೆ ಮತ್ತು ದೇವಾಲಯಗಳನ್ನು ಸುಂದರವಾಗಿ ಅಲಂಕರಿಸಲಾಗುತ್ತದೆ. ಕೃಷ್ಣನ ಪುಟ್ಟ ಹೆಜ್ಜೆಗಳನ್ನು ರಂಗೋಲಿಯಲ್ಲಿ ಬರೆದು ಸಂಭ್ರಮಿಸಲಾಗುತ್ತದೆ.ಶ್ರೀಕೃಷ್ಣನ ವಿಗ್ರಹವನ್ನು ವಿಧವಿಧವಾಗಿ ಅಲಂಕರಿಸಿ ಬಗೆಬಗೆಯ ತಿಂಡಿ ಮಾಡಿ ಬಾಲ ಕೃಷ್ಣನನ್ನು ಪೂಜಿಸಲಾಗುತ್ತದೆ.ನಾವೂ ಶ್ರೀಕೃಷ್ಣನ ಪೂಜೆ ಭಕ್ತಿಯಿಂದ ಪೂಜಿಸಿ ಭಗವಂತನ ಆಶೀರ್ವಾದ ಪಡೆಯೋಣ.ಸರ್ವೇ ಜನ ಸುಖಿನೋ ಭವಂತು.ನಾಡಿನ ಜನತೆಗೆ ಶ್ರೀಕೃಷ್ಣ ಜನ್ಮಾಷ್ಟಮಿಯ ಶುಭಾಶಯಗಳು.



# ಗ್ಯಾರಂಟಿ ಯೋಜನೆಗಳ ಮೂರು ವರ್ಷದ ಸಾಧನೆ

**ಮಡಿಕೇರಿ:** ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಗ್ಯಾರಂಟಿ ಯೋಜನೆಗಳಾದ ಗೃಹಲಕ್ಷ್ಮಿ ಮತ್ತು ಶಕ್ತಿ ಯೋಜನೆಗಳು ಮಹಿಳಾ ಸಬಲೀಕರಣದ ದಿಕ್ಕಿನಲ್ಲಿ ಮಹತ್ವದ ಬದಲಾವಣೆಗೆ ಕಾರಣವಾಗಿದ್ದು, ಯಶಸ್ವಿಯಾಗಿ ಮೂರು ವರ್ಷಗಳ ಪಯಣವನ್ನು ಪೂರೈಸಿವೆ. ಆರ್ಥಿಕ ಸ್ವಾವಲಂಬನೆ ಹಾಗೂ ಸುರಕ್ಷಿತ ಮತ್ತು ಉಚಿತ ಸಂಚಾರಕ್ಕೆ ಅವಕಾಶ ಕಲ್ಪಿಸಿರುವ ಈ ಯೋಜನೆಗಳು ಮಹಿಳೆಯರ ಬದುಕಿನಲ್ಲಿ ಆಶಾಕಿರಣವಾಗಿವೆ.





**ಗೃಹಲಕ್ಷ್ಮಿ ಯೋಜನೆ:** ಕುಟುಂಬದ ಯಜಮಾನಿಯಾಗಿರುವ ಮಹಿಳೆಯರಿಗೆ ಆರ್ಥಿಕ ನೆರವು ನೀಡುವ ಉದ್ದೇಶದಿಂದ ಜಾರಿಗೊಳಿಸಲಾದ ಗೃಹಲಕ್ಷ್ಮಿ ಯೋಜನೆಯು ರಾಜ್ಯದ ಮಹಿಳೆಯರ ಸ್ವಾವಲಂಬನೆಗೆ ಉತ್ತೇಜನ ನೀಡುತ್ತಿದೆ. ಯೋಜನೆಯಿಂದ ದೊರೆಯುತ್ತಿರುವ ಆರ್ಥಿಕ ನೆರವನ್ನು ಫಲಾನುಭವಿ ಮಹಿಳೆಯರು ಮಕ್ಕಳ ಶಿಕ್ಷಣ, ಆರೋಗ್ಯ, ದಿನನಿತ್ಯದ ಕುಟುಂಬ ನಿರ್ವಹಣೆ ಸೇರಿದಂತೆ ವಿವಿಧ ಅಗತ್ಯ ವೆಚ್ಚಗಳಿಗೆ ಬಳಸಿಕೊಳ್ಳುತ್ತಿದ್ದಾರೆ.

ಗೃಹಲಕ್ಷ್ಮಿ ಯೋಜನೆಯು ಕೊಡಗು ಜಿಲ್ಲೆಯಲ್ಲಿಯೂ ಉತ್ತಮ ಸ್ಪಂದನೆ ಪಡೆದಿದ್ದು, ಜಿಲ್ಲೆಯ ಐದು ತಾಲೂಕುಗಳಲ್ಲಿ ಒಟ್ಟು 1,20,872 ಮಹಿಳೆಯರು ಯೋಜನೆಗೆ ಹೆಸರು ನೋಂದಾಯಿಸಿಕೊಂಡಿದ್ದು, ಮಡಿಕೇರಿ 31,549, ಸೋಮವಾರಪೇಟೆ 25,286, ಕುಶಾಲನಗರ 23,179, ವಿರಾಜಪೇಟೆ 21,691 ಮತ್ತು ಪೊನ್ನಂಪೇಟೆ ತಾಲ್ಲೂಕಿನಲ್ಲಿ 19,167 ಫಲಾನುಭವಿಗಳ ಹೆಸರು ನೋಂದಾಯಿಸಿಕೊಂಡಿದ್ದಾರೆ.

ಯೋಜನೆಯಿಂದ ಮಹಿಳೆಯರ ಆರ್ಥಿಕ ಭದ್ರತೆ ಹೆಚ್ಚುವುದರ ಜೊತೆಗೆ ಕುಟುಂಬದಲ್ಲಿನ ಅವರ ಸ್ಥಾನಮಾನ ಮತ್ತು ಆತ್ಮವಿಶ್ವಾಸವೂ ವೃದ್ಧಿಯಾಗಿದೆ ಎಂದು ಫಲಾನುಭವಿಗಳು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಶಕ್ತಿ ಯೋಜನೆ : ಮಹಿಳೆಯರ ಸ್ವಾವಲಂಬನೆ ಮತ್ತು ಸುರಕ್ಷಿತ ಸಂಚಾರಕ್ಕೆ ಉತ್ತೇಜನ ನೀಡುವ ಉದ್ದೇಶದಿಂದ ಜಾರಿಗೊಳಿಸಲಾದ ಶಕ್ತಿ ಯೋಜನೆ 2023 ರ ಜೂನ್ 11 ರಂದು ಆರಂಭಗೊಂಡಿದ್ದು, ಮೂರು ವ?ೱಗಳ ಯಶಸ್ವಿ ಪಯಣ ಮುಂದುವರಿಸಿದೆ.

ಸರ್ಕಾರಿ ಸಾರಿಗೆ ಬಸ್‌ಗಳಲ್ಲಿ ಮಹಿಳೆಯರಿಗೆ ಉಚಿತ ಪ್ರಯಾಣದ ಸೌಲಭ್ಯ ಕಲ್ಪಿಸಿರುವ ಈ ಯೋಜನೆಯಿಂದ ಉದ್ಯೋಗ, ಶಿಕ್ಷಣ, ವ್ಯಾಪಾರ, ಆರೋಗ್ಯ ಸೇವೆ ಸೇರಿದಂತೆ ವಿವಿಧ ಅಗತ್ಯಗಳಿಗಾಗಿ ಸಂಚರಿಸುವ ಮಹಿಳೆಯರಿಗೆ ಹೆಚ್ಚಿನ ಅನುಕೂಲವಾಗಿದೆ.

ಶಕ್ತಿ ಯೋಜನೆಯಡಿ ಇದುವರೆಗೆ ಜಿಲ್ಲೆಯಲ್ಲಿ ಮಹಿಳೆಯರು ಹಾಗೂ ಹೆಣ್ಣು ಮಕ್ಕಳು ಮತ್ತು ಶಾಲಾ-ಕಾಲೇಜು ವಿದ್ಯಾರ್ಥಿನಿಯರು ಪ್ರಯಾಣಿಸಿ ಯೋಜನೆಯ ಪ್ರಯೋಜನ ಪಡೆದುಕೊಂಡಿದ್ದಾರೆ. ಪ್ರತಿದಿನ ಸರಾಸರಿ 16,675 ಪ್ರಯಾಣಿಕರು ಸಂಚರಿಸುತ್ತಿದ್ದಾರೆ.

ಗೃಹಲಕ್ಷ್ಮಿ ಯೋಜನೆಯ ಮೂಲಕ ಮಹಿಳೆಯರ ಆರ್ಥಿಕ ಸ್ವಾವಲಂಬನೆಗೆ ನೆರವು ದೊರೆತಿದ್ದರೆ, ಶಕ್ತಿ ಯೋಜನೆಯ ಮೂಲಕ ಉಚಿತ ಮತ್ತು ಸುಲಭ ಸಂಚಾರದ ಅವಕಾಶ ಸಿಕ್ಕಿದೆ. ಈ ಎರಡೂ ಯೋಜನೆಗಳು ಮಹಿಳೆಯರ ಬದುಕಿನಲ್ಲಿ ಸಾಮಾಜಿಕ ಹಾಗೂ ಆರ್ಥಿಕ ಬದಲಾವಣೆಗೆ ಕಾರಣವಾಗಿವೆ.

ಮೂರುವರ್ಷಗಳಯಶಸ್ವಿಪಯಣವನ್ನು ಸಂಭ್ರಮಿಸುತ್ತಿರುವ ಫಲಾನುಭವಿಗಳು, ಗ್ಯಾರಂಟಿ ಯೋಜನೆಗಳು ತಮ್ಮ ಬದುಕಿನ ಹೊರೆಯನ್ನು ತಗ್ಗಿಸಿ, ಆತ್ಮವಿಶ್ವಾಸದಿಂದ ಬದುಕಲು ನೆರವಾಗಿವೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

ಒಟ್ಟಾರೆ, ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ಮೂರು ವ?ೱದ ಪಯಣವು ಕೇವಲ ಯೋಜನೆಗಳ ಅನು?ಾನಕ್ಕೆ ಸೀಮಿತವಾಗದೆ, ಮಹಿಳಾ ಸಬಲೀಕರಣ, ಆರ್ಥಿಕ ಭದ್ರತೆ ಮತ್ತು ಸ್ವತಂತ್ರ ಬದುಕಿಗೆ ಹೊಸ ಆಯಾಮ ನೀಡಿದ ಮಹತ್ವದ ಸಾಧನೆಯಾಗಿ ಗುರುತಿಸಿಕೊಂಡಿದೆ.

# ಅಶಿಸ್ತಿನ ಬದುಕು ಅಕಾಲ ಮರಣಕ್ಕೆ ಆಮಂತ್ರಣ



ಅವ್ಯವಸ್ಥಿತ ಜೀವನಶೈಲಿ ಮೃತ್ಯುವಿಗೆ ತೆರೆದ ಬಾಗಿಲು. ಬ್ರಾಹ್ಮಿ ಮುಹೂರ್ತದ ನಿದ್ರೆಯನ್ನು ಮೊಬೈಲ್ ಬೆಳಕಿಗೆ ಅರ್ಪಿಸಿದಾಗ ಮಿದುಳಿನ ಜೈವಿಕ ಗಡಿಯಾರದ ಲಯ ತಪ್ಪುತ್ತದೆ. ನಿದ್ರಾ ಕಾರಕ ಮೆಲಟೋನಿನ್ ಕುಂಠಿತವಾಗಿ ಒತ್ತಡದ ಕಾರ್ಟಿಸಾಲ್ ಹೆಚ್ಚುತ್ತದೆ. ಅನಿಯಮಿತ ಆಹಾರ ಮೇದೋಜೀರಕ ಗ್ರಂಥಿಯನ್ನು ಬಳಲಿಸಿ ಇನ್ಸುಲಿನ್ ಪ್ರತಿರೋಧಕ್ಕೆ ನಾಂದಿ ಹಾಡುತ್ತದೆ. ಪ್ರತಿ ಅಶಿಸ್ತೂ ಜೀವಕೋಶದಲ್ಲಿ ಮುಕ್ತಮೂಲಕಗಳ ದಾಳಿ ಹೆಚ್ಚಿಸಿ ಅಕಾಲಿಕ ವೃದ್ಧಾಪ್ಯ ತರುತ್ತದೆ.

ವ್ಯಕ್ತಿಯ ಅಶಿಸ್ತು ಕುಟುಂಬಕ್ಕೆ, ಕುಟುಂಬದ ಅಶಿಸ್ತು ಸಮಾಜಕ್ಕೆ ಸಾಂಕ್ರಾಮಿಕವಾಗುತ್ತದೆ. ಸಂಚಾರ ನಿಯಮ ಉಲ್ಲಂಘನೆ, ಸರತಿ ಸಾಲಿನಲ್ಲಿ ನುಗ್ಗುವಿಕೆ, ಉದ್ಯಾನದಲ್ಲಿ ತ್ಯಾಜ್ಯ ಎಸೆಯುವಿಕೆ ಸಮಷ್ಟಿಯ ಆರೋಗ್ಯದ ಮೇಲೆ ಕರಿನೆರಳು ಬೀರುತ್ತದೆ. ಸಮಯ ಪಾಲಿಸದ ವಿದ್ಯಾರ್ಥಿ, ಅಧಿಕಾರಿ, ವಚನಭ್ರಷ್ಟ ನಾಯಕನಿಂದ ವಿಶ್ವಾಸದ ಸೌಧ ಕುಸಿಯುತ್ತದೆ. ಮನೆಯ ಅಡುಗೆ ಸಮಯ ವ್ಯತ್ಯಯವಾದರೆ ಇಡೀ ಕುಟುಂಬದ ಜೀರ್ಣಕ್ರಿಯೆ ಹದಗೆಡುತ್ತದೆ.

ಪರಿಹಾರ ಸರಳ - ಸೂರ್ಯೋದಯಕ್ಕೂ ಮುನ್ನ ಎದ್ದು ಪ್ರಾಣಾಯಾಮ ಮಾಡಿ, ಶುಂಠಿ-ಜೀರಿಗೆ ಕಷಾಯ ಸೇವಿಸಿ. ತ್ರಿಸಂಧ್ಯಾ ಆಹಾರ ಪಾಲಿಸಿ, ಬೆಳಗ್ಗೆ 8ಕ್ಕೆ ಸಿರಿಧಾನ್ಯ, ಮಧ್ಯಾಹ್ನ 1ಕ್ಕೆ ಸಂತುಲಿತ ಊಟ, ರಾತ್ರಿ 8ಕ್ಕೆ ಲಘು ಆಹಾರ. ರಾತ್ರಿ 9ಕ್ಕೆ ಮೊಬೈಲ್ ಆರಿಸಿ ಡಿಜಿಟಲ್ ಉಪವಾಸ ಮಾಡಿ.

ವಾರಾಂತ್ಯದಲ್ಲಿ ಮನೆಯ ವ್ಯವಸ್ಥೆ, ಹಣಕಾಸು, ಔಷಧಿ ಸಂಗ್ರಹದ ಲೆಕ್ಕಪರಿಶೋಧನೆ ನಡೆಸಿ ಮುಂದಿನ ವಾರದ ಯೋಜನೆ ಬರೆಯಿರಿ. ಕ್ಷಣಕ್ಷಣವೂ ಕ್ರಮಬದ್ಧವಾದರೆ ದೇಹ-ಮನಸ್ಸು ಒಂದೇ ಲಯದಲ್ಲಿ ನುಡಿಯುತ್ತವೆ. ಶಿಸ್ತಿನ ದೀಪ ಬೆಳಗಿದ ಮನೆಗೆ ಸಾವಿನ ಕತ್ತಲು ಹೆದರುತ್ತದೆ. ಶಿಸ್ತೇ ದೀರ್ಘಾಯುಷ್ಯದ ರಾಜಮಾರ್ಗ.



ಅಂಕಣ-11

ಸಾವು ಸಂಕಟಪಡುವ ಸಂಗತಿಗಳು..!

|ಡಾ.ಸುಧಾಕರ.ಜಿ.ಲಕ್ಕವಳ್ಳಿ

# ಸಾಹಿತಿ,ಪರಿಸರ ಚಿಂತಕ ಭೇರ್ಯ ರಾಮಕುಮಾರ್‌ಗೆ ಪೂರ್ಣಚಂದ್ರ ತೇಜಸ್ವಿ ಪ್ರಶಸ್ತಿ



ಮೈಸೂರು ಜಿಲ್ಲೆಯ ಹಿರಿಯ ಸಾಹಿತಿ,ಪರಿಸರ ಚಿಂತಕ, ದೇಹದಾನ ಹಾಗೂ ನೇತ್ರದಾನಕ್ಕೆ ಒಪ್ಪಿಗೆ ಪತ್ರ ನೀಡಿರುವ ಸಮಾಜಸೇವಕ ಭೇರ್ಯ ರಾಮಕುಮಾರ ಅವರು ರಾಜ್ಯಮಟ್ಟದ ಪೂರ್ಣಚಂದ್ರ ತೇಜಸ್ವಿ ಪ್ರಶಸ್ತಿಗೆ ಆಯ್ಕೆ ಆಗಿದ್ದಾರೆ ಎಂದು ಪೂರ್ಣಚಂದ್ರ ತೇಜಸ್ವಿ ಪ್ರತಿಷ್ಠಾನದ ಅಧ್ಯಕ್ಷರಾದ ಕೃಷ್ಣಯ್ಯ ತಿಳಿಸಿದ್ದಾರೆ.

ಕಳೆದ 50 ವರ್ಷಗಳಿಂದ 357 ರಾಜ್ಯಮಟ್ಟದ ಸಾಹಿತ್ಯ, ಕಾರ್ಯಕ್ರಮಗಳ ಸಂಘಟನೆ, ಶಾಲಾ ಕಾಲೇಜುಗಳು ಸೇರಿದಂತೆ ವಿವಿಧ ಕಾರ್ಯಕ್ರಮಗಳಲ್ಲಿ ಸುಮಾರು1000 ಪರಿಸರ ಉಪನ್ಯಾಸಗಳು ಹಾಗೂ ಎಲ್ಲ ಉಪನ್ಯಾಸಗಳಲ್ಲೂ ಪರಿಸರ ಪ್ರಮಾಣವಚನ ಭೋದನೆ,ಮೈಸೂರು ವೈದ್ಯಕೀಯ ಕಾಲೇಜಿಗೆ ತಮ್ಮ ದೇಹದಾನಕ್ಕೆ ಒಪ್ಪಿಗೆ ಪತ್ರ ಸಲ್ಲಿಕೆ ಹಾಗೂ ಮೈಸೂರು ಕೆ .ಆರ್ .ಆಸ್ಪತ್ರೆಗೆ ತಮ್ಮ ನೇತ್ರದಾನಕ್ಕೆ ಒಪ್ಪಿಗೆ ಪತ್ರ ಸಲ್ಲಿಕೆ ಹೀಗೆ ಸಮಾಜದ ಅಭ್ಯುದಯಕ್ಕೆ ಭೇರ್ಯ ರಾಮಕುಮಾರ ಸಲ್ಲಿಸಿರುವ ಅಪೂರ್ವ ಸೇವೆಯನ್ನು ಪರಿಗಣಿಸಿ ಅವರಿಗೆ ತೇಜಸ್ವಿ ಪ್ರಶಸ್ತಿ ನೀಡಿ ಅವರನ್ನು ಸನ್ಮಾನಿಸಲಾಗುವುದು.

ಪೂರ್ಣ ಚಂದ್ರ ತೇಜಸ್ವಿ ಅವರ ಜನ್ಮದಿನವಾದ ಆಗಸ್ಟ್ 8 ರಂದು ನಡೆಯುವ ಸಮಾರಂಭದಲ್ಲಿ ಹಿರಿಯ ಸಾಧಕರು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ ಎಂದು. ಸಂಸ್ಥೆಯ ಪ್ರಕಟಣೆ ತಿಳಿಸಿದೆ

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,